VOLUME: 16 | 22 JULY 2026 | ಮಂಗಳವಾರ | RS: 2 | PAGE: 06 ISSUE: 158 ಇ-ಪೇಪರ್: www.epaperbharathasarathi.com | ಇಮೇಲ್: desk.newsbox@gmail.com

ಕಾಂತಾರ ಬೆಡಗಿ ನಟಿ ಸಪ್ತಮಿ ಗೌಡ ಅವರ ಬಹುಕಾಲದ ಕನಸು ನನಸಾಗಿಗಿದೆ. 'ಕಾಂತಾರ' ಸಿನಿಮಾದಲ್ಲಿ 'ಲೀಲಾ' ಪಾತ್ರದ ಮೂಲಕ ಎಲ್ಲರ ಗಮನ ಸೆಳೆದಿದ್ದ ನಟಿ ಸಪ್ತಮಿ ಗೌಡ ನಿಜ ಜೀವನದಲ್ಲೂ ಮಲೆನಾಡಿನ ಮಡಿಲಿಗೆ ಮರಳಿದ್ದಾರೆ. ಮಲೆನಾಡಿನ ಪ್ರಕೃತಿ ಮಡಿಲಲ್ಲಿ ನಿರ್ಮಿತವಾದ ಕನಸಿನ ಗೂಡಿಗೆ 'ಕಾಜಾಣ' ಎಂದು ಹೆಸರಿಟ್ಟಿದ್ದು ವಿಶೇಷ. 'ಕಾಜಾಣ' ಅನ್ನೋದು ಸಣ್ಣ ಗಾತ್ರದ ಪಕ್ಷಿಯಾಗಿದ್ದು, ಸಮೃದ್ಧಿ ಸೌಂದರ್ಯದ ಸಂಕೇತ ಎನ್ನಲಾಗುತ್ತೆ.



BHARATHA SARATHI
KANNADA DAILY NEWS PAPER
CALL 9740160669

# ಭಾರತ ಸಾರಥಿ

prabhavaa.com
RNI KARKAN2011/44806
ಸದಾ ನಿಮ್ಮೊಂದಿಗೆ ಕನ್ನಡ ದಿನಪತ್ರಿಕೆ



ಸಂಪಾದಕ
ಗಂಡಸಿ ಸದಾನಂದಸ್ವಾಮಿ



# ಬಿಬಿಎಂಪಿ ಅಧಿಕಾರಿಗಳಿಗೆ ಹಿಗ್ಗಾಮುಗ್ಗಾ ಥಳಿತ

ಬೆಂಗಳೂರು: ರಾಜಧಾನಿಯ ಅತ್ಯಂತ ಗಿಜಿಗುಡುವ ಹಾಗೂ ಸೂಕ್ಷ್ಮ ಪ್ರದೇಶವಾಗಿರುವ ಶಿವಾಜಿನಗರದಲ್ಲಿ ಫುಟ್‌ಪಾತ್ ಒತ್ತುವರಿ ತೆರವು ಕಾರ್ಯಾಚರಣೆ ನಡೆಸುತ್ತಿದ್ದ ಜಿಬಿಎ ಅಧಿಕಾರಿಗಳು ಹಾಗೂ ಸಿಬ್ಬಂದಿ ಮೇಲೆ ಪುಂಡರ ಗುಂಪೊಂದು ಹಲ್ಲೆ ನಡೆಸಿದ ಘಟನೆ ನಡೆದಿದೆ.

ಶಿವಾಜಿನಗರ ಬಸ್ ನಿಲ್ದಾಣದ ಬಳಿ ಜಿಬಿಎ ಅಧಿಕಾರಿಗಳು ಬೆಳಗ್ಗೆಯಿಂದ ಫುಟ್‌ಪಾತ್ ಒತ್ತುವರಿ ತೆರವು ಕಾರ್ಯಾಚರಣೆ ನಡೆಸುತ್ತಿದ್ದರು. ಈ ವೇಳೆ ಮಧ್ಯಾಹ್ನ ಸುಮಾರು 12.30ರ ವೇಳೆಗೆ ಇನ್ನೋವಾ
ಕಾರಿನಲ್ಲಿ ಬಂದ ಬಸವರಾಜ್ ಪಡುಕೋಟೆ ಹಾಗೂ ಆತನ ಬೆಂಬಲಿಗರು ಏಕಾಏಕಿ ಅಧಿಕಾರಿಗಳ ಮೇಲೆ ದಾಳಿ ನಡೆಸಿದ್ದಾರೆ ಎಂದು ಆರೋಪಿಸಲಾಗಿದೆ.

ತೆರವು ಕಾರ್ಯಾಚರಣೆಯಲ್ಲಿ ತೊಡಗಿದ್ದ ಸಹಾಯಕ ಕಾರ್ಯಪಾಲಕ ಅಭಿಯಂತರ ಮಾಧವ್ ರಾವ್ ಅವರ ಮೇಲೆ ಕೆಲವರು ಅಟ್ಟಾಡಿಸಿಕೊಂಡು ಹಲ್ಲೆ ನಡೆಸಿದ್ದಾರೆ.

ತಳ್ಳಿದ ಪರಿಣಾಮ ಅಧಿಕಾರಿ ಕೆಳಗೆ ಬಿದ್ದಿದ್ದು, ಬಳಿಕ ಹೆಲ್ಮೆಟ್ ಹಾಗೂ ಪ್ಲಾಸ್ಟಿಕ್



ಕುರ್ಚಿಗಳಿಂದ ಹಲ್ಲೆ ನಡೆಸಲಾಗಿದೆ ಎಂದು ಸಿಬ್ಬಂದಿ ಆರೋಪಿಸಿದ್ದಾರೆ.

ಇದೇ ವೇಳೆ ಮಹಿಳಾ ಅಧಿಕಾರಿಯೊಬ್ಬರ ಮೇಲೂ ದುರ್ವರ್ತನೆ ತೋರಲಾಗಿದೆ ಎಂಬ ಆರೋಪ ಕೇಳಿಬಂದಿದೆ.

'ನಮ್ಮ ಕರ್ನಾಟಕ ಸೇನೆ' ಸಂಘಟನೆಯ ಬಸವರಾಜ್ ಪಡುಕೋಟೆ ಹಾಗೂ ಆತನ ಬೆಂಬಲಿಗರು ಮಹಿಳಾ ಅಧಿಕಾರಿಯ ಮುಖದ ಸಮೀಪ ಬಂದು ಪೆಪ್ಪರ್ ಸ್ಪ್ರೇ ಬಳಸಿ ಆತಂಕದ ವಾತಾವರಣ ಸೃಷ್ಟಿಸಿದ್ದಾರೆ ಎಂದು ಆರೋಪಿಸಲಾಗಿದೆ. "ಮುಖದ ಹತ್ತಿರ ಬಂದು ಪೆಪ್ಪರ್ ಸ್ಪ್ರೇ ಮಾಡಿದರು. ಜೀವಭಯದಿಂದ ನಾವು ಅಲ್ಲಿಂದ ಓಡಿ ಅಡಗಿಕೊಳ್ಳಬೇಕಾಯಿತು. ಕೆಲಸ ಮಾಡಲು ಭಯವಾಗುತ್ತಿದೆ. ನಮಗೆ ತಕ್ಷಣ ಸೂಕ್ತ ಭದ್ರತೆ ಒದಗಿಸಬೇಕು" ಎಂದು ಮಹಿಳಾ ಅಧಿಕಾರಿ ಸಾವಿತ್ರಿ ತಮ್ಮ ಆತಂಕ ವ್ಯಕ್ತಪಡಿಸಿದ್ದಾರೆ.

ಕಾರ್ಯಾಚರಣೆ ವೇಳೆ ಸ್ಥಳದಲ್ಲಿ ನಾಲ್ವರು ಪೊಲೀಸರು ಇದ್ದರೂ ಯಾವುದೇ ಕ್ರಮ ಕೈಗೊಳ್ಳದೆ ವಿಡಿಯೊ ಚಿತ್ರೀಕರಣ ಮಾಡುತ್ತಾ ನಿಂತಿದ್ದರು

> ಕಾರ್ಯಾಚರಣೆ ವೇಳೆ ಸ್ಥಳದಲ್ಲಿ ನಾಲ್ವರು ಪೊಲೀಸರು ಇದ್ದರೂ ಯಾವುದೇ ಕ್ರಮ ಕೈಗೊಳ್ಳದೆ ವಿಡಿಯೊ ಚಿತ್ರೀಕರಣ ಮಾಡುತ್ತಾ ನಿಂತಿದ್ದರು ಎಂಬ ಆರೋಪವನ್ನು ಜಿಬಿಎ ಸಿಬ್ಬಂದಿ ಮಾಡಿದ್ದಾರೆ. ಸೂಕ್ಷ್ಮ ಪ್ರದೇಶದಲ್ಲಿ ಕಾರ್ಯಾಚರಣೆ ನಡೆಸುವ ಸಂದರ್ಭದಲ್ಲಿ ಪೊಲೀಸರು ಹೆಚ್ಚಿನ ಎಚ್ಚರಿಕೆ ವಹಿಸಬೇಕಿತ್ತು ಎಂದು ಸಿಬ್ಬಂದಿ ಆಕ್ರೋಶ ವ್ಯಕ್ತಪಡಿಸಿದ್ದಾರೆ.

ಎಂಬ ಆರೋಪವನ್ನು ಜಿಬಿಎ ಸಿಬ್ಬಂದಿ ಮಾಡಿದ್ದಾರೆ. ಸೂಕ್ಷ್ಮ ಪ್ರದೇಶದಲ್ಲಿ ಕಾರ್ಯಾಚರಣೆ ನಡೆಸುವ ಸಂದರ್ಭದಲ್ಲಿ ಪೊಲೀಸರು ಹೆಚ್ಚಿನ ಎಚ್ಚರಿಕೆ ವಹಿಸಬೇಕಿತ್ತು ಎಂದು ಸಿಬ್ಬಂದಿ ಆಕ್ರೋಶ ವ್ಯಕ್ತಪಡಿಸಿದ್ದಾರೆ.

ಜಿಬಿಎ ನೌಕರರ ಸಂಘದ ಅಧ್ಯಕ್ಷ ಅಮೃತ್ ರಾಜ್ ಮಾತನಾಡಿ, ಬಸವರಾಜ್ ಪಡುಕೋಟೆ ಕನ್ನಡಪರ ಸಂಘಟನೆಯ ಹೆಸರಿನಲ್ಲಿ ಸ್ಥಳೀಯ ವ್ಯಾಪಾರಿಗಳಿಂದ ನಿಯಮಿತವಾಗಿ ಹಣ ವಸೂಲಿ ಮಾಡುತ್ತಿದ್ದ ಎಂದು ಆರೋಪಿಸಿದರು. "ಫುಟ್‌ಪಾತ್ ಒತ್ತುವರಿ ತೆರವುಗೊಂಡರೆ ಆತನ ಅಕ್ರಮ ಹಣ ವಸೂಲಿ ನಿಲ್ಲುತ್ತದೆ ಎಂಬ ಕಾರಣಕ್ಕೆ ಈ ದಾಳಿ ನಡೆಸಲಾಗಿದೆ. ಅಧಿಕಾರಿಗಳ ಮೇಲೆ ನಡೆದಿರುವ ಹಲ್ಲೆ ಖಂಡನೀಯ" ಎಂದು ಅವರು ಆರೋಪಿಸಿದರು. ಘಟನೆಯನ್ನು ಗಂಭೀರವಾಗಿ ಪರಿಗಣಿಸಿರುವ ಜಿಬಿಎ ನೌಕರರ ಸಂಘವು ಬೃಹತ್ ಪ್ರತಿಭಟನೆ ನಡೆಸಲು ನಿರ್ಧರಿಸಿದೆ. "ಮುಖದ ಹತ್ತಿರ ಬಂದು ಪೆಪ್ಪರ್ ಸ್ಪ್ರೇ ಮಾಡಿದರು. ಜೀವಭಯದಿಂದ ನಾವು ಅಲ್ಲಿಂದ ಓಡಿ ಅಡಗಿಕೊಳ್ಳಬೇಕಾಯಿತು. ಕೆಲಸ ಮಾಡಲು ಭಯವಾಗುತ್ತಿದೆ. ನಮಗೆ ತಕ್ಷಣ ಸೂಕ್ತ ಭದ್ರತೆ ಒದಗಿಸಬೇಕು" ಎಂದು ಮಹಿಳಾ ಅಧಿಕಾರಿ ಸಾವಿತ್ರಿ ತಮ್ಮ ಆತಂಕ ವ್ಯಕ್ತಪಡಿಸಿದ್ದಾರೆ.

ಕಾರ್ಯಾಚರಣೆ ವೇಳೆ ಸ್ಥಳದಲ್ಲಿ ನಾಲ್ವರು ಪೊಲೀಸರು ಇದ್ದರೂ ಯಾವುದೇ ಕ್ರಮ ಕೈಗೊಳ್ಳದೆ ವಿಡಿಯೊ ಚಿತ್ರೀಕರಣ ಮಾಡುತ್ತಾ ನಿಂತಿದ್ದರು ಎಂಬ ಆರೋಪವನ್ನು ಜಿಬಿಎ ಸಿಬ್ಬಂದಿ ಮಾಡಿದ್ದಾರೆ.

# ೮ ಕಡೆ ಇಡಿ ದಾಳಿ

ಬೆಂಗಳೂರು: ನಿಷೇಧಿತ ಅಂತರರಾಷ್ಟ್ರೀಯ ಭಯೋತ್ಪಾದಕ ಸಂಘಟನೆ ಐಸಿಸ್‌ಗೆ ಹಣಕಾಸಿನ ನೆರವು ನೀಡಿದ ಹಾಗೂ ಯುವಕರನ್ನು ಮೂಲಭೂತವಾದದತ್ತ ಸೆಳೆದು ಅಕ್ರಮವಾಗಿ ವಿದೇಶಕ್ಕೆ ಕಳುಹಿಸಿದ ಆರೋಪಕ್ಕೆ ಸಂಬಂಧಿಸಿದಂತೆ ಜಾರಿ ನಿರ್ದೇಶನಾಲಯದ ಅಧಿಕಾರಿಗಳು ಮಂಗಳವಾರ ಬೆಂಗಳೂರಿನ ಎಂಟು ಪ್ರಮುಖ ಸ್ಥಳಗಳಲ್ಲಿ ಏಕಕಾಲದಲ್ಲಿ ದಾಳಿ ನಡೆಸಿದ್ದಾರೆ.

ಯುವಕರನ್ನು ಮೂಲಭೂತವಾದಕ್ಕೆ ಒಳಪಡಿಸಿದ ಪ್ರಕರಣಕ್ಕೆ ಸಂಬಂಧಿಸಿದ ಅಕ್ರಮ ಹಣ ವರ್ಗಾವಣೆ ತನಿಖೆಯ ಭಾಗವಾಗಿ ಬೆಂಗಳೂರಿನ ವಿವಿಧೆಡೆ ಶೋಧ ಕಾರ್ಯಾಚರಣೆ ನಡೆಸಲಾಗಿದೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ. ಬೆಂಗಳೂರು ಮತ್ತು ಸುತ್ತಮುತ್ತಲಿನ ಎಂಟು ಸ್ಥಳಗಳಲ್ಲಿ ದಾಳಿ ನಡೆಸಲಾಗಿದ್ದು, ಅಕ್ರಮ ಹಣ ವರ್ಗಾವಣೆ ತಡೆ ಕಾಯ್ದೆಯಡಿ ಈ ಕಾರ್ಯಾಚರಣೆ ಕೈಗೊಳ್ಳಲಾಗಿದೆ ಎಂದು ತಿಳಿದುಬಂದಿದೆ.

ಇಕ್ರಾ ವೆಲ್ಫೇರ್ ಟ್ರಸ್ಟ್, ಗೈಡೆನ್ಸ್ ಫಾರ್ ಮ್ಯಾನ್‌ಕೈಂಡ್ ಹಾಗೂ ಕೆಲವು ವ್ಯಕ್ತಿಗಳಿಗೆ ಸಂಬಂಧಿಸಿದ ಐಸಿಸ್ ನೇಮಕಾತಿ ಪ್ರಕರಣದಲ್ಲಿ ರಾಷ್ಟ್ರೀಯ ತನಿಖಾ ಸಂಸ್ಥೆ ದಾಖಲಿಸಿರುವ ಎಫ್‌ಐಆರ್ ಮತ್ತು ಸಲ್ಲಿಸಿರುವ ಆರೋಪಪಟ್ಟಿಯ ಆಧಾರದ ಮೇಲೆ ಜಾರಿ ನಿರ್ದೇಶನಾಲಯವು ಅಕ್ರಮ ಹಣ ವರ್ಗಾವಣೆ ಪ್ರಕರಣವನ್ನು ಕೈಗೆತ್ತಿಕೊಂಡಿದೆ. ತನಿಖೆಯ ಪ್ರಕಾರ, ಬೆಂಗಳೂರಿನ ಮುಸ್ಲಿಂ ಯುವಕರನ್ನು ಐಸಿಸ್ ಸಿದ್ಧಾಂತದತ್ತ ಸೆಳೆಯಲು 'ಇಕ್ರಾ ಕ್ಯಾಂಪ್' ಹೆಸರಿನಲ್ಲಿ ವ್ಯಕ್ತಿತ್ವ ವಿಕಸನ ಕಾರ್ಯಾಗಾರಗಳನ್ನು ಆಯೋಜಿಸಲಾಗುತ್ತಿತ್ತು ಎನ್ನಲಾಗಿದೆ.

# ತುರ್ತು ನೆರವಿಗೆ ವ್ಯಾಪ್ತಿ ಇರುವುದಿಲ್ಲ

ಬೆಂಗಳೂರು: ನಗರದಲ್ಲಿ ತುರ್ತು ಸಂದರ್ಭಗಳಲ್ಲಿ ಸಾರ್ವಜನಿಕರಿಗೆ ತ್ವರಿತವಾಗಿ ನೆರವು ಒದಗಿಸುವ ನಿಟ್ಟಿನಲ್ಲಿ ಬೆಂಗಳೂರು ಪೊಲೀಸರು ತಮ್ಮ ತುರ್ತು ಸ್ಪಂದನಾ ವ್ಯವಸ್ಥೆಯಲ್ಲಿ ಮಹತ್ವದ ಬದಲಾವಣೆ ತಂದಿದ್ದಾರೆ.

ಇನ್ನು ಮುಂದೆ ಘಟನೆ ನಡೆದ ಸ್ಥಳ ತಮ್ಮ ಪೊಲೀಸ್ ಠಾಣೆಯ ವ್ಯಾಪ್ತಿಗೆ ಬರುವುದಿಲ್ಲ ಎಂಬ ಕಾರಣ ನೀಡಿ ಪೊಲೀಸರು ಸ್ಥಳಕ್ಕೆ ತೆರಳಲು ನಿರಾಕರಿಸುವಂತಿಲ್ಲ. 112 ತುರ್ತು ಸಹಾಯವಾಣಿಗೆ ಕರೆ ಬಂದ ಕೂಡಲೇ, ಗಡಿ ವ್ಯಾಪ್ತಿಯನ್ನು ಲೆಕ್ಕಿಸದೆ ಘಟನಾ ಸ್ಥಳಕ್ಕೆ ಸಮೀಪದಲ್ಲಿರುವ ಪೊಲೀಸ್ ಸಿಬ್ಬಂದಿ ತಕ್ಷಣ ಧಾವಿಸಿ ಅಗತ್ಯ ನೆರವು ನೀಡುವಂತೆ ಸೂಚಿಸಲಾಗಿದೆ.

ಈ ಹಿಂದೆ ಘಟನೆ ತಮ್ಮ ಠಾಣಾ ವ್ಯಾಪ್ತಿಗೆ ಸೇರಿಲ್ಲ ಎಂದು ಹೇಳಿ, ಕರೆ ಮಾಡಿದವರನ್ನು ಮತ್ತೊಂದು ಪೊಲೀಸ್ ಠಾಣೆಯನ್ನು ಸಂಪರ್ಕಿಸುವಂತೆ ಸೂಚಿಸಲಾಗುತ್ತಿತ್ತು. ಇದರಿಂದ ತುರ್ತು ಸಂದರ್ಭಗಳಲ್ಲಿ ಪೊಲೀಸರು ಸ್ಥಳಕ್ಕೆ ತಲುಪುವುದು ವಿಳಂಬವಾಗುತ್ತಿತ್ತು ಎಂಬ ಆರೋಪಗಳು ಕೇಳಿಬಂದಿದ್ದವು. ಈ ವಿಚಾರ ಸಾರ್ವಜನಿಕರಿಂದ ತೀವ್ರ ಟೀಕೆಗೆ ಗುರಿಯಾಗಿದ್ದಲ್ಲದೆ, ಪೊಲೀಸ್ ಇಲಾಖೆಯ ಕಾರ್ಯವೈಖರಿಗೂ ಮುಜುಗರ ತಂದಿತ್ತು.

ಈ ಸಮಸ್ಯೆಗೆ ಪರಿಹಾರ ಕಂಡುಕೊಳ್ಳುವ ಉದ್ದೇಶದಿಂದ ಇದೀಗ ಪೊಲೀಸ್ ಇಲಾಖೆ ಹೊಸ ವ್ಯವಸ್ಥೆಯನ್ನು ಜಾರಿಗೆ ತಂದಿದೆ. ತುರ್ತು ಸಂದರ್ಭದಲ್ಲಿ ಮೊದಲು ಜನರ ಜೀವ ರಕ್ಷಣೆ ಹಾಗೂ ಸಂತ್ರಸ್ತರಿಗೆ ನೆರವು ನೀಡಬೇಕು. ಘಟನೆ ಯಾವ ಠಾಣಾ ವ್ಯಾಪ್ತಿಗೆ ಸೇರಿದೆ ಎಂಬುದನ್ನು ನಂತರ ನಿರ್ಧರಿಸಬಹುದು ಎಂಬ ನೀತಿಯನ್ನು ಅಳವಡಿಸಿಕೊಳ್ಳಲಾಗಿದೆ.



ನೀಟ್ ಪರೀಕ್ಷಾ ಅಕ್ರಮಕ್ಕೆ ಸಂಬಂಧಿಸಿದಂತೆ ಕೇಂದ್ರ ಶಿಕ್ಷಣ ಸಚಿವ ಧರ್ಮೇಂದ್ರ ಪ್ರಧಾನ್ ಅವರ ರಾಜೀನಾಮೆಗೆ ಆಗ್ರಹಿಸಿ ಸೋಮವಾರ ನಡೆದ ಪ್ರತಿಭಟನೆ ವೇಳೆ ವಿದ್ಯಾರ್ಥಿಗಳ ಮೇಲೆ ಪೊಲೀಸ್ ಬಲ ಪ್ರಯೋಗ ಮಾಡಲಾಗಿದೆ ಎಂದು ಆರೋಪಿಸಿ ಕಾಂಗ್ರೆಸ್ ನಾಯಕರು ಮಂಗಳವಾರ ಪ್ರಧಾನಿ ನರೇಂದ್ರ ಮೋದಿ ಅವರ ನಿವಾಸದ ಎದುರು ಧರಣಿ ನಡೆಸಿದರು. ಲೋಕಸಭೆ ವಿರೋಧ ಪಕ್ಷದ ನಾಯಕ ರಾಹುಲ್ ಗಾಂಧಿ ನೇತೃತ್ವದಲ್ಲಿ ದೆಹಲಿಯ ಲೋಕ ಕಲ್ಯಾಣ ಮಾರ್ಗದಲ್ಲಿರುವ ಪ್ರಧಾನಿ ಅಧಿಕೃತ ನಿವಾಸದ ಎದುರು ಕಾಂಗ್ರೆಸ್ ನಾಯಕರು ಪ್ರತಿಭಟನೆ ನಡೆಸಿದರು.

# ಮಕ್ಕಳನ್ನು ಪ್ರಚೋದಿಸಬೇಡಿ: ಮೋದಿ ಮನವಿ

ನವದೆಹಲಿ: ನೀಟ್–ಯುಜಿ 2026 ಪ್ರಶ್ನೆಪತ್ರಿಕೆ ಸೋರಿಕೆ ಪ್ರಕರಣದ ಹಿನ್ನೆಲೆಯಲ್ಲಿ ದೇಶಾದ್ಯಂತ ಪ್ರತಿಭಟನೆಗಳು ನಡೆಯುತ್ತಿರುವ ಬೆನ್ನಲ್ಲೇ, ಪ್ರಧಾನಿ ನರೇಂದ್ರ ಮೋದಿ ಅವರು ಎನ್‌ಡಿಎ ಸಂಸದರಿಗೆ ಮಹತ್ವದ ಸಂದೇಶ ನೀಡಿದ್ದಾರೆ.

ವಿದ್ಯಾರ್ಥಿಗಳು ಮತ್ತು ಯುವಜನರನ್ನು ಪ್ರಚೋದಿಸುವ ಬದಲು ಅವರಿಗೆ ಸರಿಯಾದ ಮಾರ್ಗದರ್ಶನ ನೀಡಿ, ತಪ್ಪು ದಾರಿಗೆ ಹೋಗದಂತೆ ನೋಡಿಕೊಳ್ಳಬೇಕು ಎಂದು ಅವರು ಕರೆ ನೀಡಿದ್ದಾರೆ.

ಮಂಗಳವಾರ ಸಂಸತ್ ಗ್ರಂಥಾಲಯ ಕಟ್ಟಡದ ಜಿಎಂಸಿ ಬಾಲಯೋಗಿ ಸಭಾಂಗಣದಲ್ಲಿ ನಡೆದ ಎನ್‌ಡಿಎ ಸಂಸದೀಯ ಪಕ್ಷದ ಸಭೆಯಲ್ಲಿ ಮಾತನಾಡಿದ ಪ್ರಧಾನಿ ಮೋದಿ, ತಪ್ಪು ದಾರಿಗೆ ಹೋಗುವುದು ಸುಲಭ. ಆದರೆ ಒಮ್ಮೆ ತಪ್ಪು ದಾರಿಗೆ ಹೋದ ಬಳಿಕ ಮತ್ತೆ ಸರಿಯಾದ ಮಾರ್ಗಕ್ಕೆ ಮರಳುವುದು ಕಷ್ಟ. ಹೀಗಾಗಿ ಯುವಜನರನ್ನು ಸರಿಯಾದ ದಾರಿಗೆ ಕರೆತರುವುದು ನಮ್ಮ ಜವಾಬ್ದಾರಿ ಎಂದು ಹೇಳಿದರು. ಯುವಕರನ್ನು ದಾರಿ ತಪ್ಪಿಸುವ ಪ್ರಯತ್ನಗಳು ನಡೆಯುತ್ತಿವೆ ಎಂದು ಕಳವಳ ವ್ಯಕ್ತಪಡಿಸಿದ ಮೋದಿ, ಅವರನ್ನು ಪ್ರಚೋದಿಸುವ ಬದಲು ಸರಿಯಾದ ಮಾರ್ಗದರ್ಶನ ನೀಡಬೇಕು ಎಂದು ಸಂಸದರಿಗೆ ಸಲಹೆ ನೀಡಿದರು. ಮಕ್ಕಳ ಭವಿಷ್ಯವನ್ನು ಗಮನದಲ್ಲಿಟ್ಟುಕೊಂಡು ಅವರಲ್ಲಿ ಆತ್ಮವಿಶ್ವಾಸ ಮೂಡಿಸುವ ಹಾಗೂ ಸೂಕ್ತ ದಾರಿ ತೋರಿಸುವ ಕೆಲಸ ಮಾಡಬೇಕು ಎಂದು ಸೂಚಿಸಿದರು.

ಇದೇ ವೇಳೆ, ದೆಹಲಿಯ ಜಂತರ್ ಮಂತರ್‌ನಲ್ಲಿ ನೀಟ್ ಪರೀಕ್ಷೆಯಲ್ಲಿನ ಅಕ್ರಮಗಳ ವಿರುದ್ಧ ಪ್ರತಿಭಟನೆಗಳು ನಡೆಯುತ್ತಿರುವ ಹಿನ್ನೆಲೆಯಲ್ಲಿ ಕೇಂದ್ರ ಆರೋಗ್ಯ ಸಚಿವ ಜೆ.ಪಿ.ನಡ್ಡಾ ಅವರು ಸೋಮವಾರ ಪ್ರತಿಭಟನಾಕಾರರ ಪ್ರತಿನಿಧಿಗಳೊಂದಿಗೆ ಸಭೆ ನಡೆಸಿದರು. ಸಭೆಯಲ್ಲಿ ನೀಟ್ ಪ್ರಶ್ನೆಪತ್ರಿಕೆ ಸೋರಿಕೆ ಪ್ರಕರಣದ ಬಳಿಕ ಆತ್ಮಹತ್ಯೆ ಮಾಡಿಕೊಂಡಿದ್ದಾರೆ ಎನ್ನಲಾದ ವಿದ್ಯಾರ್ಥಿಗಳ ಕುಟುಂಬಗಳಿಗೆ ಪರಿಹಾರ ನೀಡಬೇಕು.

# ನೀಟ್ ಪ್ರಶ್ನೆಪತ್ರಿಕೆ ಸೋರಿಕೆ: ತಪ್ಪಿತಸ್ಥರಿಗೆ ಕಠಿಣ ಶಿಕ್ಷೆ ಖಚಿತ

ನವದೆಹಲಿ: ನೀಟ್ ಪ್ರಶ್ನೆಪತ್ರಿಕೆ ಸೋರಿಕೆ ಪ್ರಕರಣದ ಬಗ್ಗೆ ಪ್ರಧಾನಿ ನರೇಂದ್ರ ಮೋದಿ ಗಂಭೀರ ಕಳವಳ ವ್ಯಕ್ತಪಡಿಸಿದ್ದು, ಪರೀಕ್ಷಾ ಅಕ್ರಮದಲ್ಲಿ ಭಾಗಿಯಾದ ತಪ್ಪಿತಸ್ಥರಿಗೆ ಕಠಿಣಾತಿಕಠಿಣ ಶಿಕ್ಷೆ ಖಚಿತ ಎಂದು ಹೇಳಿದ್ದಾರೆ.

ಎನ್‌ಡಿಎ ಸಂಸದೀಯ ಪಕ್ಷದ 'ಮಂಗಲ್ ಮಿಲನ್' ಸಭೆಯಲ್ಲಿ ಮಾತನಾಡಿದ ಪ್ರಧಾನಿ ಮೋದಿ, ನೀಟ್ ಪ್ರಶ್ನೆಪತ್ರಿಕೆ ಸೋರಿಕೆ ಪ್ರಕರಣ ಬೆಳಕಿಗೆ ಬಂದ ತಕ್ಷಣವೇ ಸರ್ಕಾರ ತ್ವರಿತವಾಗಿ ಕ್ರಮ ಕೈಗೊಂಡಿದೆ ಎಂದು ತಿಳಿಸಿದ್ದಾರೆ. ತಪ್ಪಿತಸ್ಥರನ್ನು ಬಂಧಿಸಲಾಗಿದ್ದು, ವಿದ್ಯಾರ್ಥಿಗಳ ಭವಿಷ್ಯಕ್ಕೆ ಯಾವುದೇ ತೊಂದರೆಯಾಗದಂತೆ ಯಾವುದೇ ವಿಳಂಬವಿಲ್ಲದೆ ಮರುಪರೀಕ್ಷೆ ನಡೆಸಲಾಗಿದೆ

> ಎನ್‌ಡಿಎ ಸಂಸದೀಯ ಪಕ್ಷದ 'ಮಂಗಲ್ ಮಿಲನ್' ಸಭೆಯಲ್ಲಿ ಮಾತನಾಡಿದ ಪ್ರಧಾನಿ ಮೋದಿ, ನೀಟ್ ಪ್ರಶ್ನೆಪತ್ರಿಕೆ ಸೋರಿಕೆ ಪ್ರಕರಣ ಬೆಳಕಿಗೆ ಬಂದ ತಕ್ಷಣವೇ ಸರ್ಕಾರ ತ್ವರಿತವಾಗಿ ಕ್ರಮ ಕೈಗೊಂಡಿದೆ ಎಂದು ತಿಳಿಸಿದ್ದಾರೆ.

ಎಂದು ಹೇಳಿದ್ದಾರೆ. ಪ್ರಧಾನಿಯವರ ಮಾತುಗಳನ್ನು ಕೇಂದ್ರ ಸಚಿವ ಕಿರಣ್ ರಿಜಿಜು ಮಾಧ್ಯಮಗಳಿಗೆ ವಿವರಿಸಿದ್ದಾರೆ.

ಸ್ಪರ್ಧಾತ್ಮಕ ಪರೀಕ್ಷೆಗಳಲ್ಲಿ ಪ್ರಶ್ನೆಪತ್ರಿಕೆ ಸೋರಿಕೆಯಾಗುವುದನ್ನು ತಡೆಯುವುದು ಹಾಗೂ ಪಾರದರ್ಶಕ ಪರೀಕ್ಷಾ ವ್ಯವಸ್ಥೆಯನ್ನು ರೂಪಿಸುವುದು ಪ್ರತಿಯೊಬ್ಬರ ರಾಷ್ಟ್ರೀಯ ಜವಾಬ್ದಾರಿಯಾಗಿದೆ ಎಂದು ಪ್ರಧಾನಿ ಮೋದಿ ಹೇಳಿದ್ದಾರೆ. ಈ ನಿಟ್ಟಿನಲ್ಲಿ ಅಗತ್ಯ ಶಾಸನಾತ್ಮಕ ಬೆಂಬಲ ನೀಡಲು ಎನ್‌ಡಿಎ ಮೈತ್ರಿಕೂಟದ ಎಲ್ಲ ಪಾಲುದಾರರು ಒಗ್ಗಟ್ಟಿನಿಂದ ಕಾರ್ಯನಿರ್ವಹಿಸಬೇಕು ಎಂದು ಅವರು ಮನವಿ ಮಾಡಿದ್ದಾರೆ. ಸ್ಪರ್ಧಾತ್ಮಕ ಪರೀಕ್ಷೆಗಳಲ್ಲಿ ಪ್ರಶ್ನೆಪತ್ರಿಕೆ ಸೋರಿಕೆಯಾಗುವುದನ್ನು ತಡೆಯುವುದು ಹಾಗೂ ಪಾರದರ್ಶಕ ಪರೀಕ್ಷಾ ವ್ಯವಸ್ಥೆಯನ್ನು ರೂಪಿಸುವುದು ಪ್ರತಿಯೊಬ್ಬರ ರಾಷ್ಟ್ರೀಯ ಜವಾಬ್ದಾರಿಯಾಗಿದೆ ಎಂದು ಪ್ರಧಾನಿ ಮೋದಿ ಹೇಳಿದ್ದಾರೆ. ಈ ನಿಟ್ಟಿನಲ್ಲಿ ಅಗತ್ಯ ಶಾಸನಾತ್ಮಕ ಬೆಂಬಲ ನೀಡಲು ಎನ್‌ಡಿಎ ಮೈತ್ರಿಕೂಟದ ಎಲ್ಲ ಪಾಲುದಾರರು ಒಗ್ಗಟ್ಟಿನಿಂದ ಕಾರ್ಯನಿರ್ವಹಿಸಬೇಕು ಎಂದು ಅವರು ಮನವಿ ಮಾಡಿದ್ದಾರೆ.

ರಾಜಕೀಯ ಭಿನ್ನಾಭಿಪ್ರಾಯಗಳು ಏನೇ ಇದ್ದರೂ, ದೇಶದ ಯುವಜನರ ಹಿತ ಹಾಗೂ ಅವರ ಭವಿಷ್ಯವನ್ನು ಗಮನದಲ್ಲಿಟ್ಟುಕೊಂಡು ಎಲ್ಲ ಸಂಸದರು ಸಂಸತ್ತಿನಲ್ಲಿ ರಚನಾತ್ಮಕವಾಗಿ ಪಕ್ಷಗಳಿಗೂ ಮನವಿ ಮಾಡಿದ್ದಾರೆ. ಪರೀಕ್ಷಾ ಅಕ್ರಮಗಳಿಂದ ವಿದ್ಯಾರ್ಥಿಗಳ ಭವಿಷ್ಯಕ್ಕೆ ಧಕ್ಕೆಯಾಗದಂತೆ ಕಠಿಣ ಕ್ರಮ ಕೈಗೊಳ್ಳುವುದು ಸರ್ಕಾರದ ಪ್ರಮುಖ ಆದ್ಯತೆಯಾಗಿದೆ ಎಂದು ಅವರು ಸ್ಪಷ್ಟಪಡಿಸಿದ್ದಾರೆ. ರಾಜಕೀಯ ಭಿನ್ನಾಭಿಪ್ರಾಯಗಳು ಏನೇ ಇದ್ದರೂ, ದೇಶದ ಯುವಜನರ ಹಿತ ಹಾಗೂ ಅವರ ಭವಿಷ್ಯವನ್ನು ಗಮನದಲ್ಲಿಟ್ಟುಕೊಂಡು ಎಲ್ಲ ಸಂಸದರು ಸಂಸತ್ತಿನಲ್ಲಿ ರಚನಾತ್ಮಕವಾಗಿ ಕಾರ್ಯನಿರ್ವಹಿಸಬೇಕು ಎಂದು ಪ್ರಧಾನಿ ಮೋದಿ ವಿರೋಧ ಪಕ್ಷಗಳಿಗೂ ಮನವಿ ಮಾಡಿದ್ದಾರೆ.

# ಸಚಿವ ಸಂಪುಟ ವಿಸ್ತರಣೆಗೆ ಹೈಕಮಾಂಡ್ ತೀರ್ಮಾನವೇ ಅಂತಿಮ; ಸಿಎಂ

ನವದೆಹಲಿ: ಕಾಂಗ್ರೆಸ್ ಪಕ್ಷದಲ್ಲಿ ಹೈಕಮಾಂಡ್ ತೀರ್ಮಾನವೇ ಅಂತಿಮವಾಗಿದ್ದು, ಸಚಿವ ಸಂಪುಟ ವಿಸ್ತರಣೆ ಕುರಿತು ಪಕ್ಷದ ವರಿಷ್ಠರು ರಾಜ್ಯ ನಾಯಕರ ಅಭಿಪ್ರಾಯ ಪಡೆದು ನಿರ್ಧಾರ ಕೈಗೊಳ್ಳಲಿದ್ದಾರೆ ಎಂದು ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ತಿಳಿಸಿದ್ದಾರೆ.

ನವದೆಹಲಿಯ ಕರ್ನಾಟಕ ಭವನದಲ್ಲಿ ಮಾಧ್ಯಮಗಳೊಂದಿಗೆ ಮಾತನಾಡಿದ ಅವರು, ಸಚಿವ ಸಂಪುಟ ವಿಸ್ತರಣೆ ಮಾಡಿ ಬುಧವಾರ ನೂತನ ಸಚಿವರ ಪ್ರಮಾಣವಚನ ಕಾರ್ಯಕ್ರಮ ನಡೆಸಲು ರಾಜ್ಯಪಾಲರ ಅನುಮತಿ ಪಡೆಯಲಾಗಿತ್ತು. ಆದರೆ ಮಂಗಳವಾರ ನಿಗದಿಯಾಗಿದ್ದ ಸಭೆ ಕಾರಣಾಂತರಗಳಿಂದ ನಡೆಯಲಿಲ್ಲ. ಹೈಕಮಾಂಡ್ ನಾಯಕರು ರಾಜ್ಯ ನಾಯಕರ ಅಭಿಪ್ರಾಯ ಪಡೆದು ಹೊಸ ಮುಖಗಳು, ಜಿಲ್ಲೆ ಹಾಗೂ ಪ್ರಾಂತ್ಯವಾರು ಸಮತೋಲನ ಸೇರಿದಂತೆ ಹಲವು ಅಂಶಗಳನ್ನು ಪರಿಗಣಿಸಿ ಸಚಿವರ ಆಯ್ಕೆ ಮಾಡಲಿದ್ದಾರೆ ಎಂದು ಹೇಳಿದರು.

ಕಾಂಗ್ರೆಸ್ ಪಕ್ಷದಲ್ಲಿ ಹೈಕಮಾಂಡ್ ಸುಪ್ರೀಂ. ನಮ್ಮ ಅಭಿಪ್ರಾಯ ಪಡೆದು ಅಂತಿಮ ತೀರ್ಮಾನ ಕೈಗೊಳ್ಳುತ್ತಾರೆ. ಈ ಹಿಂದೆಯೂ ಸಿದ್ದರಾಮಯ್ಯ ಅವರ ಸರ್ಕಾರದ ಅವಧಿಯಲ್ಲಿ ಇದೇ ರೀತಿಯ ಪ್ರಕ್ರಿಯೆ ನಡೆದಿತ್ತು. ರಾಹುಲ್ ಗಾಂಧಿ, ಮಲ್ಲಿಕಾರ್ಜುನ ಖರ್ಗೆ, ಸಿದ್ದರಾಮಯ್ಯ ಹಾಗೂ ಹರಿಪ್ರಸಾದ್ ಸೇರಿದಂತೆ ಪ್ರಮುಖ ನಾಯಕರು ಸೇರಿ ಚರ್ಚೆ ನಡೆಸಿ ನಿರ್ಧಾರ ಕೈಗೊಂಡಿದ್ದರು ಎಂದು ಶಿವಕುಮಾರ್ ತಿಳಿಸಿದರು.

ಸಚಿವ ಸಂಪುಟ ವಿಸ್ತರಣೆಯಲ್ಲಿ ಅಚ್ಚರಿಯ ಅಂಶಗಳಿವೆಯೇ ಎಂಬ ಪ್ರಶ್ನೆಗೆ ಪ್ರತಿಕ್ರಿಯಿಸಿದ ಅವರು, ಕಾಂಗ್ರೆಸ್ ಪಕ್ಷಕ್ಕೆ ಒಳ್ಳೆಯದಾಗುವುದಾದರೆ ಏನು ಬೇಕಾದರೂ ಮಾಡಬೇಕಾಗುತ್ತದೆ ಎಂದು ಹೇಳಿದರು.



ಸಚಿವ ಸಂಪುಟ ವಿಸ್ತರಣೆ ಕುರಿತು ಮಾಧ್ಯಮಗಳ ಮುಂದೆ ಎಲ್ಲವನ್ನೂ ಚರ್ಚಿಸಲು ಸಾಧ್ಯವಿಲ್ಲ ಎಂದ ಅವರು, ಈ ಹಿಂದೆ ಶಾಸಕರಾಗಿರದವರನ್ನೂ ಸಚಿವರನ್ನಾಗಿ ಮಾಡಲಾಗಿದೆ. ಮಾಧ್ಯಮ ಕ್ಷೇತ್ರದವರಿಗೂ ವಿಧಾನ ಪರಿಷತ್ ಸದಸ್ಯತ್ವ ಹಾಗೂ ಸಂಸತ್ ಸ್ಥಾನ ನೀಡಿರುವ ಉದಾಹರಣೆಗಳಿವೆ ಎಂದು ತಿಳಿಸಿದರು.

ರಾಜ್ಯದಲ್ಲಿ ಖಾಲಿ ಇರುವ ಸಚಿವ ಸ್ಥಾನಗಳನ್ನು ಭರ್ತಿ ಮಾಡುವ ಬಯಕೆ ತಮಗಿದೆ ಎಂದು ಮುಖ್ಯಮಂತ್ರಿ ಸ್ಪಷ್ಟಪಡಿಸಿದರು. ಎಲ್ಲಾ 20 ಸ್ಥಾನಗಳನ್ನು ಭರ್ತಿ ಮಾಡುತ್ತೀರಾ ಎಂಬ ಪ್ರಶ್ನೆಗೆ ಉತ್ತರಿಸಿದ ಅವರು, ಎಲ್ಲ ಸ್ಥಾನಗಳನ್ನು ತುಂಬಲು ತಾನು ಬಯಸುತ್ತೇನೆ. ಸಚಿವ ಸ್ಥಾನಗಳನ್ನು ಖಾಲಿ ಇಟ್ಟುಕೊಳ್ಳುವುದರಲ್ಲಿ ಯಾವುದೇ ಅರ್ಥವಿಲ್ಲ. ಇದರೊಂದಿಗೆ ಮುಖ್ಯ ಸಚೇತಕ, ವಿಧಾನ ಪರಿಷತ್ ಸಭಾಪತಿ ಹಾಗೂ ವಿಧಾನಸಭೆ ಸ್ಪೀಕರ್ ಸ್ಥಾನಗಳನ್ನೂ ಭರ್ತಿ ಮಾಡಬೇಕಿದೆ ಎಂದು ಹೇಳಿದರು.

ಸಚಿವ ಸಂಪುಟ ವಿಸ್ತರಣೆ ವಿಚಾರವನ್ನು ಮತ್ತಷ್ಟು ಮುಂದೂಡುವುದು ತಮಗೂ ಇಷ್ಟವಿಲ್ಲ. ಅವಕಾಶ ದೊರೆತರೆ ಇಂದೇ ಸಚಿವರ ಪಟ್ಟಿಯನ್ನು ಅಂತಿಮಗೊಳಿಸಲು ತಾನು ಸಿದ್ಧನಿದ್ದೇನೆ ಎಂದು ಡಿ.ಕೆ. ಶಿವಕುಮಾರ್ ಹೇಳಿದರು. ತಾನು ಸೋಮವಾರವೇ ದೆಹಲಿಗೆ ಬರಬೇಕಾಗಿತ್ತು. ಆದರೆ ಹಾಸನದಲ್ಲಿ ಕರ್ತವ್ಯ ನಿರ್ವಹಿಸಬೇಕಿದ್ದ ಹಿನ್ನೆಲೆಯಲ್ಲಿ ಮಂಗಳವಾರ ದೆಹಲಿಗೆ ಬಂದಿದ್ದೇನೆ. ಮಂಗಳವಾರ ರಾತ್ರಿ ಸಭೆ ನಡೆಸುವ ನಿರ್ಧಾರವಾಗಿತ್ತು. ಆದರೆ ಪ್ರತಿಭಟನೆಯ ಸಂದರ್ಭದಲ್ಲಿ ಕಾಂಗ್ರೆಸ್ ನಾಯಕರನ್ನು ಬಂಧಿಸಲಾಗಿದ್ದು, ಅವರು ದೆಹಲಿಗೆ ಮರಳಿದ ಬಳಿಕ ಸಚಿವ ಸಂಪುಟ ವಿಸ್ತರಣೆ ಕುರಿತು ಚರ್ಚೆ ನಡೆಸಲಾಗುವುದು ಎಂದು ತಿಳಿಸಿದರು.

ಇದೇ ವೇಳೆ ವಿದ್ಯಾರ್ಥಿಗಳ ಹೋರಾಟದ ವಿಚಾರವಾಗಿ ಮಾತನಾಡಿದ ಶಿವಕುಮಾರ್, ವಿದ್ಯಾರ್ಥಿಗಳ ಭಾವನೆಗಳಿಗೆ ಕಾಂಗ್ರೆಸ್ ಸ್ಪಂದಿಸಿದೆ ಎಂದು ಹೇಳಿದರು. ವಿದ್ಯಾರ್ಥಿಗಳಿಗೆ ನ್ಯಾಯ ದೊರೆಯಬೇಕು ಹಾಗೂ ಸಂಬಂಧಪಟ್ಟ ಕೇಂದ್ರ ಸಚಿವರು ರಾಜೀನಾಮೆ ನೀಡಬೇಕು ಎಂದು ಒತ್ತಾಯಿಸಿದರು. ಪ್ರತಿಭಟನೆಯ ವೇಳೆ ವಿದ್ಯಾರ್ಥಿಗಳ ಮೇಲೆ ಪ್ರಾಣಿಗಳಿಗಿಂತಲೂ ಕೀಳಾಗಿ ವರ್ತಿಸಲಾಗಿದೆ ಎಂದು ಆರೋಪಿಸಿದ ಅವರು, ಮಹಿಳಾ ಸಂಸದರನ್ನು ಸಹ ಅಸಭ್ಯವಾಗಿ ನಡೆಸಿಕೊಳ್ಳಲಾಗಿದೆ ಎಂದು ದೂರಿದರು.

ಸಚಿವ ಸಂಪುಟ ವಿಸ್ತರಣೆಯ ಕುರಿತು ಹೈಕಮಾಂಡ್ ಮಟ್ಟದಲ್ಲಿ ಅಂತಿಮ ಚರ್ಚೆ ನಡೆಯಬೇಕಿರುವ ಹಿನ್ನೆಲೆಯಲ್ಲಿ ನೂತನ ಸಚಿವರ ಪ್ರಮಾಣವಚನ ಕಾರ್ಯಕ್ರಮದ ದಿನಾಂಕದ ಬಗ್ಗೆ ಇನ್ನೂ ಸ್ಪಷ್ಟತೆ ಮೂಡಿಲ್ಲ. ಕಾಂಗ್ರೆಸ್ ವರಿಷ್ಠರ ಸಭೆಯ ಬಳಿಕವೇ ಸಚಿವರ ಆಯ್ಕೆ ಹಾಗೂ ಪ್ರಮಾಣವಚನ ಕಾರ್ಯಕ್ರಮದ ಕುರಿತು ಅಂತಿಮ ನಿರ್ಧಾರ ಹೊರಬೀಳುವ ಸಾಧ್ಯತೆಯಿದೆ.

ಭಾರತ ಸಾರಥಿ
BHARATHA SARATHI KANNADA DAILY NEWS PAPER
22/07/2026
ಬೆಂಗಳೂರು | ಬೆಂ.ಗ್ರಾಮಾಂತರ | ತುಮಕೂರು | ಮೈಸೂರು | ಮಂಡ್ಯ | ರಾಮನಗರ | ಕೋಲಾರ | ಚಿಕ್ಕಬಳ್ಳಾಪುರ | ಚಿತ್ರದುರ್ಗ | ದಾವಣಗೆರೆ | ಶಿವಮೊಗ್ಗ | ಮಂಗಳೂರು | ಉಡುಪಿ | ಹುಬ್ಬಳ್ಳಿ | ಮಡಿಕೇರಿ | ಚಿಕ್ಕಮಗಳೂರು | ಹಾಸನ | ಬಳ್ಳಾರಿ
ಇ:ಪೇಪರ್: www.epaperbharathasarathi.com | ಇಮೇಲ್: desk.newsbox@gmail.com

# ಸಾಮಾಜಿಕ ಪ್ರಭಾವ ಕ್ಷೇತ್ರದ ಭವಿಷ್ಯ ಕುರಿತು ಅರ್ಥಪೂರ್ಣ ಚರ್ಚೆ

ಬೆಂಗಳೂರು

ಸಾಮಾಜಿಕ ಪ್ರಭಾವ ಕ್ಷೇತ್ರದಲ್ಲಿ ನಾಯಕತ್ವ ಮತ್ತು ಸಂಸ್ಥೆಗಳನ್ನು ಬಲಪಡಿಸುವ ಕಾರ್ಯದಲ್ಲಿ ಹತ್ತು ವರ್ಷಗಳನ್ನು ಪೂರೈಸಿರುವ ಅರ್ಥನ್ ಸಂಸ್ಥೆಯು, "ಜನರ ನಾಯಕತ್ವದ ಮುಂದಿನ ದಶಕವನ್ನು ದೃಗ್ಗೋಚರವಾಗುವಂತೆ ಮಾಡುವ" ಪರಿಕಲ್ಪನೆಯಡಿ 'ಜನರ ನಾಯಕತ್ವ ಶೃಂಗ–2026'ರ ಬೆಂಗಳೂರು ಆವೃತ್ತಿಯನ್ನು ಯಶಸ್ವಿಯಾಗಿ ಆಯೋಜಿಸಿತು.



ಕಳೆದ ಒಂದು ದಶಕದಲ್ಲಿ ಅರ್ಥನ್ ಸಂಸ್ಥೆಯು 1,800ಕ್ಕೂ ಹೆಚ್ಚು ನಾಯಕತ್ವದ ಹುದ್ದೆಗಳ ನೇಮಕಾತಿಗೆ ನೆರವಾಗಿದ್ದು, 60ಕ್ಕೂ ಹೆಚ್ಚು ಸಾಂಸ್ಥಿಕ ಅಭಿವೃದ್ಧಿ ಯೋಜನೆಗಳನ್ನು ಕೈಗೊಂಡಿದೆ. ಜೊತೆಗೆ ವಿವಿಧ ಸಂವಾದಗಳು ಮತ್ತು ಕಾರ್ಯಕ್ರಮಗಳ ಮೂಲಕ 1,200ಕ್ಕೂ ಹೆಚ್ಚು ಸಂಸ್ಥಾಪಕರು, ಹಿರಿಯ ನಾಯಕರು ಹಾಗೂ ವೃತ್ತಿಪರರನ್ನು ಒಂದೇ ವೇದಿಕೆಗೆ ಕರೆತಂದು ನಾಯಕತ್ವ ಅಭಿವೃದ್ಧಿಗೆ ಕೊಡುಗೆ ನೀಡಿದೆ.

ಬೆಂಗಳೂರುದಲ್ಲಿ ನಡೆದ ಈ ಶೃಂಗಸಭೆಯಲ್ಲಿ ಸಾಮಾಜಿಕ ಪ್ರಭಾವ ಕ್ಷೇತ್ರದ ಸಂಸ್ಥಾಪಕರು, ಮುಖ್ಯ ಕಾರ್ಯನಿರ್ವ ಹಣಾಧಿಕಾರಿಗಳು, ಮಾನವ ಸಂಪನ್ಮೂಲ ವಿಭಾಗದ ಮುಖ್ಯಸ್ಥರು ಹಾಗೂ ಸಾಂಸ್ಥಿಕ ಅಭಿವೃದ್ಧಿ ತಜ್ಞರು ಭಾಗವಹಿಸಿದರು. ಕೃತಕ ಬುದ್ಧಿಮತ್ತೆ ಆಧಾರಿತ ಭವಿಷ್ಯಕ್ಕೆ ಸಂಸ್ಥೆಗಳು ಹೇಗೆ ಸಜ್ಜಾಗಬೇಕು, ನಾಯಕತ್ವ, ಪ್ರತಿಭೆ ಹಾಗೂ ಸಾಂಸ್ಥಿಕ ಅಭಿವೃದ್ಧಿಯನ್ನು ಯಾವ ರೀತಿಯಲ್ಲಿ ಬಲಪಡಿಸಬೇಕು ಎಂಬ ವಿಷಯಗಳ ಕುರಿತು ವಿಸ್ತೃತ ಚರ್ಚೆ ನಡೆಯಿತು.

ಈ ವರ್ಷದ ಆರಂಭದಲ್ಲಿ ದೆಹಲಿಯಲ್ಲಿ ನಡೆದ ಆವೃತ್ತಿಯ ಯಶಸ್ಸಿನ ಬಳಿಕ, ಬೆಂಗಳೂರು ಶೃಂಗಸಭೆಯು ಸಹ ಸಾಮಾಜಿಕ ಪ್ರಭಾವ ಕ್ಷೇತ್ರದ ನಾಯಕರಿಗೆ ಅನುಭವ ಹಂಚಿಕೆ, ವಿಚಾರ ವಿನಿಮಯ ಮತ್ತು ಭವಿಷ್ಯದ ನಾಯಕತ್ವದ ದಿಕ್ಕನ್ನು ರೂಪಿಸುವ ವೇದಿಕೆಯಾಗಿತು.

ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದ ಅರ್ಥನ್ ಸಹ–ಸಂಸ್ಥಾಪಕ ರಾಹುಲ್ ಬಾಲಕೃಷ್ಣನ್, ಕಳೆದ ಹತ್ತು ವರ್ಷಗಳಲ್ಲಿ ಸಾಮಾಜಿಕ ಧ್ಯೇಯೋದ್ದೇಶದ ಸಂಸ್ಥೆಗಳೊಂದಿಗೆ ಕೆಲಸ ಮಾಡಿದ ಅನುಭವವನ್ನು ಹಂಚಿಕೊಂಡರು. ಪ್ರತಿಭಾವಂತ ವ್ಯಕ್ತಿಗಳನ್ನು ನೇಮಕ ಮಾಡಿಕೊಳ್ಳಲು ಸಂಸ್ಥೆಗಳು ಹೆಚ್ಚಿನ ಒತ್ತು ನೀಡುತ್ತವೆ. ಆದರೆ ಅವರು ಯಶಸ್ವಿಯಾಗಿ ಕಾರ್ಯನಿರ್ವಹಿಸಲು ಅಗತ್ಯವಾದ ಆಂತರಿಕ ವ್ಯವಸ್ಥೆಗಳನ್ನು ನಿರ್ಮಿಸುವಲ್ಲಿ ಸಾಕಷ್ಟು ಗಮನ ಹರಿಸುವುದಿಲ್ಲ ಎಂದು ಅವರು ಅಭಿಪ್ರಾಯಪಟ್ಟರು.

# ಆರು ಹೊಸ ತಂತ್ರಜ್ಞಾನ ಆಧಾರಿತ ಉತ್ಪನ್ನಗಳ ಬಿಡುಗಡೆ

ಹುಬ್ಬಳ್ಳಿ

ಖಾರಿಫ್ 2026 ಬೆಳೆ ಹಂಗಾಮಿಗೆ ರೈತರ ಅಗತ್ಯಗಳನ್ನು ಗಮನದಲ್ಲಿಟ್ಟುಕೊಂಡು ಕ್ರಿಸ್ಟಲ್ ಕ್ರಾಪ್ ಪ್ರೊಟೆಕ್ಷನ್ ಲಿಮಿಟೆಡ್ ಆರು ಹೊಸ ತಲೆಮಾರಿನ ಕೃಷಿ ನಾವೀನ್ಯತೆಗಳನ್ನು ಬಿಡುಗಡೆ ಮಾಡಿದೆ. ಕೀಟಗಳ ಹೆಚ್ಚುತ್ತಿರುವ ಹಾವಳಿ, ಅನಿರೀಕ್ಷಿತ ಹವಾಮಾನ ವೈಪರೀತ್ಯ ಹಾಗೂ ಬೆಳೆಗಳಲ್ಲಿ ಕಾಣಿಸಿಕೊಳ್ಳುತ್ತಿರುವ ಹೊಸ ರೋಗಗಳ ಸವಾಲುಗಳನ್ನು ಎದುರಿಸಲು ಈ ಉತ್ಪನ್ನಗಳನ್ನು ಅಭಿವೃದ್ಧಿಪಡಿಸಲಾಗಿದೆ ಎಂದು ಸಂಸ್ಥೆ ತಿಳಿಸಿದೆ.




ವ್ಯಾಪಕ ಸಂಶೋಧನೆ, ಕ್ಷೇತ್ರಮಟ್ಟದ ಪರೀಕ್ಷೆಗಳು ಹಾಗೂ ರೈತ–ಕೇಂದ್ರಿತ ಉತ್ಪನ್ನ ಅಭಿವೃದ್ಧಿಯ ಮೂಲಕ ರೂಪುಗೊಂಡಿರುವ ಈ ಹೊಸ ಉತ್ಪನ್ನಗಳು, ವಿಜ್ಞಾನ ಆಧಾರಿತ ಪರಿಹಾರಗಳ ಮೂಲಕ ರೈತರ ಉತ್ಪಾದಕತೆ ಮತ್ತು ಆದಾಯವನ್ನು ಹೆಚ್ಚಿಸುವ ಸಂಸ್ಥೆಯ ಬದ್ಧತೆಯನ್ನು ಮತ್ತಷ್ಟು ಬಲಪಡಿಸುತ್ತವೆ.


ಸೋಯಾಬೀನ್ ಬೆಳೆಗಳ ಕಳೆ ನಿರ್ವಹಣೆಯಲ್ಲಿ ತನ್ನ ನಾಯಕತ್ವವನ್ನು ಮತ್ತಷ್ಟು ವಿಸ್ತರಿಸುವ ಉದ್ದೇಶದಿಂದ ಸಂಸ್ಥೆಯು 'ಸಮೋರಿಯನ್' ಎಂಬ ಹೊಸ ಕಳೆನಾಶಕವನ್ನು ಪರಿಚಯಿಸಿದೆ. ಇದು ಹುಲ್ಲು ಹಾಗೂ ಅಗಲ ಎಲೆಗಳ ಕಳೆಗಳನ್ನು ಪರಿಣಾಮಕಾರಿಯಾಗಿ ನಿಯಂತ್ರಿಸುವ ಪೇಟೆಂಟ್ ಪಡೆದ ಮೂರು ಹಂತದ ಕಾರ್ಯವಿಧಾನವನ್ನು ಒಳಗೊಂಡಿದೆ.

ಇದರ ಜೊತೆಗೆ ಮೆಕ್ಕೆಜೋಳ ಬೆಳೆಗಳಲ್ಲಿ ಕಂಡುಬರುವ ಸಂಕೀರ್ಣ ಕಳೆ ಸಮಸ್ಯೆಗಳಿಗೆ ಪರಿಹಾರವಾಗಿ 'ಟಕುರೊ' ಎಂಬ ಪೇಟೆಂಟ್ ಪಡೆದ ಸಂಯೋಜಿತ ಕಳೆನಾಶಕವನ್ನು ಬಿಡುಗಡೆ ಮಾಡಲಾಗಿದೆ. ಇದು ತ್ವರಿತವಾಗಿ ಕಾರ್ಯನಿರ್ವಹಿಸುವ ವ್ಯವಸ್ಥಿತ ಕ್ರಿಯೆಯೊಂದಿಗೆ ದೀರ್ಘಕಾಲೀನ ಕಳೆ ನಿಯಂತ್ರಣವನ್ನು ಒದಗಿಸುವ ಮೂರು ಹಂತದ ತಂತ್ರಜ್ಞಾನವನ್ನು ಹೊಂದಿದೆ. ಈ ಎರಡೂ ಉತ್ಪನ್ನಗಳು ಬೆಳೆಗಳಿಗೆ ಕಳೆಗಳ ಸ್ಪರ್ಧೆಯನ್ನು ಕಡಿಮೆ ಮಾಡಿ ಉತ್ತಮ ಬೆಳವಣಿಗೆ ಹಾಗೂ ಇಳುವರಿಗೆ ನೆರವಾಗಲಿವೆ ಎಂದು ಸಂಸ್ಥೆ ತಿಳಿಸಿದೆ. ಭತ್ತದ ಬೆಳೆಗಳ ರೋಗ ನಿರ್ವಹಣೆಯನ್ನು ಮತ್ತಷ್ಟು ಬಲಪಡಿಸುವ ಉದ್ದೇಶದಿಂದ ಸಂಸ್ಥೆಯು 'ಕ್ಸೆಬೇರಿಯಾ' ಎಂಬ ಹೊಸ ಶಿಲೀಂಧ್ರನಾಶಕವನ್ನು ಪರಿಚಯಿಸಿದೆ. ಇದು ಶಿಲೀಂಧ್ರ ಹಾಗೂ ಬ್ಯಾಕ್ಟೀರಿಯಾ ಸೋಂಕುಗಳ ವಿರುದ್ಧ ಬಹು ಹಂತದ ರಕ್ಷಣೆಯನ್ನು ಒದಗಿಸುತ್ತದೆ.

# ವಿಶ್ವದ ಮೊದಲ ರೊಬೋಟ್ ನೆರವಿನ ತ್ರಿವಳಿ ಶಸ್ತ್ರಚಿಕಿತ್ಸೆ ಯಶಸ್ವಿ

ಮೈಸೂರು

ವೈದ್ಯಕೀಯ ಕ್ಷೇತ್ರದಲ್ಲಿ ಮಹತ್ವದ ಸಾಧನೆಯೊಂದನ್ನು ದಾಖಲಿಸಿರುವ ಫೋರ್ಟಿಸ್ ಆಸ್ಪತ್ರೆ, 81 ವರ್ಷದ ವೃದ್ಧ ರೋಗಿಗೆ ಒಂದೇ ಅರಿವಳಿಕೆಯಲ್ಲಿ ರೊಬೋಟ್ ನೆರವಿನಿಂದ ಹೃದಯ ಬೈಪಾಸ್, ತೊಡೆಸಂದು ಹರ್ನಿಯಾ ಹಾಗೂ ಸುನ್ನತಿ ಶಸ್ತ್ರಚಿಕಿತ್ಸೆಗಳನ್ನು ಯಶಸ್ವಿಯಾಗಿ ನೆರವೇರಿಸಿದೆ. ಆಸ್ಪತ್ರೆಯ ಪ್ರಕಾರ, ವಿಶ್ವದಲ್ಲೇ ಮೊದಲ ಬಾರಿಗೆ ಇಂತಹ ರೊಬೋಟ್ ನೆರವಿನ ತ್ರಿವಳಿ ಶಸ್ತ್ರಚಿಕಿತ್ಸೆ ಯಶಸ್ವಿಯಾಗಿ ನಡೆದಿರುವುದು ವಿಶೇಷ.



ಮೈಸೂರಿನ 81 ವರ್ಷದ ರೋಗಿಯೊಬ್ಬರು ತೊಡೆಸಂದು ಹರ್ನಿಯಾ ಸಮಸ್ಯೆಗೆ ಚಿಕಿತ್ಸೆ ಪಡೆಯಲು ಆಸ್ಪತ್ರೆಗೆ ದಾಖಲಾಗಿದ್ದರು. ಶಸ್ತ್ರಚಿಕಿತ್ಸೆಗೆ ಮುನ್ನ ನಡೆಸಿದ ಸಮಗ್ರ ವೈದ್ಯಕೀಯ ತಪಾಸಣೆಯಲ್ಲಿ, ಹೃದಯದ ಮೂರು ಪ್ರಮುಖ ಅಪಧಮನಿಗಳಲ್ಲಿ ತೀವ್ರ ಅಡಚಣೆ ಕಂಡುಬಂದಿದ್ದು, ಅವರಿಗೆ ತುರ್ತು ಕೊರೊನರಿ ಆರ್ಟರಿ ಬೈಪಾಸ್ ಗ್ರಾಫ್ಟ್ (ಸಿಎಬಿಜಿ) ಶಸ್ತ್ರಚಿಕಿತ್ಸೆ ಅಗತ್ಯವಿರುವುದು ವೈದ್ಯರಿಗೆ ತಿಳಿದುಬಂತು. ಇದೇ ವೇಳೆ ರೋಗಿಗೆ ಫೈಮೊಸಿಸ್ ಸಮಸ್ಯೆಯೂ ಇರುವುದನ್ನು ಗುರುತಿಸಲಾಯಿತು.

ರೋಗಿಯ ವಯಸ್ಸು ಮತ್ತು ಆರೋಗ್ಯ ಸ್ಥಿತಿಯನ್ನು ಗಮನದಲ್ಲಿಟ್ಟುಕೊಂಡು, ಮೂರು ಪ್ರತ್ಯೇಕ ಶಸ್ತ್ರಚಿಕಿತ್ಸೆಗಳನ್ನು ಬೇರೆ ಬೇರೆ ಸಮಯದಲ್ಲಿ ನಡೆಸುವುದಕ್ಕಿಂತ ಒಂದೇ ಅರಿವಳಿಕೆಯಲ್ಲಿ ಎಲ್ಲ ಶಸ್ತ್ರಚಿಕಿತ್ಸೆಗಳನ್ನು ಪೂರ್ಣಗೊಳಿಸುವ ಮಹತ್ವದ ನಿರ್ಧಾರವನ್ನು ವಿವಿಧ ವಿಭಾಗಗಳ ತಜ್ಞ ವೈದ್ಯರ ತಂಡ ಕೈಗೊಂಡಿತು.

# ಗಿಡ ನೆಡುವ ಕಾರ್ಯಕ್ರಮ ಕೇವಲ ದಾಖಲೆಗಳಿಗೆ ಸೀಮಿತವಾಗಬಾರದು: ಸಚಿವ ಕೃಷ್ಣ ಬೈರೇಗೌಡ

ಬೆಂಗಳೂರು

ನಗರದಲ್ಲಿ ಗಿಡ ನೆಡುವ ಕಾರ್ಯಕ್ರಮಗಳು ಕೇವಲ ದಾಖಲೆ ಅಥವಾ ಕಾಗದದ ಮೇಲಿನ ಯೋಜನೆಗಳಾಗದೆ, ನೈಜವಾಗಿ ಗಿಡಗಳನ್ನು ನೆಟ್ಟು ಅವುಗಳನ್ನು ಸಂರಕ್ಷಿಸಿ ಬೆಳೆಸುವ ನಿಟ್ಟಿನಲ್ಲಿ ಪರಿಣಾಮಕಾರಿಯಾಗಿ ಕಾರ್ಯನಿರ್ವಹಿಸಬೇಕು ಎಂದು ಗ್ರೇಟರ್ ಬೆಂಗಳೂರು ಅಭಿವೃದ್ಧಿ ಸಚಿವ ಕೃಷ್ಣ ಬೈರೇಗೌಡ ಅಧಿಕಾರಿಗಳಿಗೆ ಸೂಚಿಸಿದ್ದಾರೆ.

ನಗರದ ಜಿಬಿಎ ಅರಣ್ಯ ವಿಭಾಗದಿಂದ ಸಸಿನೆಡುವ ಕಾರ್ಯಕ್ರಮಕ್ಕೆ ಸಂಬಂಧಿಸಿದಂತೆ ಸೋಮವಾರ ನಡೆದ ಸಭೆಯಲ್ಲಿ ಮಾತನಾಡಿದ ಅವರು, ಬೆಂಗಳೂರು ಹಸಿರೀಕರಣಕ್ಕೆ ಹೆಚ್ಚಿನ ಆದ್ಯತೆ ನೀಡಲಾಗುತ್ತಿದ್ದು, ಆಗಸ್ಟ್ 15ರಿಂದ ಸೆಪ್ಟೆಂಬರ್ 15ರವರೆಗೆ "ಬೆಂಗಳೂರು ಹಸಿರೂರು ಅಭಿಯಾನ" ನಡೆಸಲಾಗುವುದು ಎಂದು ತಿಳಿಸಿದರು.

ಪ್ರಸಕ್ತ ಸಾಲಿನಲ್ಲಿ ಪಾಲಿಕೆ ವತಿಯಿಂದ 64 ಸಾವಿರ ಸಸಿಗಳನ್ನು ನೆಡುವ ಹಾಗೂ 40 ಸಾವಿರ ಸಸಿಗಳನ್ನು ಸಾರ್ವಜನಿಕರಿಗೆ ವಿತರಿಸುವ ಗುರಿ ಹೊಂದಲಾಗಿದೆ. ಇದಕ್ಕಾಗಿ ಅಗತ್ಯ ಸಿದ್ಧತೆಗಳನ್ನು ಪೂರ್ಣಗೊಳಿಸಿ ಪರಿಣಾಮಕಾರಿ ಅನುಷ್ಠಾನಕ್ಕೆ ಕ್ರಮ ಕೈಗೊಳ್ಳುವಂತೆ ಅಧಿಕಾರಿಗಳಿಗೆ ಸೂಚಿಸಲಾಗಿದೆ ಎಂದರು.

ನಗರದಲ್ಲಿ ಈ ಹಿಂದೆ ನೆಡಲಾಗಿರುವ ಸಸಿಗಳ ಸಮರ್ಪಕ ದಾಖಲೆ ಹಾಗೂ ನಿರ್ವಹಣೆಯ ಕೊರತೆ



ಕಂಡು ಬಂದಿದೆ. ಮುಂದಿನ ದಿನಗಳಲ್ಲಿ ಇಂತಹ ಸಮಸ್ಯೆಗಳು ಮರುಕಳಿಸದಂತೆ ಪ್ರತಿಯೊಂದು ಸಸಿಯ ನೆಡುವಿಕೆ ಮತ್ತು ನಿರ್ವಹಣೆಯ ಕುರಿತು ನಿಖರವಾದ ಮಾಹಿತಿ ಸಂಗ್ರಹಿಸಬೇಕು ಎಂದು ಹೇಳಿದರು.

"ಹೆಚ್ಚಿನ ಸಂಖ್ಯೆಯಲ್ಲಿ ಸಸಿಗಳನ್ನು ನೆಟ್ಟು ಅವುಗಳನ್ನು ಉತ್ತಮವಾಗಿ ಬೆಳೆಸಿದರೆ ನಗರದ ತಾಪಮಾನ ಕಡಿಮೆ ಮಾಡುವುದರ ಜೊತೆಗೆ ವಾಯುಮಾಲಿನ್ಯ ನಿಯಂತ್ರಣಕ್ಕೂ ಸಹಕಾರಿಯಾಗಲಿದೆ. ಇದರಿಂದ ಬೆಂಗಳೂರಿನ ಸೌಂದರ್ಯ ಹಾಗೂ ಪರಿಸರ ಸಮತೋಲನವೂ ಸುಧಾರಿಸಲಿದೆ" ಎಂದು ಕೃಷ್ಣ ಬೈರೇಗೌಡ ತಿಳಿಸಿದರು.

ಸಾರ್ವಜನಿಕರ ಸಹಭಾಗಿತ್ವದಲ್ಲಿ ಸಸಿ ನೆಡುವ ಉದ್ದೇಶದಿಂದ ಪಬ್ಲಿಕ್–ಪ್ರೈವೇಟ್ ಪ್ಲಾಂಟಿಂಗ್ ಕಾರ್ಯಕ್ರಮದ ಮೂಲಕ ಅಭಿಯಾನ ನಡೆಸಲು ಸೂಚಿಸಲಾಗಿದೆ. ನಾಗರಿಕರು, ಸಂಘ ಸಂಸ್ಥೆಗಳು ಹಾಗೂ ಖಾಸಗಿ ವಲಯದ ಸಹಕಾರದೊಂದಿಗೆ ನೆಟ್ಟ ಸಸಿಗಳು ಉತ್ತಮವಾಗಿ ಬೆಳೆಯಲು ಸಾಧ್ಯವಾಗುತ್ತದೆ ಎಂದು ಅವರು ಹೇಳಿದರು.

ಈ ಬಾರಿ ಗುಣಮಟ್ಟವಿಲ್ಲದ ಅಥವಾ ಬದುಕುಳಿಯುವ ಸಾಧ್ಯತೆ ಕಡಿಮೆ ಇರುವ ಸಸಿಗಳನ್ನು ನೆಡಬಾರದು. ಮಹಾಗನಿ, ಟಬೆಬಿಯಾ ರೋಸಿಯಾ, ಹೊಂಗೆ, ಬೇವು, ನೇರಳೆ ಸೇರಿದಂತೆ ಉತ್ತಮ ಗುಣಮಟ್ಟದ ಮರಗಳನ್ನೇ ಆಯ್ಕೆ ಮಾಡಿ ನೆಡಲಾಗುವುದು ಎಂದು ಸಚಿವರು ತಿಳಿಸಿದರು.

ಪ್ರತಿಕಾ ಗೋಷ್ಠಿಯಲ್ಲಿ ಜಿಬಿಎ ಮುಖ್ಯ ಆಯುಕ್ತರಾಗಿ ಎಂ. ಮಹೇಶ್ವರ ರಾವ್ ಪ್ರಸಕ್ತ ಸಾಲಿನಲ್ಲಿ 64 ಸಾವಿರ ಸಸಿಗಳನ್ನು ನೆಡುವ ಗುರಿ ಹೊಂದಲಾಗಿದ್ದು, ಸಸಿ ನೆಟ್ಟ ಬಳಿಕ ಮೂರು ವರ್ಷಗಳ ನಿರ್ವಹಣೆ ಸೇರಿದಂತೆ ಒಟ್ಟು 9.64 ಕೋಟಿ ರೂ. ಅನುದಾನವನ್ನು ಐದು ನಗರ ಪಾಲಿಕೆಗಳ ಆಯವ್ಯಯದಲ್ಲಿ ಮೀಸಲಿಡಲಾಗಿದೆ.

ಸಸಿಗಳನ್ನು ಯಶಸ್ವಿಯಾಗಿ ನೆಟ್ಟು, ಅವುಗಳ ನಿರ್ವಹಣೆ ಸಮರ್ಪಕವಾಗಿ ನಡೆದಿರುವುದನ್ನು ಆಧರಿಸಿ ಅನುದಾನ ಬಿಡುಗಡೆ ಮಾಡಲಾಗುವುದು ಎಂದು ಸಚಿವರು ತಿಳಿಸಿದರು.

ಬೆಂಗಳೂರು ಹಸಿರೀಕರಣಕ್ಕಾಗಿ ಕೈಗೊಳ್ಳುತ್ತಿರುವ ಈ ಅಭಿಯಾನದಲ್ಲಿ ಸಾರ್ವಜನಿಕರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸುವಂತೆ ಅವರು ಮನವಿ ಮಾಡಿದರು.

# ತಿಪಟೂರಿನಲ್ಲಿ ಸಾವಿರಾರು ಪ್ರೇಕ್ಷಕರ ಮನಗೆದ್ದ ನಾಟಕ

ತಿಪಟೂರು

ನಗರದ ಸರ್ಕಾರಿ ಬಾಲಕರ ಪ್ರೌಢಶಾಲಾ ಆವರಣದಲ್ಲಿ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಹಯೋಗದಲ್ಲಿ, ಶ್ರೀವಿಘ್ನೇಶ್ವರ ಕಲಾಕೃಪಾ ಪೋಷಿತ ಮಹಿಳಾ ನಾಟಕ ಮಂಡಳಿ ಮತ್ತು ತಾಲೂಕು ಪಂಚಾಯಿತಿಯ ಎನ್.ಆರ್.ಎಲ್.ಎಂ ಮಹಿಳಾ ಸಿಬ್ಬಂದಿ ಅಭಿನಯಿಸಿದ್ದ ಕುರುಕ್ಷೇತ್ರ ಅಥವಾ ಧರ್ಮರಾಜ್ಯ ಸ್ಥಾಪನೆ ಪೌರಾಣಿಕ ನಾಟಕವು ಸಾವಿರಾರು ಸಂಖ್ಯೆಯ ಪ್ರೇಕ್ಷಕರ ಮತ್ತು ರಂಗಾಸಕ್ತರ ಮನಸೂರೆಗೊಂಡು, ಭಾರೀ ಪ್ರಶಂಸೆಗೆ ಪಾತ್ರವಾಯಿತು.

ಸಂಪೂರ್ಣವಾಗಿ ಮಹಿಳಾ ಕಲಾವಿದರೆ ಮಹಾ ಭಾರತದ ಪ್ರಮುಖ ಪಾತ್ರಗಳನ್ನು ನಿರ್ವಹಿಸಿದ್ದು, ನಾಟಕದ ವಿಶೇಷತೆಯಾಗಿತ್ತು. ಶ್ರೀ ಕೃಷ್ಣನ ಪಾತ್ರದಲ್ಲಿ ಚಂದ್ರಕಲಾ ಮತ್ತು ಶೋಭಾ, ದುರ್ಯೋಧನಾಗಿ ನೇತ್ರಾವತಿ ಮತ್ತು ರೇಖಾ,ಧರ್ಮರಾಯನಾಗಿ ಮಹದೇವಮ್ಮ, ಭೀಮನಾಗಿ ಲುಬೀನಾ ಬಾನು, ಅರ್ಜುನನಾಗಿ ಕವಿತಾ, ಕರ್ಣನಾಗಿ ವಿದ್ಯಾಶ್ರೀ, ಅಭಿಮನ್ಯುವಾಗಿ ನಾಗವೇಣಿ ಹಾಗೂ ಬಲರಾಮನಾಗಿ ಮಮತಾ ಸೇರಿದಂತೆ ಕಲಾವಿದರು ತಮ್ಮ ಅದ್ಭುತ ಅಭಿನಯದ ಮೂಲಕ ಪ್ರೇಕ್ಷಕರ ಮೆಚ್ಚುಗೆ ಗಳಿಸಿದರು.

ವಿಶೇಷವಾಗಿ ದುರ್ಯೋಧನನ ಪಾತ್ರದ ಆರ್ಭಟದ ಅಭಿನಯಕ್ಕೆ ಪ್ರೇಕ್ಷಕರಿಂದ ಸಿಳ್ಳೆ, ಚಪ್ಪಾಳೆಗಳ ಸುರಿಮಳೆಯೇ ಸುರಿಯಿತು. ಭಾವಪೂರ್ಣ ಸಂಭಾಷಣೆ, ರಂಗಸಜ್ಜಿಕೆ ಹಾಗೂ ಪಾತ್ರಧಾರಿಗಳ ನೈಜ ಅಭಿನಯ ನಾಟಕದ ಯಶಸ್ಸಿಗೆ ಮೆರುಗು ತಂದಿತು.

ಈ ಪೌರಾಣಿಕ ನಾಟಕಕ್ಕೆ ಜಿ.ಎಲ್.ಮಹೇಶ್ ಮತ್ತು ಟಿ.ಎಚ್.ಬಸವರಾಜು ನಿರ್ದೇಶನ ನೀಡಿದ್ದು, ಅಚ್ಚುಕಟ್ಟಾಗಿ ಸೊಗಸಾಗಿ ನಾಟಕ ಪ್ರದರ್ಶನ ಮೂಡಿ ಬಂದಿತು. ನಾಟಕ ಪ್ರದರ್ಶನದ ಉದ್ಘಾಟನೆಯನ್ನು ನೆರವೇರಿಸಿ ಮಾತನಾಡಿದ, ತಾಪಂ ಕಾರ್ಯ ನಿರ್ವಹಣಾಧಿಕಾರಿ ಸುದರ್ಶನ್, ಮಹಿಳಾ ಸ್ವಸಹಾಯ ಸಂಘದ ಸದಸ್ಯರು ಹಾಗೂ ತಾಪಂ ಮಹಿಳಾ ನೌಕರರು ನಾಟಕ ಕಲಿತು, ಅಭಿನಯಿಸುತ್ತಿರುವುದಕ್ಕೆ ಬೆಂಬಲಿಸಿ, ಉತ್ತೇಜನ ನೀಡಿ ಹುರಿದುಂಬಿಸಿದರು.

ಹಿರಿಯ ರಂಗಭೂಮಿ ಕಲಾವಿದ ಬಸವರಾಜು ಮತ್ತು ಕಲ್ಪಶ್ರೀ ಕಲಾವಿದರ ಸಂಘದ ಅಧ್ಯಕ್ಷ ಕುಮಾರ ಸ್ವಾಮಿಯವರಿಗೆ ಕಲಾ ಬಳಗದಿಂದ ಬೆಳ್ಳಿ ಕಿರೀಟ ಧಾರಣೆ ನೆರವೇರಿತು.

# ಕರ್ನಾಟಕದಲ್ಲಿ ಸೌರಶಕ್ತಿ ಆರೋಗ್ಯ ಕೇಂದ್ರಗಳ ಸ್ಥಾಪನೆ

ಬೆಂಗಳೂರು

ಜಾಗತಿಕ ಸವಾಲುಗಳಿಗೆ ನವೀನ ಪರಿಹಾರಗಳನ್ನು ಉತ್ತೇಜಿಸುವ ಯುನೈಟೆಡ್ ಅರಬ್ ಎಮಿರೇಟ್ಸ್‌ನ ಪ್ರತಿಷ್ಠಿತ ಜಾಯೆದ್ ಸಸ್ಟೈನಬಿಲಿಟಿ ಪ್ರಶಸ್ತಿಯ 'ಬಿಯಾಂಡ್ 2020' ಉಪಕ್ರಮದಡಿ, ಕರ್ನಾಟಕದ ಗ್ರಾಮೀಣ ಪ್ರದೇಶಗಳಲ್ಲಿ ಆರು ಸೌರಶಕ್ತಿ ಆಧಾರಿತ ಆರೋಗ್ಯ ಕೇಂದ್ರಗಳನ್ನು ಸ್ಥಾಪಿಸಲಾಗಿದ್ದು, ಇದರಿಂದ 2 ಲಕ್ಷಕ್ಕೂ ಹೆಚ್ಚು ಜನರಿಗೆ ವಿಶ್ವಾಸಾರ್ಹ ಆರೋಗ್ಯ ಸೇವೆಗಳ ಪ್ರವೇಶ ಸುಲಭವಾಗಿದೆ.

ಗ್ರಾಮೀಣ ಹಾಗೂ ದೂರದ ಪ್ರದೇಶಗಳಲ್ಲಿ ಆರೋಗ್ಯ ಸೇವೆಗಳನ್ನು ಬಲಪಡಿಸುವ ಉದ್ದೇಶದಿಂದ ಸ್ಥಾಪಿಸಲಾದ ಈ ಕೇಂದ್ರಗಳು, ಇಂಧನ–ಸಮರ್ಥ ವೈದ್ಯಕೀಯ ತಂತ್ರಜ್ಞಾನವನ್ನು ಹೊಂದಿದ್ದು, ನಿರಂತರ ವಿದ್ಯುತ್ ಪೂರೈಕೆ ಇಲ್ಲದ ಪ್ರದೇಶಗಳಲ್ಲಿಯೂ ಆರೋಗ್ಯ ಸೇವೆಗಳನ್ನು ಪರಿಣಾಮಕಾರಿಯಾಗಿ ಒದಗಿಸುವ ಸಾಮರ್ಥ್ಯ ಹೊಂದಿವೆ. ಇದರ



ಪರಿಣಾಮವಾಗಿ, ಗ್ರಾಮೀಣ ಭಾಗದ ಜನರು ಚಿಕಿತ್ಸೆಗಾಗಿ ದೂರದ ನಗರಗಳಿಗೆ ತೆರಳುವ ಅಗತ್ಯವೂ ಕಡಿಮೆಯಾಗಿದೆ.

ಈ ಯೋಜನೆಯನ್ನು ಭಾರತದಲ್ಲಿ ಸೆಲ್ಕೊ ಫೌಂಡೇಶನ್ ಜಾರಿಗೊಳಿಸಿದೆ. 2018ರಲ್ಲಿ ಜಾಯೆದ್ ಸಸ್ಟೈನಬಿಲಿಟಿ ಪ್ರಶಸ್ತಿ ಪಡೆದಿದ್ದ ಈ ಸಂಸ್ಥೆಯು, ಸುಸ್ಥಿರ ಇಂಧನದ ಮೂಲಕ ಬಡತನ ನಿರ್ಮೂಲನೆ ಮತ್ತು ಪರಿಸರ ಸಂರಕ್ಷಣೆಗೆ ಕೆಲಸ ಮಾಡುತ್ತಿರುವ ಪ್ರಮುಖ ಲಾಭರಹಿತ ಸಂಸ್ಥೆಯಾಗಿದೆ.

# ಇಂಡೋ–ಎಮ್‌ಐಎಮ್ ಲಿಮಿಟೆಡ್ ಐಪಿಓ ಜುಲೈ 23ರಿಂದ ಆರಂಭ

ಬೆಂಗಳೂರು

ಇಂಡೋ–ಎಮ್‌ಐಎಮ್ ಲಿಮಿಟೆಡ್ ತನ್ನ ಆರಂಭಿಕ ಸಾರ್ವಜನಿಕ ಷೇರು ಮಾರಾಟ (ಐಪಿಓ) ವನ್ನು 2026ರ ಜುಲೈ 23ರ ಗುರುವಾರ ಆರಂಭಿಸಲಿದೆ. ಕಂಪನಿಯು ತಲಾ ರೂ.1 ಮುಖಬೆಲೆಯ ಈಕ್ವಿಟಿ ಷೇರಿಗೆ ರೂ.461ರಿಂದ ರೂ.485ರವರೆಗೆ ಬೆಲೆ ಶ್ರೇಣಿಯನ್ನು ನಿಗದಿಪಡಿಸಿದೆ.

ಆಂಕರ್ ಹೂಡಿಕೆದಾರರ ಬಿಡ್ಡಿಂಗ್ ಪ್ರಕ್ರಿಯೆ ಜುಲೈ 22ರ ಬುಧವಾರ ನಡೆಯಲಿದ್ದು, ಸಾರ್ವಜನಿಕ ಹೂಡಿಕೆದಾರರಿಗೆ ಬಿಡ್ ಸಲ್ಲಿಸುವ ಅವಕಾಶ ಜುಲೈ 23ರಿಂದ ಆರಂಭವಾಗಿ ಜುಲೈ 27ರ ಸೋಮವಾರ ಮುಕ್ತಾಯಗೊಳ್ಳಲಿದೆ. ಬಿಡ್ ಸಲ್ಲಿಸುವ ಕೊನೆಯ ದಿನವಾದ ಜುಲೈ 27ರಂದು ಸಂಜೆ 5 ಗಂಟೆಗೆ ಯುಪಿಐ ಮ್ಯಾಂಡೇಟ್‌ಗೆ ಅವಕಾಶ ಕೊನೆಗೊಳ್ಳುತ್ತದೆ.

ಹೂಡಿಕೆದಾರರು ಕನಿಷ್ಠ 30 ಈಕ್ವಿಟಿ ಷೇರುಗಳಿಗೆ ಅರ್ಜಿ ಸಲ್ಲಿಸಬಹುದಾಗಿದ್ದು, ನಂತರ 30 ಷೇರುಗಳ ಗುಣಕಗಳಲ್ಲಿ ಹೆಚ್ಚುವರಿ ಬಿಡ್ ಸಲ್ಲಿಸಲು ಅವಕಾಶ ಕಲ್ಪಿಸಲಾಗಿದೆ.

ಈ ಐಪಿಓದಲ್ಲಿ ರೂ.5,000 ಮಿಲಿಯನ್ ಮೊತ್ತದ ಹೊಸ ಈಕ್ವಿಟಿ ಷೇರುಗಳ ಬಿಡುಗಡೆ (ತಾಜಾ ಸಂಚಿಕೆ) ಜೊತೆಗೆ, ಹಾಲಿ ಷೇರುದಾರರು ಹೊಂದಿರುವ ಗರಿಷ್ಠ 6,82,91,022 ಈಕ್ವಿಟಿ ಷೇರುಗಳ ಮಾರಾಟ (ಆಫರ್ ಫಾರ್ ಸೇಲ್) ಕೂಡ ಒಳಗೊಂಡಿದೆ.

ಕಂಪನಿಯು ಈ ಐಪಿಓ ಮೂಲಕ ಸಂಗ್ರಹವಾಗುವ ನಿಧಿಯನ್ನು ತನ್ನ ಬೆಳವಣಿಗೆ ಯೋಜನೆಗಳು, ವ್ಯವಹಾರ ವಿಸ್ತರಣೆ ಹಾಗೂ ಇತರೆ ಸಾಂಸ್ಥಿಕ ಉದ್ದೇಶಗಳಿಗಾಗಿ ಬಳಸುವ ನಿರೀಕ್ಷೆಯಿದೆ.

ಹೂಡಿಕೆದಾರರು ಕಂಪನಿಯ ಕರಡು ಹಾಗೂ ಅಂತಿಮ ಪ್ರಾಸ್ಪೆಕ್ಟಸ್‌ನಲ್ಲಿರುವ ಅಪಾಯದ ಅಂಶಗಳು, ಆರ್ಥಿಕ ವಿವರಗಳು ಮತ್ತು ಹೂಡಿಕೆ ಸಂಬಂಧಿತ ಮಾಹಿತಿಯನ್ನು ಪರಿಶೀಲಿಸಿ ನಿರ್ಧಾರ ಕೈಗೊಳ್ಳುವಂತೆ ಮಾರುಕಟ್ಟೆ ತಜ್ಞರು ಸಲಹೆ ನೀಡಿದ್ದಾರೆ.

# ಚಿತ್ರದುರ್ಗದಲ್ಲಿ ಉಚಿತ ಆರೋಗ್ಯ ಶಿಬಿರ

ಚಿತ್ರದುರ್ಗ

ದೇಶದಿಂದ ಕ್ಷಯರೋಗ (ಟಿಬಿ)ವನ್ನು ಸಂಪೂರ್ಣ ನಿರ್ಮೂಲನೆ ಮಾಡುವ ಕೇಂದ್ರ ಸರ್ಕಾರದ ಮಹತ್ವಾಕಾಂಕ್ಷೆಯ ಪ್ರಧಾನಮಂತ್ರಿ ಟಿಬಿ ಮುಕ್ತ ಭಾರತ ಅಭಿಯಾನಕ್ಕೆ ವೇದಾಂತ ಐರನ್ ಓರ್ ಕರ್ನಾಟಕ (ಐಓಕೆ) ಸಂಸ್ಥೆ ಕೈಜೋಡಿಸಿದೆ. ಭಾರತೀಯ ಗಣಿ ಬ್ಯೂರೋ ಆಶ್ರಯದಲ್ಲಿ ಸಂಸ್ಥೆಯ ಆವರಣದಲ್ಲಿ ಟಿಬಿ ಕುರಿತು ಜಾಗೃತಿ ಮೂಡಿಸುವ ಹಾಗೂ ಆರೋಗ್ಯ ತಪಾಸಣೆಗೆ ಉತ್ತೇಜನ ನೀಡುವ ವಿವಿಧ ಕಾರ್ಯಕ್ರಮಗಳನ್ನು ಯಶಸ್ವಿಯಾಗಿ ಆಯೋಜಿಸಲಾಯಿತು.

ಅಭಿಯಾನದ ಅಂಗವಾಗಿ, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ಸಹಯೋಗದಲ್ಲಿ




ವಿಶೇಷ ಆಯುಷ್ಮಾನ್ ಆರೋಗ್ಯ ಶಿಬಿರ ಹಾಗೂ ಟಿಬಿ ತಪಾಸಣಾ ಶಿಬಿರವನ್ನು ಹಮ್ಮಿಕೊಳ್ಳಲಾಯಿತು. ಜಿಲ್ಲಾ ಟಿಬಿ ನೋಡಲ್ ಅಧಿಕಾರಿ ಡಾ. ಸುಧಾ ಸಿ.ಓ. ಮುಖ್ಯ ಅತಿಥಿಯಾಗಿ ಭಾಗವಹಿಸಿದ್ದರು. ಭೀಮಸಮುದ್ರದ ವೈದ್ಯಾಧಿಕಾರಿ ಡಾ. ಕಾವ್ಯ, ಜಿಲ್ಲಾ ಆರೋಗ್ಯ ಇಲಾಖೆಯ ವೈದ್ಯಕೀಯ ಸಿಬ್ಬಂದಿ, ವೇದಾಂತ ಸಂಸ್ಥೆಯ ಹಿರಿಯ ಅಧಿಕಾರಿಗಳು, ಕಾರ್ಮಿಕರು ಹಾಗೂ ಉದ್ಯೋಗಿ ಪಾಲುದಾರರು ಕಾರ್ಯಕ್ರಮದಲ್ಲಿ ಉಪಸ್ಥಿತರಿದ್ದರು.

ಶಿಬಿರದಲ್ಲಿ ನೂರಾರು ಜನರಿಗೆ ಉಚಿತ ಆರೋಗ್ಯ ತಪಾಸಣೆ ನಡೆಸಿ, ಟಿಬಿ ರೋಗದ ಲಕ್ಷಣಗಳು, ತಡೆಗಟ್ಟುವ ಕ್ರಮಗಳು ಹಾಗೂ ಸಮಯಕ್ಕೆ ಸರಿಯಾಗಿ ಚಿಕಿತ್ಸೆ ಪಡೆಯುವ ಮಹತ್ವದ ಕುರಿತು ಅರಿವು ಮೂಡಿಸಲಾಯಿತು. ಜೊತೆಗೆ ಸಾರ್ವಜನಿಕರಿಗೆ ಮಾಹಿತಿ ಪತ್ರಿಕೆಗಳನ್ನು ವಿತರಿಸಿ ಆರೋಗ್ಯ ಜಾಗೃತಿ ಹೆಚ್ಚಿಸುವ ಪ್ರಯತ್ನ ಮಾಡಲಾಯಿತು.

# ವಿಶ್ವ ಸೀಳುತುಟಿ ಜಾಗೃತಿ ದಿನ: ದೇಶದಲ್ಲಿ 8 ಲಕ್ಷಕ್ಕೂ ಅಧಿಕ ಉಚಿತ ಶಸ್ತ್ರಚಿಕಿತ್ಸೆ

ಬೆಂಗಳೂರು

ವಿಶ್ವ ಸೀಳುತುಟಿ ಜಾಗೃತಿ ದಿನದ ಅಂಗವಾಗಿ ಸ್ಮೈಲ್ ಟ್ರೈನ್ ಇಂಡಿಯಾ ಸಂಸ್ಥೆ ದೇಶದ ಶಸ್ತ್ರಚಿಕಿತ್ಸಾ ಕ್ಷೇತ್ರದಲ್ಲಿ ಮಹತ್ವದ ಮೈಲಿಗಲ್ಲು ಸಾಧಿಸಿದೆ. ಸಂಸ್ಥೆಯು 2000ರಿಂದ ದೇಶಾದ್ಯಂತ 8 ಲಕ್ಷಕ್ಕೂ ಅಧಿಕ ಉಚಿತ ಸೀಳುತುಟಿ ಮತ್ತು ಸೀಳುಅಂಗುಳಿ ಶಸ್ತ್ರಚಿಕಿತ್ಸೆಗಳನ್ನು ಯಶಸ್ವಿಯಾಗಿ ನಡೆಸಿದ್ದು, ಕರ್ನಾಟಕದಲ್ಲಿ ತನ್ನ 7 ಪಾಲುದಾರ ಆಸ್ಪತ್ರೆಗಳ ಮೂಲಕ ಇದುವರೆಗೆ 47,500ಕ್ಕೂ ಹೆಚ್ಚು ಮಕ್ಕಳಿಗೆ ಉಚಿತ ಶಸ್ತ್ರಚಿಕಿತ್ಸೆ ನೆರವೇರಿಸಿ ಹೊಸ ಬದುಕು ನೀಡಿದೆ.

ಈ ಸಾಧನೆಯೊಂದಿಗೆ, ಸಂಸ್ಥೆಯು ಕೇವಲ ಶಸ್ತ್ರಚಿಕಿತ್ಸೆಗೆ ಸೀಮಿತವಾಗದೆ, ಸೀಳುತುಟಿ ಸಮಸ್ಯೆಯನ್ನು ಆರಂಭಿಕ ಹಂತದಲ್ಲೇ ಪತ್ತೆಹಚ್ಚುವುದು, ಪೋಷಕರಲ್ಲಿ ಅರಿವು ಮೂಡಿಸುವುದು ಹಾಗೂ ಸಕಾಲಿಕ ಚಿಕಿತ್ಸೆಗೆ ಉತ್ತೇಜನ ನೀಡುವುದಕ್ಕೆ ಹೆಚ್ಚಿನ ಆದ್ಯತೆ ನೀಡುತ್ತಿದೆ.

ಪ್ರತಿ ವರ್ಷ ಜುಲೈ 20ರಂದು ಆಚರಿಸಲಾಗುವ ವಿಶ್ವ ಸೀಳುತುಟಿ ಜಾಗೃತಿ ದಿನವನ್ನು ಸೀಳುತುಟಿ ಮತ್ತು ಸೀಳುಅಂಗುಳಿ ಸಮಸ್ಯೆಯನ್ನು ಸಾರ್ವಜನಿಕ ಆರೋಗ್ಯದ ಪ್ರಮುಖ ಚರ್ಚೆಯ ವಿಷಯವನ್ನಾಗಿಸುವ ಉದ್ದೇಶದಿಂದ ಸ್ಮೈಲ್ ಟ್ರೈನ್ 2025ರಲ್ಲಿ ಆರಂಭಿಸಿತ್ತು. ಈ ದಿನದ ಮೂಲಕ ಪ್ರತಿಯೊಂದು ಮಗುವಿಗೂ ಯಾವುದೇ ತಾರತಮ್ಯವಿಲ್ಲದೆ ಸಕಾಲದಲ್ಲಿ ಸಮಗ್ರ ಚಿಕಿತ್ಸೆ ದೊರೆಯುವಂತೆ ಸಮಾಜದಲ್ಲಿ ಜಾಗೃತಿ ಮೂಡಿಸಲು ಸಂಸ್ಥೆ ನಿರಂತರವಾಗಿ ಕಾರ್ಯನಿರ್ವಹಿಸುತ್ತಿದೆ.

ಭಾರತದಲ್ಲಿ ಪ್ರತಿವರ್ಷ ಸುಮಾರು 35,000



ಮಕ್ಕಳು ಸೀಳುತುಟಿ ಅಥವಾ ಸೀಳುಅಂಗುಳಿ ಸಮಸ್ಯೆಯೊಂದಿಗೆ ಜನಿಸುತ್ತಾರೆ. ಆದರೆ ಸಮಾಜದಲ್ಲಿರುವ ಮೂಢನಂಬಿಕೆಗಳು, ತಪ್ಪು ಕಲ್ಪನೆಗಳು ಹಾಗೂ ಸಾಮಾಜಿಕ ಕಳಂಕದ ಕಾರಣದಿಂದ ಅನೇಕ ಪೋಷಕರು ಮಕ್ಕಳಿಗೆ ಸಮಯಕ್ಕೆ ಸರಿಯಾಗಿ ಚಿಕಿತ್ಸೆ ನೀಡಲು ಹಿಂದೇಟು ಹಾಕುತ್ತಿದ್ದಾರೆ. ಇದರಿಂದ ಮಕ್ಕಳಲ್ಲಿ ಹಾಲುಣಿಸುವ ತೊಂದರೆ, ಅಪೌಷ್ಟಿಕತೆ, ಮಾತಿನ ದೋಷ, ಶ್ರವಣ ಸಮಸ್ಯೆ ಹಾಗೂ ಸಾಮಾಜಿಕ ಮತ್ತು ಮಾನಸಿಕ ಸವಾಲುಗಳು ಎದುರಾಗುವ ಸಾಧ್ಯತೆ ಹೆಚ್ಚುತ್ತದೆ.

# ಉತ್ತಮ ರೋಗಿಗಳ ಆರೋಗ್ಯದತ್ತ ವೈದ್ಯರು ಹೆಜ್ಜೆ ಇಡುತ್ತಾರೆ; ಸಕಾರಾತ್ಮಕ ಫಲಿತಾಂಶಗಳು ಕಂಡುಬಂದಿವೆ

ಬೆಂಗಳೂರು: ಆರೋಗ್ಯಕರ ಭಾರತವನ್ನು ನಿರ್ಮಿಸುವಲ್ಲಿ ವೈದ್ಯರು ಯಾವಾಗಲೂ ಅಪ್ರತಿಮ ಪಾತ್ರವನ್ನು ವಹಿಸಿದ್ದಾರೆ. ಸಾರ್ವಜನಿಕ ಆರೋಗ್ಯ, ಕಲ್ಯಾಣ ಮತ್ತು ಜಾಗೃತಿಗಾಗಿ ವೈದ್ಯರು ನೀಡಿದ ಸಮರ್ಪಿತ ಪ್ರಯತ್ನಗಳು ಮತ್ತು ಮಹತ್ವದ ಕೊಡುಗೆಗಳನ್ನು ಗುರುತಿಸಿ, ವೈದ್ಯಕೀಯ ಕ್ಷೇತ್ರದಲ್ಲಿ ಕೆಲಸ ಮಾಡುವ ವೈದ್ಯರು ಮತ್ತು ಆರೋಗ್ಯ ತಜ್ಞರಿಗೆ ಗೌರವ ಮತ್ತು ಕೃತಜ್ಞತೆಯನ್ನು ವ್ಯಕ್ತಪಡಿಸಲಾಯಿತು.

ಭಾರತದಲ್ಲಿ ವೈದ್ಯರ ದಿನದಂದು, ಎಲ್ಲಾ ವೈದ್ಯರಿಗೆ ಗೌರವ ಮತ್ತು ಕೃತಜ್ಞತೆಯನ್ನು ವ್ಯಕ್ತಪಡಿಸುತ್ತಾ, ಹೃದ್ರೋಗ ತಜ್ಞ ಡಾ. ಎಚ್ ಎನ್ ರಾಜೇಂದ್ರ ಕುಮಾರ್ ಜನರಲ್ ಫಿಸಿಶಿಯನ್, ಇಂಟರ್ನಲ್ ಮೆಡಿಸಿನ್ ತಜ್ಞ ಮತ್ತು ಹೃದ್ರೋಗ ತಜ್ಞರು, ವೈದ್ಯರು ತಮ್ಮ ಜ್ಞಾನ, ಸಮರ್ಪಣೆ ಮತ್ತು ಸೇವಾ ಮನೋಭಾವದ ಮೂಲಕ ಆರೋಗ್ಯಕರ ಸಮಾಜವನ್ನು ಸೃಷ್ಟಿಸುವಲ್ಲಿ ಪ್ರಮುಖ ಪಾತ್ರ ವಹಿಸುತ್ತಾರೆ ಎಂದು ಹೇಳಿದರು. ಅವರು ಕೇವಲ ಕಾಯಿಲೆಗಳಿಗೆ ಚಿಕಿತ್ಸೆ ನೀಡುವುದಲ್ಲದೆ, ಉತ್ತಮ, ಆರೋಗ್ಯಕರ ಜೀವನವನ್ನು ನಡೆಸುವತ್ತ ಜನರನ್ನು ಮಾರ್ಗದರ್ಶನ ಮಾಡುತ್ತಾರೆ. ರೋಗಗಳಿಗೆ ಚಿಕಿತ್ಸೆ ನೀಡುವುದರ ಹೊರತಾಗಿ, ಆರೋಗ್ಯ ಜಾಗೃತಿ ಮೂಡಿಸುವಲ್ಲಿ, ತಡೆಗಟ್ಟುವ ಆರೋಗ್ಯ ಕ್ರಮಗಳನ್ನು ಉತ್ತೇಜಿಸುವಲ್ಲಿ ಮತ್ತು ಆರೋಗ್ಯಕರ ಜೀವನಶೈಲಿಯನ್ನು ಅಳವಡಿಸಿಕೊಳ್ಳಲು ಜನರನ್ನು ಪ್ರೇರೇಪಿಸುವಲ್ಲಿ ಅವರ ಪಾತ್ರ ನಿರ್ಣಾಯಕವಾಗಿದೆ.

ಇಂದಿನ ಜಗತ್ತಿನಲ್ಲಿ, ಆರೋಗ್ಯ ರಕ್ಷಣೆ ಇನ್ನು ಮುಂದೆ ಔಷಧಿಗಳಿಗೆ ಮಾತ್ರ ಸೀಮಿತವಾಗಿಲ್ಲ; ಸಮತೋಲಿತ ಜೀವನಶೈಲಿ, ನಿಯಮಿತ ವ್ಯಾಯಾಮ ಮತ್ತು ಯೋಗವು ಉತ್ತಮ ಆರೋಗ್ಯದ ನಿರ್ಣಾಯಕ ಆಧಾರಸ್ತಂಭಗಳಾಗಿವೆ. ಯೋಗವು ದೈಹಿಕ ಆರೋಗ್ಯವನ್ನು ಸುಧಾರಿಸುವುದಲ್ಲದೆ, ಮಾನಸಿಕ ಸಮತೋಲನ, ಆತ್ಮವಿಶ್ವಾಸ ಮತ್ತು ಸಕಾರಾತ್ಮಕ ಮನಸ್ಥಿತಿಯನ್ನು ಬೆಳೆಸುತ್ತದೆ. ಅದಕ್ಕಾಗಿಯೇ ವೈದ್ಯಕೀಯ ತಜ್ಞರು ಆಗಾಗ್ಗೆ ಜನರು ಯೋಗ ಮತ್ತು ಆರೋಗ್ಯಕರ ಜೀವನಶೈಲಿಯನ್ನು ಅಳವಡಿಸಿಕೊಳ್ಳಲು ಪ್ರೋತ್ಸಾಹಿಸುತ್ತಾರೆ.

ಅಂತರರಾಷ್ಟ್ರೀಯ ಯೋಗ ದಿನದ ಸಂದರ್ಭದಲ್ಲಿ, ದೇಶಾದ್ಯಂತ ಆರೋಗ್ಯ ಮತ್ತು ಯೋಗದ ಮಹತ್ವವನ್ನು ಎತ್ತಿ ತೋರಿಸಲಾಯಿತು. ದೈನಂದಿನ ಜೀವನದಲ್ಲಿ ಯೋಗವನ್ನು ಸೇರಿಸಿಕೊಳ್ಳುವ ಮೂಲಕ, ವಯಸ್ಸಾದಂತೆಯೂ ಸಹ ವಿವಿಧ ಆರೋಗ್ಯ ಸಮಸ್ಯೆಗಳನ್ನು ತಡೆಗಟ್ಟಬಹುದು ಮತ್ತು ಆರೋಗ್ಯಕರ, ಸಕ್ರಿಯ ಮತ್ತು ಶಕ್ತಿಯುತ ಜೀವನವನ್ನು ನಡೆಸಬಹುದು ಎಂದು ತಜ್ಞರು ಒತ್ತಿ ಹೇಳಿದರು. ಈ ಉದ್ದೇಶವನ್ನು ಮುಂದುವರಿಸಲು, ವಿಶೇಷ ಯೋಗ ಜಾಗೃತಿ ಕಾರ್ಯಕ್ರಮವನ್ನು ಆಯೋಜಿಸಲಾಯಿತು. ಈ ಕಾರ್ಯಕ್ರಮಕ್ಕೆ ಅನುಭವಿ ಯೋಗ ತಜ್ಞರನ್ನು ಆಹ್ವಾನಿಸಲಾಯಿತು, ಅಲ್ಲಿ ಅವರು ಹಾಜರಾದ ರೋಗಿಗಳು ಮತ್ತು ಅವರ ಕುಟುಂಬಗಳಿಗೆ ವಿವಿಧ ಯೋಗ ಆಸನಗಳು (ಭಂಗಿಗಳು), ಪ್ರಾಣಾಯಾಮ (ಉಸಿರಾಟದ ವ್ಯಾಯಾಮಗಳು) ಮತ್ತು ಆರೋಗ್ಯಕರ ಜೀವನಶೈಲಿಯ ಮಹತ್ವದ ಬಗ್ಗೆ ವಿವರವಾದ ಮಾಹಿತಿಯನ್ನು ಒದಗಿಸಿದರು.

# ಜಾಹೀರಾತು ಕ್ಷೇತ್ರದಲ್ಲಿ ಎಐ ಕ್ರಾಂತಿ

ಬೆಂಗಳೂರು

ಜಾಹೀರಾತು, ಮಾರುಕಟ್ಟೆ ಮತ್ತು ಗ್ರಾಹಕರ ಬೆಳವಣಿಗೆ ಕ್ಷೇತ್ರಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಕೃತಕ ಬುದ್ಧಿಮತ್ತೆ ಆಧಾರಿತ ತಂತ್ರಜ್ಞಾನ ಕಂಪನಿಯಾದ ಮೊಬಅವೆನ್ಯೂ ಎಐ ಟೆಕ್ ಲಿಮಿಟೆಡ್ (ಬಿಎಸ್‌ಇ: ಐಎನ್‌ಇ622ಕ01027), ತನ್ನ ಹೊಸ ಬ್ರ್ಯಾಂಡ್ ಗುರುತನ್ನು ಅನಾವರಣಗೊಳಿಸಿದೆ. ಇದರೊಂದಿಗೆ ಜಾಹೀರಾತು ತಂತ್ರಜ್ಞಾನ ವೇದಿಕೆಗಳಲ್ಲಿ ಅಳವಡಿಸಲಾಗಿರುವ ಕೃತಕ ಬುದ್ಧಿಮತ್ತೆ ಆಧಾರಿತ ಗುಪ್ತಚರ ವ್ಯವಸ್ಥೆಯಾದ 'ಮೊಬಅವೆನ್ಯೂ ನ್ಯೂರಲ್ ಎಂಜಿನ್' ಅನ್ನು ಕೂಡ ಪರಿಚಯಿಸಿದೆ.




ಈ ಹೊಸ ಹೆಜ್ಜೆಯು ಕಂಪನಿಯ ಹಲವು ವರ್ಷಗಳ ಪರಿವರ್ತನೆಯ ಮುಂದುವರಿದ ಭಾಗವಾಗಿದ್ದು, ಕೇವಲ ಜಾಹೀರಾತು ಅಭಿಯಾನಗಳನ್ನು ಕಾರ್ಯಗತಗೊಳಿಸುವುದರಿಂದ ಮಾರಾಟಗಾರರು ಮತ್ತು ಬ್ರ್ಯಾಂಡ್‌ಗಳಿಗೆ ನಿರ್ಧಾರ ಕೈಗೊಳ್ಳಲು ಅಗತ್ಯವಾದ ಬುದ್ಧಿವಂತಿಕೆ ಹಾಗೂ ಒಳನೋಟಗಳನ್ನು ಒದಗಿಸುವ ಹಂತಕ್ಕೆ ಕಂಪನಿ ವಿಸ್ತರಿಸಿದೆ. ಈ ಕುರಿತು ಮಾತನಾಡಿದ ಮೊಬಅವೆನ್ಯೂ ಸಂಸ್ಥಾಪಕ, ವ್ಯವಸ್ಥಾಪಕ ನಿರ್ದೇಶಕ ಹಾಗೂ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಇಶಾಂಕ್ ಜೋಷಿ, ಜಾಹೀರಾತು ಕ್ಷೇತ್ರದಲ್ಲಿನ ಪ್ರತಿಯೊಂದು ಪ್ರಮುಖ ಬದಲಾವಣೆಯೂ ತಂತ್ರಜ್ಞಾನದಿಂದಲೇ ಚಾಲಿತವಾಗಿದೆ ಎಂದು ಹೇಳಿದರು.

ಹುಡುಕಾಟ ತಂತ್ರಜ್ಞಾನವು ಉತ್ಪನ್ನಗಳ ಅನ್ವೇಷಣೆಯ ವಿಧಾನವನ್ನು ಬದಲಿಸಿದರೆ, ಸಾಮಾಜಿಕ ಮಾಧ್ಯಮವು ಜಾಹೀರಾತು ವಿತರಣೆಯನ್ನು ಬದಲಿಸಿತು. ಪ್ರೋಗ್ರಾಮ್ಯಾಟಿಕ್ ಜಾಹೀರಾತು ನಿರ್ಧಾರ ಕೈಗೊಳ್ಳುವ ವಿಧಾನವನ್ನು ಬದಲಿಸಿದ್ದು, ಇದೀಗ ಕೃತಕ ಬುದ್ಧಿಮತ್ತೆ ಜಾಹೀರಾತು ಕ್ಷೇತ್ರದ ದಿಕ್ಕನ್ನೇ ಬದಲಿಸುತ್ತಿದೆ ಎಂದು ಅವರು ತಿಳಿಸಿದರು.

ಕಂಪನಿಯ ಹೊಸ ಗುರುತು ತನ್ನ ಪ್ರಸ್ತುತ ಸ್ವರೂಪಕ್ಕೆ ಹೊಂದಿಕೆಯಾಗಿದ್ದು, ನ್ಯೂರಲ್ ಎಂಜಿನ್ ಮುಂದಿನ ಭವಿಷ್ಯದ ಸ್ಪಷ್ಟ ಪ್ರತಿಬಿಂಬವಾಗಿದೆ ಎಂದು ಇಶಾಂಕ್ ಜೋಷಿ ಹೇಳಿದರು. ಭಾರತದಲ್ಲಿ ಅಭಿವೃದ್ಧಿಪಡಿಸಲಾದ ಕೃತಕ ಬುದ್ಧಿಮತ್ತೆ ಆಧಾರಿತ ಜಾಹೀರಾತು ಮತ್ತು ಗ್ರಾಹಕರ ಬೆಳವಣಿಗೆಯ ಮೂಲಸೌಕರ್ಯದ ಮೂಲಕ ಬ್ರ್ಯಾಂಡ್‌ಗಳು ದೊಡ್ಡ ಪ್ರಮಾಣದಲ್ಲಿ ಅಳೆಯಬಹುದಾದ ಫಲಿತಾಂಶಗಳನ್ನು ಸಾಧಿಸಲು ನೆರವಾಗುವುದು ಕಂಪನಿಯ ಉದ್ದೇಶವಾಗಿದೆ ಎಂದು ಅವರು ತಿಳಿಸಿದರು.

ಮೊಬಅವೆನ್ಯೂ ನ್ಯೂರಲ್ ಎಂಜಿನ್ ಈ ಹೊಸ ಅಧ್ಯಾಯದ ಪ್ರಮುಖ ಕೇಂದ್ರಬಿಂದುವಾಗಿದೆ. ಜಾಹೀರಾತು ಅಭಿಯಾನದ ಸಂಪೂರ್ಣ ಜೀವನಚಕ್ರವನ್ನು ಒಂದೇ ವ್ಯವಸ್ಥೆಯಡಿ ಸಂಯೋಜಿಸುವ ಕೃತಕ ಬುದ್ಧಿಮತ್ತೆ ಆಧಾರಿತ ಗುಪ್ತಚರ ಪದರವಾಗಿ ಇದು ಕಾರ್ಯನಿರ್ವಹಿಸಲಿದೆ. ಮೊಬಅವೆನ್ಯೂನ ಪ್ರಮುಖ ಬೆಳವಣಿಗೆ ವೇದಿಕೆಗಳಲ್ಲಿ ನಿರ್ಮಿಸಲಾಗಿರುವ ಈ ವ್ಯವಸ್ಥೆಯು ಮಾರಾಟಗಾರರಿಗೆ ಯೋಜನಾ ಹಂತದಿಂದ ನೇರವಾಗಿ ಅಭಿಯಾನ ಆರಂಭಿಸುವ ಹಂತಕ್ಕೆ 59 ಸೆಕೆಂಡುಗಳಿಗಿಂತ ಕಡಿಮೆ ಅವಧಿಯಲ್ಲಿ ತಲುಪಲು ನೆರವಾಗಲಿದೆ ಎಂದು ಕಂಪನಿ ತಿಳಿಸಿದೆ.

# ಜನರ ಹಕ್ಕು ಮತ್ತು ಬದುಕು ಮುಖ್ಯ, ರಾಜಕಾರಣವಲ್ಲ: ಸಿಎಂ

ಬೆಂಗಳೂರು

ರಾಜ್ಯದ ಜನರಿಗೆ ಅಗತ್ಯ ದಾಖಲೆಗಳನ್ನು ಸುಲಭವಾಗಿ ತಲುಪಿಸುವ ಉದ್ದೇಶದಿಂದ ಮನೆ ಮನೆಗೆ ತೆರಳಿ ಉಚಿತ ಜಾತಿ ಪ್ರಮಾಣ ಪತ್ರ ಹಾಗೂ ಶಾಶ್ವತ ನಿವಾಸ ಪ್ರಮಾಣ ಪತ್ರ ವಿತರಿಸುವ ಮಹತ್ವದ ಅಭಿಯಾನಕ್ಕೆ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರು ಸೋಮವಾರ ವಿಧಾನಸೌಧದ ಸಮ್ಮೇಳನ ಸಭಾಂಗಣದಲ್ಲಿ ಚಾಲನೆ ನೀಡಿದರು.

ಇದೇ ಸಂದರ್ಭದಲ್ಲಿ ಶಾಶ್ವತ ನಿವಾಸ ಪ್ರಮಾಣ ಪತ್ರ ಸೇವೆಯ ಜಾಲತಾಣ ಹಾಗೂ ವಾಟ್ಸ್‌ಪ್ ಸೇವೆಗೂ ಮುಖ್ಯಮಂತ್ರಿ ಚಾಲನೆ ನೀಡಿದರು.

ಕಾರ್ಯಕ್ರಮದಲ್ಲಿ ಮಾತನಾಡಿದ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್, "ನಿಮ್ಮ ಮತ ನಿಮ್ಮ ಹಕ್ಕು, ನಿಮ್ಮ ಮತ ನಿಮ್ಮ ಬದುಕು" ಎಂಬುದು ಸರ್ಕಾರದ ಬದ್ಧತೆಯಾಗಿದೆ ಎಂದು ಹೇಳಿದರು.



ಕರ್ನಾಟಕ ರಾಜ್ಯದಲ್ಲಿ ಬದುಕು ಕಟ್ಟಿಕೊಳ್ಳುವ ಪ್ರತಿಯೊಬ್ಬರಿಗೂ ಮೂಲ ಸೌಲಭ್ಯಗಳನ್ನು ಒದಗಿಸುವುದು ಮತ್ತು ಅವರ ಹಕ್ಕುಗಳನ್ನು ರಕ್ಷಿಸುವುದು ಸರ್ಕಾರದ ಜವಾಬ್ದಾರಿಯಾಗಿದೆ. ಮಾಜಿ ಮುಖ್ಯಮಂತ್ರಿ ಎಸ್.ಎಂ. ಕೃಷ್ಣ ಅವರ ಅವಧಿಯಲ್ಲಿ ಮನೆ ಬಾಗಿಲಿಗೆ ಪಹಣಿ ನೀಡುವ ಮೂಲಕ ಹೊಸ ಹೆಜ್ಜೆ ಇಡಲಾಗಿತ್ತು. ಅದೇ ರೀತಿಯಲ್ಲಿ ಜನರ ಅಗತ್ಯ ದಾಖಲೆಗಳನ್ನು ಅವರ ಮನೆ ಬಾಗಿಲಿಗೆ ತಲುಪಿಸುವ ಕಾರ್ಯಕ್ಕೆ ಈಗ ಚಾಲನೆ ನೀಡಲಾಗಿದೆ ಎಂದು ತಿಳಿಸಿದರು.

ದೇಶದಲ್ಲೇ ಮೊದಲ ಬಾರಿಗೆ ಮಹತ್ವದ ಅಭಿಯಾನ

ಭಾರತದಲ್ಲೇ ಮೊದಲ ಬಾರಿಗೆ ಶಾಶ್ವತ ನಿವಾಸ ಪ್ರಮಾಣ ಪತ್ರವನ್ನು ಉಚಿತವಾಗಿ ಮನೆ ಮನೆಗೆ ತೆರಳಿ ವಿತರಿಸುವ ಐತಿಹಾಸಿಕ ಅಭಿಯಾನವನ್ನು ಕರ್ನಾಟಕ ಸರ್ಕಾರ ಕೈಗೊಂಡಿದೆ ಎಂದು ಮುಖ್ಯಮಂತ್ರಿ ಹೇಳಿದರು.

ಚುನಾವಣಾ ಆಯೋಗ ಮತದಾರರ ಪಟ್ಟಿಗೆ ಸೇರ್ಪಡೆಗೊಳ್ಳಲು ಸೂಚಿಸಿರುವ 11 ದಾಖಲೆಗಳಲ್ಲಿ ಶಾಶ್ವತ ನಿವಾಸ ಪ್ರಮಾಣ ಪತ್ರವೂ ಒಂದಾಗಿದೆ. ಈ ಹಿನ್ನೆಲೆಯಲ್ಲಿ ರಾಜ್ಯದ ನಿವಾಸಿಗಳಿಗೆ ಅಗತ್ಯ ದಾಖಲೆಗಳನ್ನು ಒದಗಿಸುವ ಹೊಣೆಗಾರಿಕೆಯನ್ನು ಸರ್ಕಾರ ಸಮರ್ಥವಾಗಿ ನಿರ್ವಹಿಸುತ್ತಿದೆ ಎಂದು ಹೇಳಿದರು.

ದೇಶದಲ್ಲಿಯೇ 4.85 ಕೋಟಿ ಕುಟುಂಬಗಳಿಗೆ ಈ ದಾಖಲೆಗಳನ್ನು ತಲುಪಿಸುವ ಕಾರ್ಯವನ್ನು ಕೈಗೊಂಡಿರುವ ಮೊದಲ ರಾಜ್ಯ ಕರ್ನಾಟಕ ಎಂಬ ಹೆಮ್ಮೆ ಇದೆ.

ಈ ಕ್ರಮ ಯಾವುದೇ ರಾಜಕೀಯ ಉದ್ದೇಶದಿಂದ ಕೈಗೊಂಡದ್ದಲ್ಲ. ಇದು ಸಂಪೂರ್ಣವಾಗಿ ಜನಪರ ಹಾಗೂ ಪಕ್ಷಾತೀತ ಕ್ರಮವಾಗಿದೆ ಎಂದು ಸ್ಪಷ್ಟಪಡಿಸಿದರು.

## ‘ಜನರ ಗುರುತಿನಲ್ಲಿ ಶಕ್ತಿ ಅಡಗಿದೆ’

ಜನರ ಬದುಕಿನಲ್ಲಿ ಗುರುತು ಅತ್ಯಂತ ಮುಖ್ಯವಾಗಿದೆ. ಗುರುತು ಇದ್ದಲ್ಲಿ ಬದುಕಿಗೆ ಭದ್ರತೆ ದೊರೆಯುತ್ತದೆ. ಇದೇ ಗುರುತಿನ ಶಕ್ತಿಯಿಂದ ಮುಂದಿನ ದಿನಗಳಲ್ಲಿ ತಮ್ಮ ನಾಯಕರನ್ನು ಆಯ್ಕೆ ಮಾಡಿಕೊಳ್ಳಲು ಸಾಧ್ಯವಾಗುತ್ತದೆ ಎಂದು ಮುಖ್ಯಮಂತ್ರಿ ಹೇಳಿದರು. ಸರ್ಕಾರಿ ಕಚೇರಿಗಳಿಗೆ ಜನರು ಅಲೆದಾಡುವುದನ್ನು ತಪ್ಪಿಸಿ, ಸರ್ಕಾರದ ಸೇವೆಗಳನ್ನು ನೇರವಾಗಿ ಮನೆ ಬಾಗಿಲಿಗೆ ತಲುಪಿಸುವ ಉದ್ದೇಶದಿಂದ ಈ ಅಭಿಯಾನ ಆರಂಭಿಸಲಾಗಿದೆ. ಸರ್ಕಾರ ಮತ್ತು ಜನರ ನಡುವಿನ ಅಂತರ ಕಡಿಮೆ ಮಾಡುವ ನಿಟ್ಟಿನಲ್ಲಿ ಇದು ಮಹತ್ವದ ಹೆಜ್ಜೆಯಾಗಿದೆ ಎಂದು ಅವರು ಹೇಳಿದರು.

## ‘ಹಕ್ಕುಗಳಿಂದ ಯಾರೂ ವಂಚಿತರಾಗಬಾರದು’

ಸರ್ಕಾರ ಅಧಿಕಾರ ದುರುಪಯೋಗ ಮಾಡಿಕೊಳ್ಳುತ್ತಿದೆ ಎಂದು ಕೆಲವರು ಆರೋಪಿಸುತ್ತಿದ್ದಾರೆ. ಆದರೆ ಜನರಿಗೆ ನೆರವಾಗುವುದು ಮತ್ತು ಅ`ರ ಹಕ್ಕುಗಳನ್ನು ರಕ್ಷಿಸುವುದು ಸರ್ಕಾರದ ಕರ್ತವ್ಯವಾಗಿದೆ ಎಂದು ಮುಖ್ಯಮಂತ್ರಿ ಹೇಳಿದರು. ಮತದಾರರ ಪಟ್ಟಿಯಲ್ಲಿ ಹೆಸರು ಕಳೆದುಕೊಂಡರೆ ಸರ್ಕಾರದ ವಿವಿಧ ಸೌಲಭ್ಯಗಳಿಂದ ಜನರು ವಂಚಿತರಾಗುವ ಸಾಧ್ಯತೆ ಇದೆ. ಆದ್ದರಿಂದ ಪ್ರತಿಯೊಬ್ಬರೂ ತಮ್ಮ ದಾಖಲೆಗಳನ್ನು ಸರಿಯಾಗಿ ಹೊಂದಿರಬೇಕು ಎಂದು ಸಲಹೆ ನೀಡಿದರು. ಪ್ರಮಾಣ ಪತ್ರ ಪಡೆಯಲು ಆನ್‌ಲೈನ್ ಮೂಲಕ, ಸೇವಾ ಕೇಂದ್ರಗಳ ಮೂಲಕ ಹಾಗೂ ಹೋಬಳಿ ಮಟ್ಟದಲ್ಲಿ ಆರಂಭಿಸಿರುವ ಸಹಾಯ ಕೇಂದ್ರಗಳ ಮೂಲಕ ಅರ್ಜಿ ಸಲ್ಲಿಸಲು ಅವಕಾಶ ಕಲ್ಪಿಸಲಾಗಿದೆ. ಮತಗಟ್ಟೆ ಮಟ್ಟದ ಅಧಿಕಾರಿಗಳು ನೀಡುವ ಅರ್ಜಿಗಳನ್ನು ಭರ್ತಿ ಮಾಡಿ ಸಲ್ಲಿಸಬೇಕು ಎಂದು ತಿಳಿಸಿದರು.

# ಇರಾನ್‌ಗೆ ಪ್ರಯಾಣಿಸದಂತೆ

## ಭಾರತೀಯರಿಗೆ ಕೇಂದ್ರ ಸರ್ಕಾರ ಸೂಚನೆ

ನವದೆಹಲಿ

ಇರಾನ್ ಮತ್ತು ಅಮೆರಿಕ ನಡುವಿನ ಸಂಘರ್ಷ ತೀವ್ರಗೊಂಡಿರುವ ಹಿನ್ನೆಲೆಯಲ್ಲಿ ಕೇಂದ್ರ ಸರ್ಕಾರವು ಭಾರತೀಯ ನಾಗರಿಕರಿಗೆ ಎಚ್ಚರಿಕೆ ನೀಡಿದ್ದು, ಇರಾನ್‌ಗೆ ಪ್ರಯಾಣಿಸುವುದನ್ನು ಮುಂದೂಡುವಂತೆ ಸೂಚಿಸಿದೆ.

ಪಶ್ಚಿಮ ಏಷ್ಯಾದಲ್ಲಿ ಉಂಟಾಗಿರುವ ಯುದ್ಧ ಪರಿಸ್ಥಿತಿ ಹಾಗೂ ಭದ್ರತಾ ಆತಂಕದ ಹಿನ್ನೆಲೆಯಲ್ಲಿ ಇರಾನ್‌ಗೆ ಅನಗತ್ಯ ಪ್ರಯಾಣ ಮಾಡದಂತೆ ಭಾರತೀಯರಿಗೆ ಸಲಹೆ ನೀಡಲಾಗಿದೆ. ಈಗಾಗಲೇ ಇರಾನ್‌ನಲ್ಲಿ ಇರುವ ಭಾರತೀಯ ನಾಗರಿಕರು ಲಭ್ಯವಿರುವ ವಾಣಿಜ್ಯ ವಿಮಾನಗಳ ಮೂಲಕ ಸುರಕ್ಷಿತವಾಗಿ ಭಾರತಕ್ಕೆ ಮರಳುವಂತೆ ಕೇಂದ್ರ ಸರ್ಕಾರ ಮನವಿ ಮಾಡಿದೆ.

ಟೆಹ್ರಾನ್‌ನಲ್ಲಿರುವ ಭಾರತೀಯ ರಾಯಭಾರ ಕಚೇರಿ ಬಿಡುಗಡೆ ಮಾಡಿರುವ ಪರಿಷ್ಕೃತ ಪ್ರಯಾಣ ಸಲಹೆಯಲ್ಲಿ, ಇತ್ತೀಚಿನ ದಿನಗಳಲ್ಲಿ ಇರಾನ್‌ನಲ್ಲಿ ಯುದ್ಧ ಸಂಘರ್ಷ ಹಾಗೂ ಅಸ್ಥಿರತೆ ಹೆಚ್ಚಾಗಿರುವ ಹಿನ್ನೆಲೆಯಲ್ಲಿ ಭಾರತೀಯರ ಸುರಕ್ಷತೆಯನ್ನು ಗಮನದಲ್ಲಿಟ್ಟುಕೊಂಡು ಈ ಮುನ್ನೆಚ್ಚರಿಕೆ ಕ್ರಮ ಕೈಗೊಳ್ಳಲಾಗಿದೆ ಎಂದು ತಿಳಿಸಲಾಗಿದೆ.

“ಇರಾನ್‌ನಲ್ಲಿನ ಭದ್ರತಾ ಪರಿಸ್ಥಿತಿ ಹಾಗೂ ಯುದ್ಧದ ಸ್ಥಿತಿ ಸಾಮಾನ್ಯವಾಗುವವರೆಗೆ ಭಾರತೀಯರು ಯಾವುದೇ ಉದ್ದೇಶಕ್ಕಾಗಿ ಅಲ್ಲಿಗೆ ಪ್ರಯಾಣಿಸುವುದನ್ನು ತಪ್ಪಿಸಬೇಕು” ಎಂದು ರಾಯಭಾರ ಕಚೇರಿ ಸೂಚಿಸಿದೆ.

ಇರಾನ್‌ನಲ್ಲಿ ಇರುವ ಭಾರತೀಯರು ಪರಿಸ್ಥಿತಿಯ ಬಗ್ಗೆ ನಿರಂತರ ಮಾಹಿತಿ ಪಡೆದುಕೊಳ್ಳಬೇಕು. ಸುದ್ದಿಗಳನ್ನು ಎಚ್ಚರಿಕೆಯಿಂದ ಗಮನಿಸುವುದರ ಜೊತೆಗೆ ಹೆಚ್ಚಿನ ಮಿಲಿಟರಿ ಚಟುವಟಿಕೆ ನಡೆಯುತ್ತಿರುವ ಪ್ರದೇಶಗಳಿಗೆ, ವಿಶೇಷವಾಗಿ ದಕ್ಷಿಣ ಕರಾವಳಿ ಭಾಗಗಳಿಗೆ ತೆರಳುವುದನ್ನು ತಪ್ಪಿಸಬೇಕು ಎಂದು ಸಲಹೆ ನೀಡಲಾಗಿದೆ. ಇರಾನ್‌ನಲ್ಲಿ ಇರುವ ಆದರೆ ಇದುವರೆಗೆ ರಾಯಭಾರ ಕಚೇರಿಯಲ್ಲಿ ನೋಂದಣಿ ಮಾಡಿಕೊಳ್ಳದ ಭಾರತೀಯರು ತಕ್ಷಣ ನೋಂದಾಯಿಸಿಕೊಳ್ಳಬೇಕು ಎಂದು ತಿಳಿಸಲಾಗಿದೆ. ಹೆಚ್ಚಿನ ಮಾಹಿತಿಗಾಗಿ ಭಾರತೀಯ ರಾಯಭಾರ ಕಚೇರಿಯ ಅಧಿಕೃತ ಜಾಲತಾಣ ಮತ್ತು ಸಾಮಾಜಿಕ ಜಾಲತಾಣ ಖಾತೆಗಳನ್ನು ನಿಯಮಿತವಾಗಿ ಪರಿಶೀಲಿಸುವಂತೆ ಸೂಚಿಸಲಾಗಿದೆ. ತುರ್ತು ನೆರವಿನ ಅಗತ್ಯವಿರುವ ಭಾರತೀಯ ನಾಗರಿಕರಿಗಾಗಿ ರಾಯಭಾರ ಕಚೇರಿ ಸಹಾಯವಾಣಿ ಸಂಖ್ಯೆಗಳನ್ನೂ ಬಿಡುಗಡೆ ಮಾಡಿದೆ.

ಇರಾನ್ ಮತ್ತು ಅಮೆರಿಕ ನಡುವಿನ ಸಂಘರ್ಷದ ನಡುವೆ ಈ ಪ್ರಯಾಣ ಸಲಹೆ ಹೊರಬಿದ್ದಿದೆ. ಇತ್ತೀಚಿನ ದಿನಗಳಲ್ಲಿ ಪಶ್ಚಿಮ ಏಷ್ಯಾದ ಹಲವು ಪ್ರದೇಶಗಳಲ್ಲಿ ಮಿಲಿಟರಿ ಚಟುವಟಿಕೆಗಳು ಹೆಚ್ಚಾಗಿದ್ದು, ಭದ್ರತಾ ಪರಿಸ್ಥಿತಿ ಮತ್ತಷ್ಟು ಗಂಭೀರವಾಗಿದೆ. ಈ ಹಿನ್ನೆಲೆಯಲ್ಲಿ ಭಾರತೀಯರ ಸುರಕ್ಷತೆಗೆ ಆದ್ಯತೆ ನೀಡಿ ಕೇಂದ್ರ ಸರ್ಕಾರ ಮುನ್ನೆಚ್ಚರಿಕೆ ಕ್ರಮಗಳನ್ನು ಕೈಗೊಂಡಿದೆ.

# ರೈತರ ನೆರವಿಗೆ ಧಾವಿಸಿ: ಯಡಿಯೂರಪ್ಪ ಆಗ್ರಹ

ಬೆಂಗಳೂರು

ರಾಜ್ಯದಲ್ಲಿ ಬರಗಾಲ ತೀವ್ರಗೊಂಡಿದ್ದು, ರಾಜ್ಯ ಸರ್ಕಾರ ಕೂಡಲೇ ರೈತರ ನೆರವಿಗೆ ಧಾವಿಸಬೇಕು ಎಂದು ಮಾಜಿ ಮುಖ್ಯಮಂತ್ರಿ ಬಿ.ಎಸ್. ಯಡಿಯೂರಪ್ಪ ಆಗ್ರಹಿಸಿದ್ದಾರೆ.

ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ರಾಜ್ಯದ ಬಹುತೇಕ ಜಲಾಶಯಗಳು ಹಾಗೂ ಅಣೆಕಟ್ಟುಗಳಲ್ಲಿ ನೀರಿನ ಸಂಗ್ರಹ ಕುಸಿದಿದೆ. ರೈತರು ಬಿತ್ತನೆ ಮಾಡಿದ ಬೀಜಗಳು ಮೊಳಕೆಯೊಡೆದು ಹಾಳಾಗಿದ್ದು, ಬೆಳೆ ನಷ್ಟದಿಂದ ಸಂಕಷ್ಟಕ್ಕೆ ಸಿಲುಕಿದ್ದಾರೆ ಎಂದು ಹೇಳಿದರು. ಈ ಬಾರಿ ತೀವ್ರ ಬರ ಪರಿಸ್ಥಿತಿಯಿಂದ ಶೇ.10ರಷ್ಟು ಕೂಡ ಬೆಳೆ ಕೈಗೆ ಸಿಗದಂತಹ ಪರಿಸ್ಥಿತಿ ನಿರ್ಮಾಣವಾಗಿದೆ. ಇಂತಹ ಗಂಭೀರ ಸಮಯದಲ್ಲೂ ರಾಜ್ಯ ಸರ್ಕಾರ ಯಾವುದೇ ಸೂಕ್ತ ನಿರ್ಧಾರ ಕೈಗೊಳ್ಳದೆ ಮೌನವಾಗಿರುವುದು ಸರಿಯಲ್ಲ ಎಂದು ಅವರು ಟೀಕಿಸಿದರು.



ಬರದಿಂದ ಸಂಕಷ್ಟಕ್ಕೆ ಒಳಗಾಗಿರುವ ರೈತರಿಗೆ ತಕ್ಷಣ ಆರ್ಥಿಕ ನೆರವು ನೀಡುವ ಅಗತ್ಯವಿದೆ. ಸರ್ಕಾರ ಪ್ರತಿ ರೈತ ಕುಟುಂಬಕ್ಕೆ ಕನಿಷ್ಠ 50 ಸಾವಿರ ರೂ. ಪರಿಹಾರ ನೀಡಿದರೆ, ರೈತರಿಗೆ ಸ್ವಲ್ಪ ಮಟ್ಟಿನ ನೆರವಾಗಲಿದೆ ಎಂದು ಯಡಿಯೂರಪ್ಪ ಹೇಳಿದರು.

ರೈತರ ಬದುಕು ರಕ್ಷಿಸುವುದು ಸರ್ಕಾರದ ಮೊದಲ ಆದ್ಯತೆಯಾಗಬೇಕು. ಬರ ಪರಿಸ್ಥಿತಿಯನ್ನು ಗಂಭೀರವಾಗಿ ಪರಿಗಣಿಸಿ ತುರ್ತು ಪರಿಹಾರ ಕ್ರಮಗಳನ್ನು ಕೈಗೊಳ್ಳಬೇಕು ಎಂದು ಅವರು ಒತ್ತಾಯಿಸಿದರು.

# ಗ್ರಾಮೀಣ ಭಾಗದಲ್ಲಿ ಉದ್ಯೋಗ ಸೃಷ್ಟಿಗೆ ಆದ್ಯತೆ: ಈಶ್ವರ ಬಿ. ಖಂಡ್ರೆ

ಬೆಂಗಳೂರು

ರಾಜ್ಯದ ಹಲವು ತಾಲೂಕುಗಳಲ್ಲಿ ಮಳೆಯ ಕೊರತೆ ಎದುರಾಗಿರುವ ಹಿನ್ನೆಲೆಯಲ್ಲಿ ಗ್ರಾಮೀಣ ಭಾಗದಲ್ಲಿ ಕುಡಿಯುವ ನೀರು ಮತ್ತು ಉದ್ಯೋಗ ಸೃಷ್ಟಿಗೆ ಸರ್ಕಾರ ಹೆಚ್ಚಿನ ಆದ್ಯತೆ ನೀಡುತ್ತಿದೆ ಎಂದು ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವ ಈಶ್ವರ ಬಿ. ಖಂಡ್ರೆ ತಿಳಿಸಿದ್ದಾರೆ.

ಸುದ್ದಿಗಾರರೊಂದಿಗೆ ಮಾತನಾಡಿದ ಸಚಿವರು, ರಾಜ್ಯದ 178 ತಾಲೂಕುಗಳಲ್ಲಿ ಮಳೆ ಕೊರತೆ ಇದ್ದು, 60 ತಾಲೂಕುಗಳಲ್ಲಿ ತೀವ್ರ ಮಳೆ ಅಭಾವ ಎದುರಾಗಿದೆ. ಈ ಹಿನ್ನೆಲೆಯಲ್ಲಿ ಗ್ರಾಮೀಣ ಜನರು ಗುಳೆ ಹೋಗದಂತೆ ತಮ್ಮ ಸ್ವಂತ ಗ್ರಾಮಗಳಲ್ಲಿಯೇ ಉದ್ಯೋಗ ಒದಗಿಸಲು ಕ್ರಮ ಕೈಗೊಳ್ಳಲಾಗಿದೆ ಎಂದು ಹೇಳಿದರು.

ಕುಡಿಯುವ ನೀರಿನ ಸಮಸ್ಯೆ ನಿವಾರಣೆಗೆ ಈಗಾಗಲೇ 117 ಕೋಟಿ ರೂಪಾಯಿ ಅನುದಾನವನ್ನು ಮುಂಗಡವಾಗಿ ಬಿಡುಗಡೆ ಮಾಡಲಾಗಿದೆ. 95 ಕೋಟಿ ರೂಪಾಯಿ ಮೊತ್ತದ ಕಾಮಗಾರಿಗಳಿಗೆ ಆಡಳಿತಾತ್ಮಕ ಅನುಮೋದನೆ ನೀಡಲಾಗಿದ್ದು, ಇನ್ನೂ 25 ಕೋಟಿ ರೂಪಾಯಿ ವಿವಿಧ ಜಿಲ್ಲೆಗಳಲ್ಲಿ ಲಭ್ಯವಿದೆ ಎಂದು ಮಾಹಿತಿ ನೀಡಿದರು.

ಯಾವುದೇ ಗ್ರಾಮ ಅಥವಾ ತಾಂಡಾಗಳಲ್ಲಿ ಮೇಲ್ಮೈ ನೀರು ಲಭ್ಯವಾಗದೆ, ಇರುವ ಕೊಳವೆ ಬಾವಿಗಳು ಬತ್ತಿಹೋದರೆ ತುರ್ತು ಕ್ರಮವಾಗಿ ಖಾಸಗಿ ಕೊಳವೆ ಬಾವಿ ಅಥವಾ ಬಾವಿಗಳನ್ನು ಬಾಡಿಗೆಗೆ ಪಡೆದು ಟ್ಯಾಂಕರ್ ಮೂಲಕ ನೀರು ಪೂರೈಸಲು ಅವಕಾಶ ನೀಡಲಾಗಿದೆ. ಅನಿವಾರ್ಯ ಪರಿಸ್ಥಿತಿಯಲ್ಲಿ ಹೊಸ ಕೊಳವೆ ಬಾವಿ ಕೊರೆಯಲು ಸಹ ಅನುಮತಿ ನೀಡಲಾಗಿದೆ ಎಂದು ತಿಳಿಸಿದರು. ಮುಂದಿನ ಮೂರು-ನಾಲ್ಕು ತಿಂಗಳು ಮಳೆಯಾಗದಿದ್ದರೂ ಮುಂದಿನ ಮುಂಗಾರು ಆರಂಭವಾಗುವವರೆಗೆ ಕುಡಿಯುವ ನೀರಿನ ಕೊರತೆ ಎದುರಾಗದಂತೆ ಅಗತ್ಯ ಮುನ್ನೆಚ್ಚರಿಕಾ ಕ್ರಮಗಳನ್ನು ಕೈಗೊಳ್ಳಲಾಗುತ್ತಿದೆ. ಈ ಕುರಿತು ಅಧ್ಯಯನ ಮತ್ತು ಸಿದ್ಧತೆಗಳು ನಡೆಯುತ್ತಿವೆ ಎಂದು ಸಚಿವರು ಹೇಳಿದರು.

ವಿಬಿಜಿ ರಾಮ್ ಜಿ ಯೋಜನೆಯಡಿ ಉದ್ಯೋಗ ಸೃಷ್ಟಿ: ಗ್ರಾಮೀಣ ಭಾಗದ ಉದ್ಯೋಗ ಸೃಷ್ಟಿಗೆ ಮಹತ್ವ ನೀಡಿರುವ ಸರ್ಕಾರ, ವಿಬಿಜಿ ರಾಮ್ ಜಿ ಯೋಜನೆಯಡಿ ಈಗಾಗಲೇ 5 ಲಕ್ಷ ಮಾನವ ದಿನಗಳ ಉದ್ಯೋಗ ಸೃಷ್ಟಿಸಿದೆ ಎಂದು ಈಶ್ವರ ಖಂಡ್ರೆ ಹೇಳಿದರು. ಕೇಂದ್ರ ಸರ್ಕಾರ ಉದ್ಯೋಗ ಖಾತ್ರಿ ಯೋಜನೆಯ ಅನುದಾನ ಹಂಚಿಕೆ ಅನುಪಾತವನ್ನು 90:10ರಿಂದ 60:40ಕ್ಕೆ ಬದಲಿಸಿರುವುದರಿಂದ ರಾಜ್ಯದ ಮೇಲೆ ಹೆಚ್ಚಿನ ಹೊರೆ ಬಿದ್ದಿದೆ. ಆದರೂ ಗ್ರಾಮೀಣ ಬಡವರು, ದಲಿತರು ಹಾಗೂ ಹಿಂದುಳಿದ ವರ್ಗಗಳ ಹಿತದೃಷ್ಟಿಯಿಂದ ಜುಲೈ 1ರಿಂದ ಯೋಜನೆಯನ್ನು ಪರಿಣಾಮಕಾರಿಯಾಗಿ ಜಾರಿಗೆ ತರಲಾಗಿದೆ ಎಂದು ತಿಳಿಸಿದರು.

# ಹುಡುಗಿ ಭೇಟಿಯ ಆಸೆ ತೋರಿಸಿ ಸುಲಿಗೆ

ಬೆಂಗಳೂರು

ಆನ್‌ಲೈನ್‌ನಲ್ಲಿ ಯುವತಿಯರ ಪರಿಚಯದ ಆಸೆ ತೋರಿಸಿ ವ್ಯಕ್ತಿಯೊಬ್ಬರನ್ನು ಸುಲಿಗೆ ಮಾಡಿದ್ದ ಆರೋಪದ ಮೇಲೆ ಸಿಸಿಬಿ ಪೊಲೀಸರು ಇಬ್ಬರು ಮಹಿಳೆಯರು ಸೇರಿದಂತೆ ಒಟ್ಟು 11 ಮಂದಿಯನ್ನು ಬಂಧಿಸಿದ್ದಾರೆ.

ಬಂಧಿತ ಆರೋಪಿಗಳನ್ನು ಚೇತನ್ ಮನು, ಶಾಬು, ಮಂಜುನಾಥ್, ಜಯಕುಮಾರ್, ಅರುಣ ಕೀರ್ತಿ, ಕಾಂತ ರಾಜು, ಸಂದೀಪ್ ಸೇರಿದಂತೆ ಇತರರು ಎಂದು ಗುರುತಿಸಲಾಗಿದೆ.

ಆರೋಪಿಗಳು ಆನ್‌ಲೈನ್ ಜಾಲತಾಣವೊಂದರಲ್ಲಿ ಯುವತಿಯರ ಚಿತ್ರಗಳನ್ನು ಹಾಕಿ, ಪರಿಚಯ ಮಾಡಿಕೊಳ್ಳುವ ಅವಕಾಶವಿದೆ ಎಂದು ನಂಬಿಸುತ್ತಿದ್ದರು. ಇದನ್ನು ನಂಬಿ ಯುವತಿಯೊಬ್ಬರನ್ನು ಭೇಟಿಯಾಗಲು ತೆರಳಿದ್ದ ವ್ಯಕ್ತಿಯನ್ನು ಸಂಚು ರೂಪಿಸಿ ಸುಲಿಗೆ ಮಾಡಿದ್ದರು.

ಘಟನೆ ವಿವರ: ಹೆಚ್.ಆರ್.ಬಿ.ಆರ್ ಲೇಔಟ್‌ಗೆ ಯುವತಿ ಯೊಬ್ಬರನ್ನು ಭೇಟಿಯಾಗಲು ಬಂದಿದ್ದ ವ್ಯಕ್ತಿಯನ್ನು ಆರೋಪಿಗಳು ಮೊದಲೇ ರೂಪಿಸಿದ್ದ ಯೋಜನೆಯಂತೆ ಸುತ್ತುವರಿದು ಅಪಹರಿಸಿದ್ದರು.

ಬಳಿಕ ಆತನನ್ನು ಆಟೋದಲ್ಲಿ ನಗರದ ವಿವಿಧ ಕಡೆಗಳಿಗೆ ಕರೆದೊಯ್ದು, ಜೀವ ಬೆದರಿಕೆ ಹಾಕಿ ಹಲ್ಲೆ ನಡೆಸಿದ್ದರು.

ನಂತರ ಆತನ ಬಳಿಯಿದ್ದ ನಗದು, ಚಿನ್ನದ ಸರ ಹಾಗೂ ಮೊಬೈಲ್ ಫೋನ್‌ಗಳನ್ನು ಕಸಿದುಕೊಂಡು ಪರಾರಿಯಾಗಿದ್ದರು.

ಈ ಕುರಿತು ದೂರು ದಾಖಲಿಸಿಕೊಂಡ ಸಿಸಿಬಿಯ ಮಹಿಳಾ ಮತ್ತು ಮಕ್ಕಳ ವಿಭಾಗದ ಪೊಲೀಸರು ತನಿಖೆ ಆರಂಭಿಸಿದ್ದರು.

ಖಚಿತ ಮಾಹಿತಿ ಆಧರಿಸಿ ಕಾರ್ಯಾಚರಣೆ ನಡೆಸಿ ಇಬ್ಬರು ಮಹಿಳೆಯರು ಸೇರಿದಂತೆ ಒಟ್ಟು 11 ಆರೋಪಿಗಳನ್ನು ಬಂಧಿಸುವಲ್ಲಿ ಯಶಸ್ವಿಯಾಗಿದ್ದಾರೆ.

ಬಂಧಿತರಿಂದ ಕೃತ್ಯಕ್ಕೆ ಬಳಸಿದ್ದ ಎರಡು ಆಟೋಗಳು, ನಾಲ್ಕು ದ್ವಿಚಕ್ರ ವಾಹನಗಳು, 13 ಮೊಬೈಲ್ ಫೋನ್‌ಗಳು ಹಾಗೂ ಸುಲಿಗೆ ಮಾಡಿದ್ದ ನಗದನ್ನು ಪೊಲೀಸರು ವಶಪಡಿಸಿಕೊಂಡಿದ್ದಾರೆ. ಆನ್‌ಲೈನ್ ಪರಿಚಯ ಹಾಗೂ ಅಪರಿಚಿತ ವ್ಯಕ್ತಿಗಳೊಂದಿಗೆ ಸಂಪರ್ಕ ಸಾಧಿಸುವ ವೇಳೆ ಸಾರ್ವಜನಿಕರು ಎಚ್ಚರಿಕೆ ವಹಿಸಬೇಕು ಎಂದು ಪೊಲೀಸರು ಮನವಿ ಮಾಡಿದ್ದಾರೆ.

# ಮತ್ತೆ ಚಿರತೆ ಪ್ರತ್ಯಕ್ಷ

ಬೆಂಗಳೂರು

ಯಶವಂತಪುರ ವಿಧಾನಸಭಾ ಕ್ಷೇತ್ರದ ಬ್ಯಾಡರಹಳ್ಳಿ ವ್ಯಾಪ್ತಿಯ ಭಾರತ್ ನಗರದಲ್ಲಿ ಚಿರತೆ ಮತ್ತೆ ಕಾಣಿಸಿಕೊಂಡಿದ್ದು, ಸ್ಥಳೀಯ ನಿವಾಸಿಗಳಲ್ಲಿ ಆತಂಕ ಮತ್ತಷ್ಟು ಹೆಚ್ಚಾಗಿದೆ. ಕಳೆದ ಎರಡು ವಾರಗಳಲ್ಲಿ ನಾಲ್ಕನೇ ಬಾರಿಗೆ ಚಿರತೆ ಪ್ರತ್ಯಕ್ಷವಾಗಿರುವ ಹಿನ್ನೆಲೆಯಲ್ಲಿ ಅರಣ್ಯ ಇಲಾಖೆಯ ಕಾರ್ಯವೈಖರಿಯ ವಿರುದ್ಧ ಸಾರ್ವಜನಿಕರು ತೀವ್ರ ಆಕ್ರೋಶ ವ್ಯಕ್ತಪಡಿಸಿದ್ದಾರೆ.

ಜುಲೈ 9ರಿಂದ ಈವರೆಗೆ ಭಾರತ್ ನಗರದಲ್ಲಿ ನಾಲ್ಕು ಬಾರಿ ಚಿರತೆ ಕಾಣಿಸಿಕೊಂಡಿದೆ. ಕಳೆದ ವಾರ ಮೂರು ಬಾರಿ ಪ್ರತ್ಯಕ್ಷವಾಗಿದ್ದ ಚಿರತೆ, ಇದೀಗ ಮತ್ತೊಮ್ಮೆ 13ನೇ ಮುಖ್ಯ ರಸ್ತೆ ಸಮೀಪ ಕಾಣಿಸಿಕೊಂಡಿದೆ.

ಭಾನುವಾರ ಬೆಳಗ್ಗೆ ಶ್ವಾನದ ಮೇಲೆ ದಾಳಿ ಮಾಡಲು ಚಿರತೆ ಯತ್ನಿಸಿದ್ದು, ಈ ದೃಶ್ಯ ಸಮೀಪದ ಸಿಸಿಟಿವಿ ಕ್ಯಾಮೆರಾದಲ್ಲಿ ಸೆರೆಯಾಗಿದೆ. ಬಳಿಕ ಚಿರತೆ ಸ್ಥಳದಿಂದ ಪರಾರಿಯಾಗಿದೆ.

ಚಿರತೆಯನ್ನು ಸೆರೆಹಿಡಿಯಲು ಅರಣ್ಯ ಇಲಾಖೆ ಇದುವರೆಗೆ ಒಂದು ಬೋನು ಮಾತ್ರ ಅಳವಡಿಸಿದ್ದು, ಅದರಲ್ಲಿ ಆಮಿಷವಾಗಿ ಕೋಳಿಯನ್ನು ಇರಿಸಲಾಗಿದೆ.

ಆದರೆ ಚಿರತೆ ಬೋನಿನ ಬಳಿ ಬಂದು ವಾಸನೆ ಹಿಡಿದರೂ ಒಳಗೆ ಪ್ರವೇಶಿಸದೇ ಚಾಣಾಕ್ಷತನದಿಂದ ತಪ್ಪಿಸಿಕೊಳ್ಳುತ್ತಿದೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ.

ಚಿರತೆ ಪದೇ ಪದೇ ಕಾಣಿಸಿಕೊಳ್ಳುತ್ತಿರುವ ಹಿನ್ನೆಲೆಯಲ್ಲಿ ಇಂದು ಭಾರತ್ ನಗರದ ನೂರಾರು ನಿವಾಸಿಗಳು ಸ್ಥಳದಲ್ಲಿ ಸೇರಿ ಪ್ರತಿಭಟನಾ ಸ್ವರೂಪದಲ್ಲಿ ತಮ್ಮ ಅಸಮಾಧಾನ ವ್ಯಕ್ತಪಡಿಸಿದರು. ಬಳಿಕ ಜೆಸಿಬಿ ಯಂತ್ರದ ಮೂಲಕ ಖಾಲಿ ನಿವೇಶನ ಹಾಗೂ ರಸ್ತೆ ಬದಿಯ ಗಿಡಗಂಟಿಗಳನ್ನು ತೆರವುಗೊಳಿಸಿ ಸ್ವಚ್ಛಗೊಳಿಸಲಾಯಿತು.

ಸ್ಥಳೀಯ ನಿವಾಸಿಗಳ ಪ್ರಕಾರ, ಚಿರತೆಯ ಭೀತಿಯಿಂದ ಜನರು ಮನೆಯಿಂದ ಹೊರಬರಲು ಹೆದರುತ್ತಿದ್ದಾರೆ.



ಜಪಾನ ದೇಶದ ಪುಕುವೋಕಾದ ಭಾರತದ ಕಾನ್ಸುಲೇಟ್ ಜನರಲ್ ರಾಮಕುಮಾರ.ಸಿ. ಅವರು ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರನ್ನು ವಿಧಾನಸೌಧದಲ್ಲಿ ಸೋಮವಾರ ಭೇಟಿಯಾಗಿ ಚರ್ಚಿಸಿದರು.

# 12 ಗಂಟೆಗಳ ಕಾಲ ನೀರು ಪೂರೈಕೆ ಸ್ಥಗಿತ

ಬೆಂಗಳೂರು

ಕಾವೇರಿ ನೀರು ಸರಬರಾಜು ಯೋಜನೆ 4ನೇ ಹಂತದ 1ನೇ ಘಟ್ಟದಲ್ಲಿ ತುರ್ತು ದುರಸ್ತಿ ಕಾಮಗಾರಿ ಕೈಗೊಳ್ಳುವ ಹಿನ್ನೆಲೆಯಲ್ಲಿ ಜುಲೈ 22ರಂದು ಬುಧವಾರ ಕಾವೇರಿ ನೀರು ಪೂರೈಕೆಯಲ್ಲಿ ವ್ಯತ್ಯಯ ಉಂಟಾಗಲಿದೆ ಎಂದು ಬೆಂಗಳೂರು ಜಲಮಂಡಳಿ ತಿಳಿಸಿದೆ.

ಕಾವೇರಿ ನೀರು ಸರಬರಾಜು ಯೋಜನೆ 4ನೇ ಹಂತದ 1ನೇ ಘಟ್ಟದ 1200 ಮಿ.ಮೀ. ವ್ಯಾಸದ ಕೊಳವೆ ಮಾರ್ಗದಲ್ಲಿರುವ 200 ಮಿ.ಮೀ. ಏರ್ ವಾಲ್ವ್ ಮತ್ತು ಸ್ಲೂಯಿಸ್ ವಾಲ್ವ್ ಸೋರಿಕೆ ತಡೆಗಟ್ಟುವ ಸಲುವಾಗಿ ತುರ್ತು ಕಾಮಗಾರಿ ನಡೆಸಲಾಗುತ್ತಿದೆ. ಈ ಹಿನ್ನೆಲೆಯಲ್ಲಿ ಜುಲೈ 22ರಂದು ಬೆಳಗ್ಗೆ 6 ಗಂಟೆಯಿಂದ ಸಂಜೆ 6 ಗಂಟೆಯವರೆಗೆ ಒಟ್ಟು 12 ಗಂಟೆಗಳ ಕಾಲ ಕಾವೇರಿ ನೀರು ಸರಬರಾಜು ಯೋಜನೆ 4ನೇ ಹಂತದ 1ನೇ ಘಟ್ಟದ ಜಲರೇಚಕ ಯಂತ್ರಾಗಾರಗಳನ್ನು ಸ್ಥಗಿತಗೊಳಿಸಲಾಗುತ್ತದೆ.

ಜಲರೇಚಕ ಯಂತ್ರಾಗಾರಗಳ ಸ್ಥಗಿತದಿಂದಾಗಿ ಹಲವು ಪ್ರದೇಶಗಳಲ್ಲಿ ಕಾವೇರಿ ನೀರು ಪೂರೈಕೆಯಲ್ಲಿ ವ್ಯತ್ಯಯ ಉಂಟಾಗುವ ಸಾಧ್ಯತೆ ಇದೆ. ಸಾರ್ವಜನಿಕರು ಮುಂಜಾಗ್ರತಾ ಕ್ರಮವಾಗಿ ಅಗತ್ಯ ಪ್ರಮಾಣದ ನೀರನ್ನು ಸಂಗ್ರಹಿಸಿಟ್ಟುಕೊಳ್ಳುವಂತೆ ಹಾಗೂ ಜಲಮಂಡಳಿಯೊಂದಿಗೆ ಸಹಕರಿಸುವಂತೆ ಮನವಿ ಮಾಡಲಾಗಿದೆ. ನೀರು ಪೂರೈಕೆಯಲ್ಲಿ ವ್ಯತ್ಯಯ ಉಂಟಾಗುವ ಪ್ರದೇಶಗಳ ವಿವರಗಳನ್ನು ಸಾರ್ವಜನಿಕರ ಅನುಕೂಲಕ್ಕಾಗಿ ಪ್ರಕಟಿಸಲಾಗಿದ್ದು, ಈ ಕುರಿತು ಗಮನ ಹರಿಸುವಂತೆ ಬೆಂಗಳೂರು ಜಲಮಂಡಳಿ ಕೋರಿದೆ.

# ಕುನಾಲ್ ಕಮ್ರಾ, ಪ್ರಕಾಶ್ ರಾಜ್ ವಿರುದ್ಧ ಪ್ರಕರಣ ದಾಖಲಿಸಲು ಆಗ್ರಹ

ನವದೆಹಲಿ

ಜಂತರ್-ಮಂತರ್‌ನಲ್ಲಿ ನೀಟ್ ಪರೀಕ್ಷೆ ಸಂಬಂಧ ನಡೆಯುತ್ತಿರುವ ಪ್ರತಿಭಟನೆಯ ವೇಳೆ ಹಿಂದೂ ದೇವತೆಗಳಿಗೆ ಅವಮಾನ ಹಾಗೂ ದ್ವೇಷ ಭಾಷಣಗಳು ನಡೆದಿವೆ ಎಂದು ಆರೋಪಿಸಿ, ಹಾಸ್ಯ ಕಲಾವಿದ ಕುನಾಲ್ ಕಮ್ರಾ ಮತ್ತು ನಟ ಪ್ರಕಾಶ್ ರಾಜ್ ಸೇರಿದಂತೆ ಕೆಲವರ ವಿರುದ್ಧ ಪ್ರಕರಣ ದಾಖಲಿಸುವಂತೆ ಹಿಂದೂ ಜನಜಾಗೃತಿ ಸಮಿತಿ ಮತ್ತು ಸುಪ್ರೀಂ ಕೋರ್ಟ್ ವಕೀಲರ ನಿಯೋಗ ದೆಹಲಿಯ ಸಂಸದ್ ಮಾರ್ಗ ಪೊಲೀಸ್ ಠಾಣೆಗೆ ಲಿಖಿತ ದೂರು ಸಲ್ಲಿಸಿದೆ.

ಸುಪ್ರೀಂ ಕೋರ್ಟ್ ವಕೀಲರಾದ ಮಕರಂದ್ ಅಡ್ಕರ್, ಅಮಿತಾ ಸಚ್‌ದೇವ್, ಅತುಲ್ ಶರ್ಮಾ, ಮಯಾಂಕ್ ದ್ವಿವೇದಿ, ಕೇಶರಿ ಸತ್ಯ, ಪಾರ್ಥ್ ಯಾದವ್, ಯಾದವೇಂದ್ರ ಸಕ್ಸೇನಾ ಹಾಗೂ ಹಿಂದೂ ಜನಜಾಗೃತಿ ಸಮಿತಿಯ ದೆಹಲಿ ರಾಜ್ಯ ಸಂಯೋಜಕರಾದ ಕಾರ್ತಿಕ್ ಸಾಳುಂಕೆ ಮತ್ತು ಶ್ರೀರಾಮ್ ಲುಕತುಕೆ ಅವರು ಸಂಸದ್ ಮಾರ್ಗ ಪೊಲೀಸ್ ಠಾಣೆಯ ಅಧಿಕಾರಿಗಳನ್ನು ಭೇಟಿ ಮಾಡಿ ದೂರು ಸಲ್ಲಿಸಿದರು.

ದೂರಿನಲ್ಲಿ, ಜಂತರ್-ಮಂತರ್‌ನಲ್ಲಿ ನಡೆಯುತ್ತಿರುವ ಪ್ರತಿಭಟನೆಯ ವೇಳೆ ವೇದಿಕೆಯಲ್ಲಿ ಕೆಲವು ಭಾಷಣಗಳು ಹಿಂದೂಗಳ ಧಾರ್ಮಿಕ ಭಾವನೆಗಳಿಗೆ ಧಕ್ಕೆ ತರುವಂತಿವೆ ಎಂದು ಆರೋಪಿಸಲಾಗಿದೆ. ಹಾಸ್ಯ ಕಲಾವಿದ ಕುನಾಲ್ ಕಮ್ರಾ ಅವರು ಸರ್ಕಾರದ ವಿರುದ್ಧ ಟೀಕೆ ಮಾಡುವ ವೇಳೆ ಶ್ರೀರಾಮನ ಹೆಸರನ್ನು ಉಲ್ಲೇಖಿಸಿ ಅವಹೇಳನಕಾರಿ ಹೇಳಿಕೆ ನೀಡಿದ್ದಾರೆ ಎಂದು ದೂರಿನಲ್ಲಿ ಉಲ್ಲೇಖಿಸಲಾಗಿದೆ.

ಇದೇ ವೇಳೆ ಪ್ರತಿಭಟನಾ ವೇದಿಕೆಯಲ್ಲಿ ಮಹಿಳೆಯೊಬ್ಬರು ಪಾಕಿಸ್ತಾನದ ಕವಿ ಫೈಜ್ ಅಹ್ಮದ್ ಫೈಜ್ ಅವರ ಹಾಡನ್ನು ಹಾಡಿದ್ದು, ಅದರಲ್ಲಿನ ಸಾಲುಗಳು ಹಿಂದೂ ಧರ್ಮ ಮತ್ತು ಮೂರ್ತಿ ಪೂಜೆಯ ವಿರುದ್ಧ ಪ್ರಚೋದನಕಾರಿ ಸ್ವರೂಪದ್ದಾಗಿವೆ ಎಂದು ದೂರಿನಲ್ಲಿ ಆರೋಪಿಸಲಾಗಿದೆ.



ದೂರಿನಲ್ಲಿ ಮತ್ತೊಂದು ಪ್ರಮುಖ ಆರೋಪವಾಗಿ, ನಿಷೇಧಿತ ಸಂಘಟನೆ ಸಿಮಿಯೊಂದಿಗೆ ಸಂಬಂಧ ಹೊಂದಿದ್ದಾರೆ ಎಂದು ಆರೋಪಿಸಲಾಗಿರುವ ಉಮರ್ ಖಾಲಿದ್ ಅವರ ತಂದೆ ಸೈಯದ್ ಕಾಸಿಮ್ ರಸೂಲ್ ಇಲ್ಯಾಸ್ ಅವರು ಪ್ರತಿಭಟನಾ ವೇದಿಕೆಯಲ್ಲಿ ಉಪಸ್ಥಿತರಿದ್ದರು ಎಂದು ಹೇಳಲಾಗಿದೆ.

ನಟ ಪ್ರಕಾಶ್ ರಾಜ್ ಅವರು ಪ್ರತಿಭಟನಾ ವೇದಿಕೆಯಲ್ಲಿ ನೀಡಿದ ಭಾಷಣದಲ್ಲಿಯೂ ಕೆಲವು ಹೇಳಿಕೆಗಳು ಯುವಕರನ್ನು ವ್ಯವಸ್ಥೆಯ ವಿರುದ್ಧ ಪ್ರಚೋದಿಸುವ ರೀತಿಯಲ್ಲಿದ್ದು, ಈ ಪ್ರತಿಭಟನೆ ವಿದ್ಯಾರ್ಥಿಗಳ ಸಮಸ್ಯೆಗೆ ಸೀಮಿತವಾಗಿರದೆ ರಾಜಕೀಯ ಸ್ವರೂಪ ಪಡೆದುಕೊಂಡಿದೆ ಎಂದು ದೂರುದಾರರು ಆರೋಪಿಸಿದ್ದಾರೆ.

ಈ ದೂರಿನಲ್ಲಿ ಸುಪ್ರೀಂ ಕೋರ್ಟ್‌ನ ದ್ವೇಷ ಭಾಷಣ ಕುರಿತ ತೀರ್ಪನ್ನು ಉಲ್ಲೇಖಿಸಿ, ಪೊಲೀಸರು ಸ್ವಯಂಪ್ರೇರಿತವಾಗಿ ಪ್ರಕರಣ ದಾಖಲಿಸಿ ತನಿಖೆ ನಡೆಸಬೇಕು ಎಂದು ಮನವಿ ಮಾಡಲಾಗಿದೆ. ಭಾರತೀಯ ನ್ಯಾಯ ಸಂಹಿತೆಯ ಧಾರ್ಮಿಕ ಭಾವನೆಗಳಿಗೆ ಧಕ್ಕೆ, ದ್ವೇಷ ಪ್ರಚೋದನೆ ಹಾಗೂ ರಾಷ್ಟ್ರದ ಸಮಗ್ರತೆಗೆ ಧಕ್ಕೆ ಸಂಬಂಧಿತ ವಿವಿಧ ಕಲಂಗಳಡಿ ಎಫ್‌ಐಆರ್ ದಾಖಲಿಸುವಂತೆ ಆಗ್ರಹಿಸಲಾಗಿದೆ. ಸುಪ್ರೀಂ ಕೋರ್ಟ್ ವಕೀಲರಾದ ಮಕರಂದ್ ಅಡ್ಕರ್, ಅಮಿತಾ ಸಚ್‌ದೇವ್, ಅತುಲ್ ಶರ್ಮಾ, ಮಯಾಂಕ್ ದ್ವಿವೇದಿ, ಕೇಶರಿ ಸತ್ಯ, ಪಾರ್ಥ್ ಯಾದವ್, ಯಾದವೇಂದ್ರ ಸಕ್ಸೇನಾ ಹಾಗೂ ಹಿಂದೂ ಜನಜಾಗೃತಿ ಸಮಿತಿಯ ದೆಹಲಿ ರಾಜ್ಯ ಸಂಯೋಜಕರಾದ ಕಾರ್ತಿಕ್ ಸಾಳುಂಕೆ ಮತ್ತು ಶ್ರೀರಾಮ್ ಲುಕತುಕೆ ಅವರು ಸಂಸದ್ ಮಾರ್ಗ ಪೊಲೀಸ್ ಠಾಣೆಯ ಅಧಿಕಾರಿಗಳನ್ನು ಭೇಟಿ ಮಾಡಿ ದೂರು ಸಲ್ಲಿಸಿದರು.

ದೂರಿನಲ್ಲಿ, ಜಂತರ್-ಮಂತರ್‌ನಲ್ಲಿ ನಡೆಯುತ್ತಿರುವ ಪ್ರತಿಭಟನೆಯ ವೇಳೆ ವೇದಿಕೆಯಲ್ಲಿ ಕೆಲವು ಭಾಷಣಗಳು ಹಿಂದೂಗಳ ಧಾರ್ಮಿಕ ಭಾವನೆಗಳಿಗೆ ಧಕ್ಕೆ ತರುವಂತಿವೆ ಎಂದು ಆರೋಪಿಸಲಾಗಿದೆ. ಹಾಸ್ಯ ಕಲಾವಿದ ಕುನಾಲ್ ಕಮ್ರಾ ಅವರು ಸರ್ಕಾರದ ವಿರುದ್ಧ ಟೀಕೆ ಮಾಡುವ ವೇಳೆ ಶ್ರೀರಾಮನ ಹೆಸರನ್ನು ಉಲ್ಲೇಖಿಸಿ ಅವಹೇಳನಕಾರಿ ಹೇಳಿಕೆ ನೀಡಿದ್ದಾರೆ ಎಂದು ದೂರಿನಲ್ಲಿ ಉಲ್ಲೇಖಿಸಲಾಗಿದೆ.

ಇದೇ ವೇಳೆ ಪ್ರತಿಭಟನಾ ವೇದಿಕೆಯಲ್ಲಿ ಮಹಿಳೆಯೊಬ್ಬರು ಪಾಕಿಸ್ತಾನದ ಕವಿ ಫೈಜ್ ಅಹ್ಮದ್ ಫೈಜ್ ಅವರ ಹಾಡನ್ನು ಹಾಡಿದ್ದು, ಅದರಲ್ಲಿನ ಸಾಲುಗಳು ಹಿಂದೂ ಧರ್ಮ ಮತ್ತು ಮೂರ್ತಿ ಪೂಜೆಯ ವಿರುದ್ಧ ಪ್ರಚೋದನಕಾರಿ ಸ್ವರೂಪದ್ದಾಗಿವೆ ಎಂದು ದೂರಿನಲ್ಲಿ ರೋಪಿಸಲಾಗಿದೆ.

ದೂರಿನಲ್ಲಿ ಮತ್ತೊಂದು ಪ್ರಮುಖ ಆರೋಪವಾಗಿ, ನಿಷೇಧಿತ ಸಂಘಟನೆ ಸಿಮಿಯೊಂದಿಗೆ ಸಂಬಂಧ ಹೊಂದಿದ್ದಾರೆ ಎಂದು ಆರೋಪಿಸಲಾಗಿರುವ ಉಮರ್ ಖಾಲಿದ್ ಅವರ ತಂದೆ ಸೈಯದ್ ಕಾಸಿಮ್ ರಸೂಲ್ ಇಲ್ಯಾಸ್ ಅವರು ಪ್ರತಿಭಟನಾ ವೇದಿಕೆಯಲ್ಲಿ ಉಪಸ್ಥಿತರಿದ್ದರು ಎಂದು ಹೇಳಲಾಗಿದೆ.

ನಟ ಪ್ರಕಾಶ್ ರಾಜ್ ಅವರು ಪ್ರತಿಭಟನಾ ವೇದಿಕೆಯಲ್ಲಿ ನೀಡಿದ ಭಾಷಣದಲ್ಲಿಯೂ ಕೆಲವು ಹೇಳಿಕೆಗಳು ಯುವಕರನ್ನು ವ್ಯವಸ್ಥೆಯ ವಿರುದ್ಧ ಪ್ರಚೋದಿಸುವ ರೀತಿಯಲ್ಲಿದ್ದು, ಈ ಪ್ರತಿಭಟನೆ ವಿದ್ಯಾರ್ಥಿಗಳ ಸಮಸ್ಯೆಗೆ ಸೀಮಿತವಾಗಿರದೆ ರಾಜಕೀಯ ಸ್ವರೂಪ ಪಡೆದುಕೊಂಡಿದೆ ಎಂದು ದೂರುದಾರರು ಆರೋಪಿಸಿದ್ದಾರೆ.

ಈ ದೂರಿನಲ್ಲಿ ಸುಪ್ರೀಂ ಕೋರ್ಟ್‌ನ ದ್ವೇಷ ಭಾಷಣ ಕುರಿತ ತೀರ್ಪನ್ನು ಉಲ್ಲೇಖಿಸಿ, ಪೊಲೀಸರು ಸ್ವಯಂಪ್ರೇರಿತವಾಗಿ ಪ್ರಕರಣ ದಾಖಲಿಸಿ ತನಿಖೆ ನಡೆಸಬೇಕು ಎಂದು ಮನವಿ ಮಾಡಲಾಗಿದೆ.

ಭಾರತೀಯ ನ್ಯಾಯ ಸಂಹಿತೆಯ ಧಾರ್ಮಿಕ ಭಾವನೆಗಳಿಗೆ ಧಕ್ಕೆ, ದ್ವೇಷ ಪ್ರಚೋದನೆ ಹಾಗೂ ರಾಷ್ಟ್ರದ ಸಮಗ್ರತೆಗೆ ಧಕ್ಕೆ ಸಂಬಂಧಿತ ವಿವಿಧ ಕಲಂಗಳಡಿ ಎಫ್‌ಐಆರ್ ದಾಖಲಿಸುವಂತೆ ಆಗ್ರಹಿಸಲಾಗಿದೆ.

ಇದರ ಜೊತೆಗೆ, ಪ್ರತಿಭಟನೆಗೆ ಹಣಕಾಸಿನ ಮೂಲಗಳು ಹಾಗೂ ನಿಷೇಧಿತ ಸಂಘಟನೆಗಳೊಂದಿಗೆ ಯಾವುದೇ ಸಂಪರ್ಕವಿದೆಯೇ ಎಂಬುದರ ಕುರಿತು ಕಾನೂನುಬಾಹಿರ ಚಟುವಟಿಕೆಗಳ ತಡೆ ಕಾಯ್ದೆಯಡಿ ಸಮಗ್ರ ತನಿಖೆ ನಡೆಸುವಂತೆ ಕೇಂದ್ರ ಗೃಹ ಸಚಿವಾಲಯ ಮತ್ತು ದೆಹಲಿ ಪೊಲೀಸ್ ಆಯುಕ್ತರಿಗೆ ಸಹ ಮನವಿ ಸಲ್ಲಿಸಲಾಗಿದೆ.

ಇದರ ಜೊತೆಗೆ, ಪ್ರತಿಭಟನೆಗೆ ಹಣಕಾಸಿನ ಮೂಲಗಳು ಹಾಗೂ ನಿಷೇಧಿತ ಸಂಘಟನೆಗಳೊಂದಿಗೆ ಯಾವುದೇ ಸಂಪರ್ಕವಿದೆಯೇ ಎಂಬುದರ ಕುರಿತು ಕಾನೂನುಬಾಹಿರ ಚಟುವಟಿಕೆಗಳ ತಡೆ ಕಾಯ್ದೆಯಡಿ ಸಮಗ್ರ ತನಿಖೆ ನಡೆಸುವಂತೆ ಕೇಂದ್ರ ಗೃಹ ಸಚಿವಾಲಯ ಮತ್ತು ದೆಹಲಿ ಪೊಲೀಸ್ ಆಯುಕ್ತರಿಗೆ ಸಹ ಮನವಿ ಸಲ್ಲಿಸಲಾಗಿದೆ.

3S ಭಾರತ ಸಾರಥಿ
22/07/2026
BHARATHA SARATHI KANNADA DAILY NEWS PAPER
ಬೆಂಗಳೂರು । ಬೆಂ.ಗ್ರಾಮಾಂತರ । ತುಮಕೂರು । ಮೈಸೂರು । ಮಂಡ್ಯ । ರಾಮನಗರ । ಕೋಲಾರ । ಚಿಕ್ಕಬಳ್ಳಾಪುರ । ಚಿತ್ರದುರ್ಗ । ದಾವಣಗೆರೆ । ಶಿವಮೊಗ್ಗ । ಮಂಗಳೂರು । ಉಡುಪಿ । ಹುಬ್ಬಳ್ಳಿ । ಮಡಿಕೇರಿ । ಚಿಕ್ಕಮಗಳೂರು । ಹಾಸನ । ಬಳ್ಳಾರಿ
ಇ-ಪೇಪರ್: www.epaperbharathasarathi.com | ಇಮೇಲ್: desk.newsbox@gmail.com

# ಸೆಪ್ಟೆಂಬರ್ 30ರವರೆಗೆ ಹಲವು ರೈಲುಗಳ ತಾತ್ಕಾಲಿಕ ನಿಲುಗಡೆ ವಿಸ್ತರಣೆ

ಬೆಂಗಳೂರು

ಪ್ರಯಾಣಿಕರ ಅನುಕೂಲಕ್ಕಾಗಿ ವಿವಿಧ ರೈಲುಗಳ ಆಯ್ದ ನಿಲ್ದಾಣಗಳಲ್ಲಿನ ತಾತ್ಕಾಲಿಕ ನಿಲುಗಡೆಯನ್ನು ನೈರುತ್ಯ ರೈಲ್ವೆ 2026ರ ಸೆಪ್ಟೆಂಬರ್ 30ರವರೆಗೆ ವಿಸ್ತರಿಸಿದೆ. ಈ ಹಿಂದೆ ಜೂನ್ 30ರವರೆಗೆ ಜಾರಿಯಲ್ಲಿದ್ದ ನಿಲುಗಡೆಗಳನ್ನು ಇದೀಗ ಇನ್ನೂ ಮೂರು ತಿಂಗಳ ಕಾಲ ಮುಂದುವರಿಸಲು ನಿರ್ಧರಿಸಲಾಗಿದೆ.

ರೈಲು ಸಂಖ್ಯೆ 56519/56520 ಕೆಎಸ್‌ಆರ್ ಬೆಂಗಳೂರು–ಹೊಸಪೇಟೆ–ಕೆಎಸ್‌ಆರ್ ಬೆಂಗಳೂರು ಪ್ಯಾಸೆಂಜರ್ ರೈಲು ದೇವನೂರು, ಹೊಳಲ್ಕೆರೆ ಮತ್ತು ಅಮೃತಾಪುರ ನಿಲ್ದಾಣಗಳಲ್ಲಿ ಸೆಪ್ಟೆಂಬರ್ 30ರವರೆಗೆ ನಿಲುಗಡೆ ಮುಂದುವರಿಸಲಿದೆ.

20675/20676 ಬೆಳಗಾವಿ–ಮೈಸೂರು–ಬೆಳಗಾವಿ ವಿಶ್ವಮಾನವ ಎಕ್ಸ್‌ಪ್ರೆಸ್ ಹಾಗೂ 17391/17392 ಕೆಎಸ್‌ಆರ್ ಬೆಂಗಳೂರು–ಸಿಂಧನೂರು–ಕೆಎಸ್‌ಆರ್ ಬೆಂಗಳೂರು ಎಕ್ಸ್‌ಪ್ರೆಸ್ ರೈಲುಗಳು ರಾಮಗಿರಿ ನಿಲ್ದಾಣದಲ್ಲಿ ತಾತ್ಕಾಲಿಕವಾಗಿ ನಿಲುಗಡೆ ಮುಂದುವರಿಸಲಿವೆ.

16587/16588 ಯಶವಂತಪುರ–ಬಿಕಾನೇರ್–ಯಶವಂತಪುರ ಎಕ್ಸ್‌ಪ್ರೆಸ್ ರೈಲು ಬೀರೂರು ನಿಲ್ದಾಣದಲ್ಲಿ ಹಾಗೂ 17391/17392 ಕೆಎಸ್‌ಆರ್ ಬೆಂಗಳೂರು–ಸಿಂಧನೂರು–ಕೆಎಸ್‌ಆರ್ ಬೆಂಗಳೂರು ಎಕ್ಸ್‌ಪ್ರೆಸ್ ರೈಲು ಚಳಗೇರಿ ನಿಲ್ದಾಣದಲ್ಲಿ ಸೆಪ್ಟೆಂಬರ್ 30ರವರೆಗೆ ನಿಲುಗಡೆ ಹೊಂದಿರಲಿದೆ.

20651/20652 ಕೆಎಸ್‌ಆರ್ ಬೆಂಗಳೂರು–ತಾಳಗುಪ್ಪ–ಕೆಎಸ್‌ಆರ್ ಬೆಂಗಳೂರು ಎಕ್ಸ್‌ಪ್ರೆಸ್ ರೈಲು ಅರಸಾಳು ಮತ್ತು ಕುಂಸಿ ನಿಲ್ದಾಣಗಳಲ್ಲಿ ತಾತ್ಕಾಲಿಕ ನಿಲುಗಡೆ ಮುಂದುವರಿಸಲಿದ್ದು, 16579/16580 ಯಶವಂತಪುರ–ಶಿವಮೊಗ್ಗ ಟೌನ್–ಯಶವಂತಪುರ ಎಕ್ಸ್‌ಪ್ರೆಸ್ ರೈಲು ಚಿಕ್ಕಬಾಣಾವರ ನಿಲ್ದಾಣದಲ್ಲಿ ನಿಲುಗಡೆ ಮುಂದುವರಿಸಲಿದೆ.

ಇದೇ ರೀತಿ, 16239/16240 ಚಿಕ್ಕಮಗಳೂರು–ಯಶವಂತಪುರ–ಚಿಕ್ಕಮಗಳೂರು ಎಕ್ಸ್‌ಪ್ರೆಸ್ ರೈಲು ಸಂಪಿಗೆ ರೋಡ್ ನಿಲ್ದಾಣದಲ್ಲಿ ಹಾಗೂ 16228 ತಾಳಗುಪ್ಪ–ಮೈಸೂರು ಎಕ್ಸ್‌ಪ್ರೆಸ್ ರೈಲು ಮಲ್ಲೇಶ್ವರಂ ನಿಲ್ದಾಣದಲ್ಲಿ ತಾತ್ಕಾಲಿಕ ನಿಲುಗಡೆಯನ್ನು ಸೆಪ್ಟೆಂಬರ್ 30ರವರೆಗೆ ಮುಂದುವರಿಸಲಿದೆ.

16315/16316 ಮೈಸೂರು–ತಿರುವನಂತಪುರಂ ನಾರ್ತ್–ಮೈಸೂರು ಎಕ್ಸ್‌ಪ್ರೆಸ್ ರೈಲು ಮದ್ದೂರು ನಿಲ್ದಾಣದಲ್ಲಿ ನಿಲುಗಡೆ ಮುಂದುವರಿಸಲಿದ್ದು, 66553 ಕೆಎಸ್‌ಆರ್ ಬೆಂಗಳೂರು–ಅಶೋಕಪುರಂ ಮೆಮು ರೈಲು ಕೃಷ್ಣದೇವರಾಯ ಹಾಲ್ಟ್ ನಿಲ್ದಾಣದಲ್ಲಿ ತಾತ್ಕಾಲಿಕವಾಗಿ ನಿಲ್ಲಲಿದೆ.

ಇದಲ್ಲದೆ, 66519/66520 ಮಾರಿಕುಪ್ಪಂ–ಕೆಎಸ್‌ಆರ್ ಬೆಂಗಳೂರು–ಮಾರಿಕುಪ್ಪಂ ಮೆಮು ಹಾಗೂ 16521 ಬಂಗಾರಪೇಟೆ–ಕೆಎಸ್‌ಆರ್ ಬೆಂಗಳೂರು ಮೆಮು ರೈಲುಗಳು ದೇವನಗೊಂಥಿ ನಿಲ್ದಾಣದಲ್ಲಿ ಸೆಪ್ಟೆಂಬರ್ 30ರವರೆಗೆ ತಮ್ಮ ತಾತ್ಕಾಲಿಕ ನಿಲುಗಡೆಯನ್ನು ಮುಂದುವರಿಸಲಿವೆ.

ನೈರುತ್ಯ ರೈಲ್ವೆ ಪ್ರಕಟಣೆಯ ಪ್ರಕಾರ, ಈ ವಿಸ್ತರಣೆಯಿಂದ ಆಯಾ ಪ್ರದೇಶಗಳ ಪ್ರಯಾಣಿಕರಿಗೆ ಅನುಕೂಲವಾಗಲಿದೆ.



ವಿಧಾನ ಪರಿಷತ್ ನೂತನ ಸದಸ್ಯರಾಗಿ ಆಯ್ಕೆಯಾಗಿರುವ ಕಾಂಗ್ರೆಸ್ ಪಕ್ಷದ ಬಿ.ಕೆ. ಹರಿಪ್ರಸಾದ್, ಪಿ.ವಿ.ಮೋಹನ್, ಶಿವಣ್ಣ ಮಳವಳ್ಳಿ, ತಿಪ್ಪಣ್ಣಪ್ಪ ಕಮಕನೂರ್ ಹಾಗೂ ವಿನಯ್ ಕಾರ್ತಿಕ್, ಬಿಜೆಪಿಯ ಕೌಟಿಲ್ಯ ರಘು ಹಾಗೂ ಅಂಗರಾಜ ಪಾಟೀಲ್ ಅವರು ಗುರುವಾರ ವಿಧಾನಸೌಧದಲ್ಲಿ ಪ್ರಮಾಣವಚನ ಸ್ವೀಕರಿಸಿದರು. ಸಿಎಂ ಡಿ.ಕೆ.ಶಿವಕುಮಾರ್, ಡಿಸಿಎಂ ಪರಮೇಶ್ವರ್, ವಿಧಾನ ಪರಿಷತ್ ಸಭಾಪತಿಗಳಾದ ಬಸವರಾಜ ಹೊರಟ್ಟಿ, ವಿಧಾನಸಭೆ ಉಪಸಭಾಧ್ಯಕ್ಷರಾದ ರುದ್ರಪ್ಪ ಲಮಾಣಿ ಅವರು ಉಪಸ್ಥಿತರಿದ್ದರು.

# ನೈರುತ್ಯ ರೈಲ್ವೆಯಲ್ಲಿ ರಾಷ್ಟ್ರೀಯ ವೈದ್ಯರ ದಿನಾಚರಣೆ



ಹುಬ್ಬಳ್ಳಿ

ನೈರುತ್ಯ ರೈಲ್ವೆಯ ವೈದ್ಯಕೀಯ ವಿಭಾಗವು ವೈದ್ಯರ ಸಮರ್ಪಿತ ಸೇವೆಯನ್ನು ಗೌರವಿಸುವ ಹಾಗೂ ಸಾರ್ವಜನಿಕರಲ್ಲಿ ಆರೋಗ್ಯ ಜಾಗೃತಿ ಮೂಡಿಸುವ ಉದ್ದೇಶದಿಂದ 'ರಾಷ್ಟ್ರೀಯ ವೈದ್ಯರ ದಿನಾಚರಣೆ–2026' ಅನ್ನು ವಿವಿಧ ಕಾರ್ಯಕ್ರಮಗಳ ಮೂಲಕ ಅರ್ಥಪೂರ್ಣವಾಗಿ ಆಚರಿಸಿತು.

ಹುಬ್ಬಳ್ಳಿಯ ಸೆಂಟ್ರಲ್ ಆಸ್ಪತ್ರೆಯಲ್ಲಿ ನಡೆದ ಕಾರ್ಯಕ್ರಮದಲ್ಲಿ ನೈರುತ್ಯ ರೈಲ್ವೆಯ ಪ್ರಧಾನ ಮುಖ್ಯ ವೈದ್ಯಕೀಯ ನಿರ್ದೇಶಕರಾದ ಡಾ. ಶೋಭಾ ಜಾಸ್ಮಿನ್ ಎಸ್. ಅವರು ವೈದ್ಯರೊಂದಿಗೆ ಸಂವಾದ ನಡೆಸಿ, ರೈಲ್ವೆ ಆರೋಗ್ಯ ಸೇವೆಗೆ ಅವರು ಸಲ್ಲಿಸುತ್ತಿರುವ ನಿಸ್ವಾರ್ಥ ಸೇವೆಯನ್ನು ಶ್ಲಾಘಿಸಿದರು. ಇದೇ ಸಂದರ್ಭದಲ್ಲಿ ಹಿರಿಯ ವೈದ್ಯರನ್ನು ಸನ್ಮಾನಿಸಲಾಯಿತು. ವೈದ್ಯಕೀಯ ವೃತ್ತಿಯಲ್ಲಿನ ನೈತಿಕತೆ, ಸಹಾನುಭೂತಿ ಹಾಗೂ ಸೇವಾ ಮನೋಭಾವವನ್ನು ಮತ್ತಷ್ಟು ಬಲಪಡಿಸುವ ಉದ್ದೇಶದಿಂದ ವೈದ್ಯರಿಗೆ 'ವೈದ್ಯರ ಪ್ರತಿಜ್ಞಾವಿಧಿ' ಬೋಧಿಸಲಾಯಿತು. ಕಾರ್ಯಕ್ರಮದಲ್ಲಿ ಪಾಲ್ಗೊಂಡಿದ್ದ ನಿವೃತ್ತ ರೈಲ್ವೆ ಉದ್ಯೋಗಿಗಳು ವೈದ್ಯರಿಗೆ ಶುಭಾಶಯಗಳನ್ನು ತಿಳಿಸಿ ಅಭಿನಂದಿಸಿದರು.

ರಾಷ್ಟ್ರೀಯ ವೈದ್ಯರ ದಿನಾಚರಣೆಯ ಅಂಗವಾಗಿ ಬೆಂಗಳೂರು ವಿಭಾಗೀಯ ರೈಲ್ವೆ ಆಸ್ಪತ್ರೆಯಲ್ಲಿ ಸುಮಾರು 50 ಮಂದಿ ಹೌಸ್‌ಕೀಪಿಂಗ್ ಸಿಬ್ಬಂದಿಗಾಗಿ ಆರೋಗ್ಯ ತಪಾಸಣೆ ಹಾಗೂ ಆರೋಗ್ಯ ಜಾಗೃತಿ ಕಾರ್ಯಕ್ರಮವನ್ನು ಆಯೋಜಿಸಲಾಗಿತ್ತು. ಈ ವೇಳೆ ಅಧಿಕ ರಕ್ತದೊತ್ತಡ, ಮಧುಮೇಹ ಹಾಗೂ ಹೆಚ್.ಐ.ವಿ. ತಪಾಸಣೆ ನಡೆಸಿ, ಆರೋಗ್ಯ ಕುರಿತು ಅಗತ್ಯ ಸಲಹೆಗಳನ್ನು ನೀಡಲಾಯಿತು.

ಇದೇ ಸಂದರ್ಭದಲ್ಲಿ ಸುಬ್ರಹ್ಮಣ್ಯ ರೋಡ್ ರೈಲ್ವೆ ನಿಲ್ದಾಣದಲ್ಲಿ ಕಬಕಪುತ್ತೂರು ಆರೋಗ್ಯ ಘಟಕದ ವತಿಯಿಂದ ಸಾರ್ವಜನಿಕ ಆರೋಗ್ಯ ಶಿಬಿರವನ್ನು ಆಯೋಜಿಸಿ, ಅಧಿಕ ರಕ್ತದೊತ್ತಡ, ಮಧುಮೇಹ ಮತ್ತು ಬೊಜ್ಜಿನ ತಪಾಸಣೆ ನಡೆಸಲಾಯಿತು. ಜೊತೆಗೆ ಸಣ್ಣಪುಟ್ಟ ಆರೋಗ್ಯ ಸಮಸ್ಯೆಗಳಿಗೆ ಚಿಕಿತ್ಸೆ ಹಾಗೂ ವೈದ್ಯಕೀಯ ಸಲಹೆಗಳನ್ನು ಒದಗಿಸಲಾಯಿತು.

ಇದರೊಂದಿಗೆ, ಹುಬ್ಬಳ್ಳಿಯ ಕ್ಯಾರೇಜ್ ವರ್ಕ್‌ಶಾಪ್‌ನ ಅಧಿಕಾರಿಗಳು ಮತ್ತು ಮೇಲ್ವಿಚಾರಕರಿಗಾಗಿ ವೈದ್ಯಕೀಯ ವಿಭಾಗವು ಕಾರ್ಡಿಯೋಪಲ್ಮನರಿ ರಿಸಸಿಟೇಶನ್ (ಸಿ.ಪಿ.ಆರ್.) ಹಾಗೂ ಬೇಸಿಕ್ ಲೈಫ್ ಸಪೋರ್ಟ್ (ಬಿ.ಎಲ್.ಎಸ್.) ಕುರಿತು ವಿಶೇಷ ತರಬೇತಿ ಕಾರ್ಯಕ್ರಮವನ್ನು ಆಯೋಜಿಸಿತು. ನೇರ ಪ್ರಾತ್ಯಕ್ಷಿಕೆಯ ಮೂಲಕ ಜೀವ ರಕ್ಷಕ ತಂತ್ರಗಳು ಹಾಗೂ ತುರ್ತು ಪರಿಸ್ಥಿತಿಗಳಲ್ಲಿ ಕೈಗೊಳ್ಳಬೇಕಾದ ಕ್ರಮಗಳ ಕುರಿತು ವಿವರವಾದ ಮಾಹಿತಿ ನೀಡಲಾಯಿತು. ವರ್ಕ್‌ಶಾಪ್‌ನ ಅಧಿಕಾರಿಗಳು, ಮೇಲ್ವಿಚಾರಕರು ಹಾಗೂ ಸಿಬ್ಬಂದಿ ಈ ತರಬೇತಿಯಲ್ಲಿ ಉತ್ಸಾಹದಿಂದ ಪಾಲ್ಗೊಂಡು ಕಾರ್ಯಕ್ರಮದ ಪ್ರಯೋಜನ ಪಡೆದುಕೊಂಡರು.

# 'ಹಳಕಟ್ಟಿ ಇಲ್ಲದಿದ್ದರೆ ಶರಣ ಸಂಸ್ಕೃತಿಯೇ ಕಣ್ಮರೆಯಾಗುತ್ತಿತ್ತು'

ಬೆಂಗಳೂರು

ಅಜ್ಞಾತವಾಗಿದ್ದು, ವಿವಿಧೆಡೆ ಚೆಲ್ಲಾಪಿಲ್ಲಿಯಾಗಿದ್ದ ವಚನ ಸಾಹಿತ್ಯವನ್ನು ಸಂಗ್ರಹಿಸಿ ಬೆಳಕಿಗೆ ತಂದ ಮಹತ್ವದ ಕೀರ್ತಿ ಫ.ಗು. ಹಳಕಟ್ಟಿ ಅವರಿಗೆ ಸಲ್ಲುತ್ತದೆ. ಅವರು ಈ ಕಾರ್ಯ ಮಾಡದೇ ಇದ್ದಿದ್ದರೆ ಶರಣ ಸಂಸ್ಕೃತಿ, ಲಿಂಗಾಯತ ಧರ್ಮ ಹಾಗೂ ಬಸವಾದಿ ಶರಣರ ಪರಂಪರೆಯ ಅಮೂಲ್ಯ ಸಾಹಿತ್ಯವೇ ಕಣ್ಮರೆಯಾಗುತ್ತಿತ್ತು ಎಂದು ಬೃಹತ್ ಮತ್ತು ಮಧ್ಯಮ ಕೈಗಾರಿಕಾ ಸಚಿವ ಎಂ.ಬಿ. ಪಾಟೀಲ ಹೇಳಿದರು.

ಕರ್ನಾಟಕ ರಾಜ್ಯ ಮುದ್ರಣಕಾರರ ಸಂಘ ಹಾಗೂ ವಿಜಯಪುರದ ಫ.ಗು. ಹಳಕಟ್ಟಿ ಸಂಶೋಧನಾ ಕೇಂದ್ರದ ಸಹಯೋಗದಲ್ಲಿ ಬೆಂಗಳೂರಿನ ತಮ್ಮ ನಿವಾಸದಲ್ಲಿ ಆಯೋಜಿಸಿದ್ದ ಫ.ಗು. ಹಳಕಟ್ಟಿ ಜನ್ಮದಿನ ಹಾಗೂ ವಚನ ಸಂರಕ್ಷಣಾ ದಿನಾಚರಣೆ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು.

ಧಾರವಾಡ ಸೀಮೆಯವರಾದ ಫ.ಗು. ಹಳಕಟ್ಟಿ ವಿಜಯಪುರವನ್ನು ತಮ್ಮ ಕಾರ್ಯಕ್ಷೇತ್ರವನ್ನಾಗಿ ಮಾಡಿಕೊಂಡು ಅಪಾರವಾದ ಸಂಶೋಧನಾ ಕಾರ್ಯ ನಡೆಸಿದರು. ಅವರ ಪರಿಶ್ರಮದಿಂದ ನೂರಾರು ವಚನಕಾರರು ನಾಡಿಗೆ ಪರಿಚಿತರಾದರು. ವಚನ ಸಾಹಿತ್ಯವನ್ನು ಸಂಗ್ರಹಿಸಿ ಸಂರಕ್ಷಿಸುವುದರ ಜೊತೆಗೆ ಮುದ್ರಣಾಲಯವನ್ನು ಸ್ಥಾಪಿಸುವ ಮೂಲಕ ಜ್ಞಾನ ಪ್ರಸಾರಕ್ಕೂ ಅವರು ಮಹತ್ತರ ಕೊಡುಗೆ ನೀಡಿದರು ಎಂದು ಸಚಿವರು ಸ್ಮರಿಸಿದರು.

ಬಸವಕಲ್ಯಾಣದಲ್ಲಿ ನಿರ್ಮಾಣವಾಗುತ್ತಿರುವ ನೂತನ ಅನುಭವ ಮಂಟಪ ಕುರಿತು ಮಾತನಾಡಿದ ಅವರು, ಇಲ್ಲಿ ಕೈಗೊಳ್ಳಬೇಕಾದ



ಕಾರ್ಯಕ್ರಮಗಳ ಕುರಿತು ಶರಣ ಸಾಹಿತ್ಯ ಪರಿಷತ್ತು ಹಲವು ಸಲಹೆಗಳನ್ನು ನೀಡಿದ್ದು, ಅವುಗಳನ್ನು ಸರ್ಕಾರದ ಮಟ್ಟದಲ್ಲಿ ಪರಿಶೀಲಿಸಿ ಜಾರಿಗೆ ತರಲಾಗುವುದು ಎಂದು ಭರವಸೆ ನೀಡಿದರು.

ಹಿರಿಯ ಸಾಹಿತಿ ಗೊ.ರು. ಚನ್ನಬಸಪ್ಪ ಮಾತನಾಡಿ, ಫ.ಗು. ಹಳಕಟ್ಟಿ ಅವರ ಪರಿಶ್ರಮದಿಂದ ವಿಶ್ವಗುರು ಬಸವಣ್ಣ ಸೇರಿದಂತೆ ಅನೇಕ ಶರಣರ ವಚನಗಳು ಜನಸಾಮಾನ್ಯರಿಗೆ ತಲುಪಿದವು.

ವಚನ ಸಂಸ್ಕೃತಿ ಇಂದು ಹೆಮ್ಮರವಾಗಿ ಬೆಳೆಯಲು ಅವರ ಕೊಡುಗೆ ಅಪಾರವಾಗಿದೆ ಎಂದು ಹೇಳಿದರು.

ವಚನ ಸಾಹಿತ್ಯವನ್ನು ಸಂಗ್ರಹಿಸುವ ಮಹತ್ತರ ಕಾರ್ಯವನ್ನು ಹಳಕಟ್ಟಿ ಅವರು ಮಾಡಿದರೆ, ಅದನ್ನು ವಿಶ್ವದಾದ್ಯಂತ ಪಸರಿಸುವ ಕೆಲಸವನ್ನು ಎಂ.ಬಿ. ಪಾಟೀಲ ಅವರ ನೇತೃತ್ವದ ಬಿಎಲ್‌ಡಿಇ ಸಂಸ್ಥೆ ಮಾಡುತ್ತಿದೆ ಎಂದು ಅವರು ಮೆಚ್ಚುಗೆ ವ್ಯಕ್ತಪಡಿಸಿದರು.

ಕಾರ್ಯಕ್ರಮದಲ್ಲಿ ಸಿ. ಸೋಮಶೇಖರ್, ಅಖಿಲ ಭಾರತ ಮುದ್ರಣಕಾರರ ಸಂಘದ ಅಧ್ಯಕ್ಷ ಸಿ.ಆರ್. ಜನಾರ್ದನ, ಮಾಜಿ ಉಪಮೇಯರ್ ಪುಟ್ಟರಾಜು, ಕಾಂಗ್ರೆಸ್ ಮುಖಂಡ ಮಲ್ಲಿಕಾರ್ಜುನ ಹಾಗೂ ಮುದ್ರಣಕಾರರ ಸಂಘದ ಪದಾಧಿಕಾರಿಗಳಾದ ಅಶೋಕ್ ಕುಮಾರ್, ಸ್ವಾನ್ ಕೃಷ್ಣಮೂರ್ತಿ, ಮರಳವಾಡಿ ಶಿವಶಂಕರ್, ಮಲ್ಲಿಕಾರ್ಜುನ, ಫಾಲನೇತ್ರ, ರಾಜಶೇಖರ್ ಸೇರಿದಂತೆ ಹಲವರು ಉಪಸ್ಥಿತರಿದ್ದರು.

# ಎಸ್‌ಐಆರ್ ಪ್ರಕ್ರಿಯೆ ಸ್ಥಗಿತಗೊಳಿಸಿ, ತಪ್ಪಿತಸ್ಥ ಬಿಎಲ್‌ಒಗಳನ್ನು ಅಮಾನತುಗೊಳಿಸಲು ಆಗ್ರಹ

ಬೆಂಗಳೂರು

ರಾಮನಗರ ವಿಧಾನಸಭಾ ಕ್ಷೇತ್ರದಲ್ಲಿ ನಡೆಯುತ್ತಿರುವ ವಿಶೇಷ ತೀವ್ರ ಪರಿಷ್ಕರಣೆ (ಎಸ್‌ಐಆರ್) ಪ್ರಕ್ರಿಯೆಯಲ್ಲಿ ಗಂಭೀರ ನಿಯಮ ಉಲ್ಲಂಘನೆ ನಡೆದಿದೆ ಎಂದು ಆರೋಪಿಸಿರುವ ಜೆಡಿಎಸ್ ಯುವ ಘಟಕದ ರಾಜ್ಯಾಧ್ಯಕ್ಷ ನಿಖಿಲ್ ಕುಮಾರಸ್ವಾಮಿ ಅವರು ಚುನಾವಣಾ ಆಯೋಗದ ವಿರುದ್ಧ ತೀವ್ರ ಆಕ್ರೋಶ ವ್ಯಕ್ತಪಡಿಸಿದ್ದಾರೆ.

ಈ ಕುರಿತು ಸಾಮಾಜಿಕ ಜಾಲತಾಣ 'ಎಕ್ಸ್' ನಲ್ಲಿ ಸರಣಿ ಪೋಸ್ಟ್‌ಗಳನ್ನು ಹಂಚಿಕೊಂಡಿರುವ ಅವರು, ಮನೆ–ಮನೆಗೆ ತೆರಳಿ ಮತದಾರರ ಮಾಹಿತಿ ಪರಿಶೀಲಿಸಿ ನಮೂನೆಗಳನ್ನು ವಿತರಿಸಬೇಕಾದ ಬೂತ್ ಮಟ್ಟದ ಅಧಿಕಾರಿಗಳು (ಬಿಎಲ್‌ಒ) ರಾಮನಗರ ಟೌನ್ ನಗರಸಭೆಯ ವಾರ್ಡ್ ಸಂಖ್ಯೆ 23ರ ಟಿಪ್ಪುನಗರದ ಕಲ್ಯಾಣ ಮಂಟಪದಲ್ಲಿ ಜನರನ್ನು ಒಟ್ಟುಗೂಡಿಸಿ 'ಎಸ್‌ಐಆರ್ ಜಾತ್ರೆ' ನಡೆಸುತ್ತಿದ್ದಾರೆ ಎಂದು ಆರೋಪಿಸಿದ್ದಾರೆ.

ಇದು ಚುನಾವಣಾ ಆಯೋಗದ ನಿಯಮಗಳನ್ನು ಸಂಪೂರ್ಣವಾಗಿ ಉಲ್ಲಂಘಿಸಿರುವ ಕ್ರಮವಾಗಿದ್ದು, ಪ್ರಜಾಪ್ರಭುತ್ವಕ್ಕೆ ಮಾಡಿದ ಅಣಕ ಎಂದು ಅವರು ಕಿಡಿಕಾರಿದ್ದಾರೆ.

ರಾಮನಗರ ಕ್ಷೇತ್ರದಲ್ಲಿ ನಡೆಯುತ್ತಿರುವ ಎಸ್‌ಐಆರ್ ಪ್ರಕ್ರಿಯೆಯನ್ನು ತಕ್ಷಣವೇ ಸ್ಥಗಿತಗೊಳಿಸಬೇಕು. ಕರ್ನಾಟಕದ ಮುಖ್ಯ ಚುನಾವಣಾಧಿಕಾರಿಗಳು ಖುದ್ದಾಗಿ ಮಧ್ಯಪ್ರವೇಶಿಸಿ ಸಂಪೂರ್ಣ ಪ್ರಕ್ರಿಯೆಯ ಮೇಲ್ವಿಚಾರಣೆ ವಹಿಸಬೇಕು.

ನಿಯಮ ಉಲ್ಲಂಘಿಸಿ ತಮ್ಮಿಷ್ಟದಂತೆ ಕಾರ್ಯನಿರ್ವಹಿಸುತ್ತಿರುವ ಬಿಎಲ್‌ಒ ಅಧಿಕಾರಿಗಳನ್ನು ತಕ್ಷಣ ಅಮಾನತುಗೊಳಿಸಿ, ಅವರ ವಿರುದ್ಧ ಕಠಿಣ ಕಾನೂನು ಕ್ರಮ ಜರುಗಿಸಬೇಕು ಎಂದು ನಿಖಿಲ್ ಕುಮಾರಸ್ವಾಮಿ ಆಗ್ರಹಿಸಿದ್ದಾರೆ.

ಪಾರದರ್ಶಕತೆಗೆ ಹೆಸರಾದ ಚುನಾವಣಾ ಆಯೋಗ ರಾಮನಗರದಲ್ಲಿ ನಡೆಯುತ್ತಿದೆ ಎನ್ನಲಾದ ಅಕ್ರಮಗಳ ಬಗ್ಗೆ ಮೌನ ವಹಿಸದೆ, ತಕ್ಷಣ ಕ್ರಮ ಕೈಗೊಂಡು ತಪ್ಪಿತಸ್ಥರನ್ನು ಶಿಕ್ಷಿಸಬೇಕು. ಪ್ರಜಾಪ್ರಭುತ್ವದ ಮೌಲ್ಯಗಳನ್ನು ಕಾಪಾಡುವ ನಿಟ್ಟಿನಲ್ಲಿ ಚುನಾವಣಾ ಆಯೋಗ ನಿರ್ಣಾಯಕ ಹೆಜ್ಜೆ ಇಡಬೇಕು ಎಂದು ಅವರು ಒತ್ತಾಯಿಸಿದ್ದಾರೆ.

# ಸಾಧಕ ವೈದ್ಯರಿಗೆ 'ಧನ್ವಂತರಿ ಪ್ರಶಸ್ತಿ' ಪ್ರದಾನ

ಬೆಂಗಳೂರು

ಗ್ರೇಟರ್ ಬೆಂಗಳೂರು ಪ್ರಾಧಿಕಾರ ಪಾಲಿಕೆಗಳ ಅಧಿಕಾರಿ ಮತ್ತು ನೌಕರರ ಕ್ಷೇಮಾಭಿವೃದ್ಧಿ ಸಂಘದ ವತಿಯಿಂದ ರಾಷ್ಟ್ರೀಯ ವೈದ್ಯರ ದಿನಾಚರಣೆ ಅಂಗವಾಗಿ ಪಾಲಿಕೆಯಲ್ಲಿ ಅತ್ಯುತ್ತಮ ಸೇವೆ ಸಲ್ಲಿಸಿರುವ ಆರೋಗ್ಯಾಧಿಕಾರಿಗಳು, ಅಧೀಕ್ಷಕರು, ಆರೋಗ್ಯ ವೈದ್ಯಾಧಿಕಾರಿಗಳು ಹಾಗೂ ವೈದ್ಯರನ್ನು ಸನ್ಮಾನಿಸಿ 'ಧನ್ವಂತರಿ ಪ್ರಶಸ್ತಿ' ಪ್ರದಾನ ಮಾಡಲಾಯಿತು.

ಜಿಬಿಎ ನೌಕರರ ಭವನದಲ್ಲಿ ನಡೆದ ಸಮಾರಂಭವನ್ನು ಮುಖ್ಯ ಆಯುಕ್ತ ಎಂ. ಮಹೇಶ್ವರರಾವ್, ಆಯುಕ್ತ ಜಿ. ಜಗದೀಶ್, ವಿಶೇಷ ಆಯುಕ್ತ ಡಾ. ಆರ್. ವೆಂಕಟಚಲಪತಿ, ರಾಜ್ಯ ಸರ್ಕಾರಿ ನೌಕರರ ಸಂಘದ ಅಧ್ಯಕ್ಷ ಕೆ. ಷಡಕ್ಷರಿ, ಕ್ಷೇಮಾಭಿವೃದ್ಧಿ ಸಂಘದ ಅಧ್ಯಕ್ಷ ಎ. ಅಮೃತ್ ರಾಜ್, ಮುಖ್ಯ ಆರೋಗ್ಯಾಧಿಕಾರಿ ಡಾ. ಸೈಯದ್ ಸಿರಾಜುದ್ದೀನ್ ಮದನಿ, ಡಾ. ನಿರ್ಮಲ ಬುಗ್ಗಿ, ಆರೋಗ್ಯಾಧಿಕಾರಿಗಳಾದ ಡಾ. ಎಂ. ಶಿವಕುಮಾರ್ ಹಾಗೂ ಡಾ. ಸಿದ್ದಪ್ಪಾಜಿ ದೀಪ ಬೆಳಗಿಸುವ ಮೂಲಕ ಉದ್ಘಾಟಿಸಿದರು. ಬಳಿಕ ಡಾ. ಬಿಧಾನ್ ಚಂದ್ರ ರಾಯ್ ಅವರ ಭಾವಚಿತ್ರಕ್ಕೆ ಪುಷ್ಪನಮನ ಸಲ್ಲಿಸಿ ಪ್ರಶಸ್ತಿಗಳನ್ನು ಪ್ರದಾನಿಸಲಾಯಿತು.

ಸಮಾರಂಭದಲ್ಲಿ ಮಾತನಾಡಿದ ಮುಖ್ಯ ಆಯುಕ್ತ ಎಂ. ಮಹೇಶ್ವರರಾವ್, ಆರೋಗ್ಯವಂತ ಸಮಾಜ ನಿರ್ಮಾಣಕ್ಕೆ ಗುಣಮಟ್ಟದ ವೈದ್ಯಕೀಯ ಸೇವೆ ಅತ್ಯಗತ್ಯ ಎಂದು ಹೇಳಿದರು. ಜನನ ಪ್ರಮಾಣ ಉತ್ತಮವಾಗಿರಬೇಕು, ಮರಣ ಪ್ರಮಾಣ ಕಡಿಮೆಯಾಗಬೇಕು ಎಂದರೆ ಆರೋಗ್ಯ ವ್ಯವಸ್ಥೆ ಬಲಿಷ್ಠವಾಗಿರಬೇಕು. ಉತ್ತಮ ಆಹಾರ ಪದ್ಧತಿ, ಆಧುನಿಕ ವೈದ್ಯಕೀಯ ಸಂಶೋಧನೆ ಮತ್ತು ಪರಿಣಾಮಕಾರಿ ಆರೋಗ್ಯ ಸೇವೆಗಳು ಸಮಾಜದ ಅಭಿವೃದ್ಧಿಗೆ ಅಗತ್ಯವೆಂದು ತಿಳಿಸಿದರು.

ನಗರದ ನಾಗರಿಕರಿಗೆ ಉತ್ತಮ ವೈದ್ಯಕೀಯ ಸೌಲಭ್ಯ ಒದಗಿಸುವ ನಿಟ್ಟಿನಲ್ಲಿ ಪಾಲಿಕೆಯ



ಆಸ್ಪತ್ರೆಗಳನ್ನು ಮತ್ತಷ್ಟು ಗುಣಮಟ್ಟದ ಸೇವಾ ಕೇಂದ್ರಗಳನ್ನಾಗಿ ರೂಪಿಸಲಾಗುತ್ತಿದೆ. ಈ ಕಾರ್ಯದಲ್ಲಿ ವೈದ್ಯರ ಸಹಕಾರ ಅತ್ಯವಶ್ಯಕ ಎಂದು ಅವರು ಹೇಳಿದರು.

ಆಯುಕ್ತ ಜಿ. ಜಗದೀಶ್ ಮಾತನಾಡಿ, ಡಾ. ಬಿಧಾನ್ ಚಂದ್ರ ರಾಯ್ ಅವರ ಸ್ಮರಣಾರ್ಥ ರಾಷ್ಟ್ರೀಯ ವೈದ್ಯರ ದಿನಾಚರಣೆಯನ್ನು ಆಚರಿಸಲಾಗುತ್ತಿದೆ. ಕೋವಿಡ್ ಸಂಕಷ್ಟದ ಸಂದರ್ಭದಲ್ಲಿ ವೈದ್ಯರು ತಮ್ಮ ಜೀವವನ್ನೇ ಪಣಕ್ಕಿಟ್ಟು ಸಲ್ಲಿಸಿದ ಸೇವೆ ಅವಿಸ್ಮರಣೀಯವಾಗಿದೆ. ಪಾಲಿಕೆ ವ್ಯಾಪ್ತಿಯ ಆಸ್ಪತ್ರೆಗಳನ್ನು ಹೈಟೆಕ್ ಆಸ್ಪತ್ರೆಗಳನ್ನಾಗಿ ರೂಪಿಸುವ ಕಾರ್ಯದಲ್ಲಿ ವೈದ್ಯರು ಕೈಜೋಡಿಸಬೇಕು ಎಂದು ಮನವಿ ಮಾಡಿದರು.

ವಿಶೇಷ ಆಯುಕ್ತ ಡಾ. ಆರ್. ವೆಂಕಟಚಲಪತಿ ಮಾತನಾಡಿ, ವೈದ್ಯರು ದೇವರ ಸಮಾನರು. ಕೋವಿಡ್ ಸಂದರ್ಭದಲ್ಲಿ ಜೀವದ ಹಂಗು ತೊರೆದು ಜನರ ಸೇವೆಗೆ ನಿಂತ ವೈದ್ಯರೊಂದಿಗೆ ಕಾರ್ಯನಿರ್ವಹಿಸಿದ ಅನುಭವ ಸ್ಮರಣೀಯವಾಗಿದೆ ಎಂದು ಹೇಳಿದರು.

ರಾಜ್ಯ ಸರ್ಕಾರಿ ನೌಕರರ ಸಂಘದ ಅಧ್ಯಕ್ಷ ಕೆ. ಷಡಕ್ಷರಿ ಮಾತನಾಡಿ, ವೈದ್ಯರ ಸಮಸ್ಯೆಗಳು ಹಾಗೂ ಸಂಕಷ್ಟಗಳಿಗೆ ನೆರವಾಗುವ ನಿಟ್ಟಿನಲ್ಲಿ ಕ್ಷೇಮಾಭಿವೃದ್ಧಿ ಸಂಘ ನಿರಂತರವಾಗಿ ಕಾರ್ಯನಿರ್ವಹಿಸುತ್ತಿದೆ. ವೈದ್ಯ ವೃತ್ತಿ ಅತ್ಯಂತ ಜವಾಬ್ದಾರಿಯುತವಾಗಿದ್ದು, ಪ್ರಶಸ್ತಿಗಳು ಇನ್ನಷ್ಟು ಸೇವೆ ಸಲ್ಲಿಸಲು ಪ್ರೇರಣೆ ನೀಡುತ್ತವೆ ಎಂದು ಹೇಳಿದರು.

ಸಂಘದ ಅಧ್ಯಕ್ಷ ಎ. ಅಮೃತ್ ರಾಜ್ ಮಾತನಾಡಿ, ಪಂಚ ಪಾಲಿಕೆಗಳ ವೈದ್ಯರು ಹಾಗೂ ಆರೋಗ್ಯಾಧಿಕಾರಿಗಳನ್ನು ಮೊದಲ ಬಾರಿಗೆ ರಾಷ್ಟ್ರೀಯ ವೈದ್ಯರ ದಿನಾಚರಣೆ ಅಂಗವಾಗಿ ಗೌರವಿಸಲಾಗುತ್ತಿದೆ ಎಂದರು.

ಅಧಿಕಾರಿ ಮತ್ತು ನೌಕರರ ಆರೋಗ್ಯದ ಹಿತದೃಷ್ಟಿಯಿಂದ ಒಳಾಂಗಣ ವ್ಯಾಯಾಮ ಕೇಂದ್ರ ಹಾಗೂ ಆಧುನಿಕ ಸೌಲಭ್ಯಗಳಿರುವ ಹೈಟೆಕ್ ಕ್ಯಾಂಟೀನ್ ಆರಂಭಿಸಲಾಗುತ್ತಿದೆ. ಆರೋಗ್ಯವಂತ ಸಿಬ್ಬಂದಿಯಿಂದಲೇ ಉತ್ತಮ ಆಡಳಿತ ಮತ್ತು ಪರಿಣಾಮಕಾರಿ ಸೇವೆ ಸಾಧ್ಯವಾಗುತ್ತದೆ ಎಂದು ಅವರು ಹೇಳಿದರು.

# 'ಕ್ರಷರ್ ಕ್ವಾರಿ ದುರಂತ: ಯಾರೇ ತಪ್ಪಿತಸ್ಥರಾಗಿದ್ದರೂ ಕಠಿಣ ಕ್ರಮವಾಗಲಿ'

ಬೆಂಗಳೂರು

ಬೆಂಗಳೂರು ದಕ್ಷಿಣ ತಾಲೂಕಿನ ಮಾದಪಟ್ಟಣದ ಕ್ರಷರ್ ಕ್ವಾರಿ ದುರಂತದಲ್ಲಿ ಯಾರೇ ತಪ್ಪಿತಸ್ಥರಾಗಿದ್ದರೂ ಅವರ ವಿರುದ್ಧ ಕಠಿಣ ಕಾನೂನು ಕ್ರಮ ಜರುಗಿಸಬೇಕು ಎಂದು ವಿಧಾನಪರಿಷತ್ತಿನ ವಿಪಕ್ಷ ನಾಯಕ ಛಲವಾದಿ ನಾರಾಯಣಸ್ವಾಮಿ ಆಗ್ರಹಿಸಿದರು.

ಕೆಂಗೇರಿಯ ಆರ್.ಆರ್. ಆಸ್ಪತ್ರೆಯಲ್ಲಿ ಚಿಕಿತ್ಸೆ ಪಡೆಯುತ್ತಿರುವ ಗಾಯಾಳು ಕಾರ್ಮಿಕರನ್ನು ಗುರುವಾರ ಭೇಟಿ ಮಾಡಿ ಆರೋಗ್ಯ ವಿಚಾರಿಸಿದ ಬಳಿಕ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಈ ದುರಂತವನ್ನು ರಾಜಕೀಯವಾಗಿ ನೋಡಬಾರದು ಎಂದು ಹೇಳಿದರು.

"ರಾಜಕಾರಣ ಮಾಡುವುದು ಗಣಿಗಾರಿಕೆ ಅಥವಾ ರಿಯಲ್ ಎಸ್ಟೇಟ್‌ಗಾಗಿ ಅಲ್ಲ. ಜನರ ಸಮಸ್ಯೆಗಳಿಗೆ ಸ್ಪಂದಿಸಿ ಕೆಲಸ ಮಾಡುವುದೇ ನಿಜವಾದ ರಾಜಕಾರಣ. ಕ್ರಷರ್ ಕ್ವಾರಿ ಯಾರದ್ದೇ ಆಗಿರಲಿ, ದುರಂತಕ್ಕೆ ಕಾರಣರಾದವರ ವಿರುದ್ಧ ಸರ್ಕಾರ ನಿರ್ದಾಕ್ಷಿಣ್ಯವಾಗಿ ಕ್ರಮ ಕೈಗೊಳ್ಳಬೇಕು" ಎಂದು ಒತ್ತಾಯಿಸಿದರು.

ವಿವಿಧ ಗಲಭೆ ಪ್ರಕರಣಗಳಿಗೆ ಸಂಬಂಧಿಸಿದ ಕ್ರಿಮಿನಲ್ ಮೊಕದ್ದಮೆಗಳನ್ನು ಹಿಂಪಡೆಯುವ ರಾಜ್ಯ ಸರ್ಕಾರದ ನಿರ್ಧಾರಕ್ಕೆ ಹೈಕೋರ್ಟ್ ತಡೆ ನೀಡಿರುವ ಕುರಿತು ಪ್ರತಿಕ್ರಿಯಿಸಿದ ಅವರು, ಘಟನೆಗಳ ಸಂಪೂರ್ಣ ವಿವರಗಳು ಪೊಲೀಸರ ವರದಿಯಲ್ಲೇ ದಾಖಲಾಗಿವೆ ಎಂದು ಹೇಳಿದರು.

"ಆ ಸಂದರ್ಭ ಪೊಲೀಸರ ಮೇಲೆ ಹಲ್ಲೆ ನಡೆದಿದೆ. ಪೊಲೀಸ್ ವಾಹನಗಳು ಜಖಂಗೊಂಡಿವೆ. ತಳವಾರು, ಕತ್ತಿಗಳ ಪ್ರದರ್ಶನ ನಡೆದಿರುವುದು ವರದಿಗಳಲ್ಲಿದೆ. ಇಂತಹ ಗಂಭೀರ ಪ್ರಕರಣಗಳನ್ನು ಕೇವಲ ಮತಬ್ಯಾಂಕ್ ರಾಜಕಾರಣಕ್ಕಾಗಿ ಹಿಂಪಡೆಯುವ ಪ್ರಯತ್ನ ಸಮಾಜಘಾತುಕ ಶಕ್ತಿಗಳಿಗೆ ಪ್ರೋತ್ಸಾಹ ನೀಡುತ್ತದೆ. ಇಂತಹ ಪ್ರಕರಣಗಳನ್ನು ಹಿಂಪಡೆಯಬಾರದು ಎಂಬುದು ನಮ್ಮ ನಿಲುವಾಗಿತ್ತು. ಈಗ ನ್ಯಾಯಾಲಯವೂ ಸರ್ಕಾರದ ನಿರ್ಧಾರಕ್ಕೆ ತಡೆ ನೀಡಿರುವುದು ಗಮನಾರ್ಹ" ಎಂದು ಟೀಕಿಸಿದರು.

ಸರ್ಕಾರದ ಕ್ರಮವನ್ನು ಟೀಕಿಸಿದ ಅವರು, "ಸಂವಿಧಾನದ ಬಗ್ಗೆ ಮಾತನಾಡುತ್ತಾ, ಕಾನೂನು ವಿರುದ್ಧವಾಗಿ ನಡೆದುಕೊಳ್ಳುವುದು ಸರಿಯಲ್ಲ. ಸರ್ಕಾರ ಕಾನೂನು ಚೌಕಟ್ಟಿನಲ್ಲಿಯೇ ಕಾರ್ಯನಿರ್ವಹಿಸಬೇಕು. ಇಲ್ಲದಿದ್ದರೆ ಬುದ್ಧಿ ಹೇಳಲು ನ್ಯಾಯಾಲಯವೂ ಇದೆ, ಜನರೂ ಇದ್ದಾರೆ" ಎಂದು ಹೇಳಿದರು.

# ಖಾಲಿ ನಿವೇಶನಗಳಿಗೆ ಪಾರ್ಕಿಂಗ್ ಯೋಜನೆ: ತೆರಿಗೆ ವಿನಾಯಿತಿ

ಬೆಂಗಳೂರು

ನಗರದಲ್ಲಿ ಹೆಚ್ಚುತ್ತಿರುವ ವಾಹನ ದಟ್ಟಣೆ ಹಾಗೂ ಪಾರ್ಕಿಂಗ್ ಸಮಸ್ಯೆಗೆ ಪರಿಹಾರ ಕಂಡುಕೊಳ್ಳುವ ಉದ್ದೇಶದಿಂದ ರಾಜ್ಯ ಸರ್ಕಾರ ಮತ್ತು ಗ್ರೇಟರ್ ಬೆಂಗಳೂರು ಪ್ರಾಧಿಕಾರ (ಜಿಬಿಎ) ಹೊಸ ಪಾರ್ಕಿಂಗ್ ನೀತಿ–2026 ಕರಡನ್ನು ಸಿದ್ಧಪಡಿಸಿದೆ. ಇದರಡಿ ಖಾಲಿ ನಿವೇಶನಗಳಲ್ಲಿ ಬಹುಮಹಡಿ ಅಥವಾ ಸ್ವಯಂಚಾಲಿತ ಪಾರ್ಕಿಂಗ್ ವ್ಯವಸ್ಥೆ ನಿರ್ಮಿಸಿದರೆ 15ರಿಂದ 35 ವರ್ಷಗಳವರೆಗೆ ಆಸ್ತಿ ತೆರಿಗೆ ವಿನಾಯಿತಿ ನೀಡುವ ಪ್ರಸ್ತಾವನೆ ಮಾಡಲಾಗಿದೆ. ಆದರೆ ಕರಡು ನೀತಿ ಅಧಿಕೃತವಾಗಿ ಪ್ರಕಟವಾಗುವ ಮೊದಲುವೇ ಇದು ವಿವಾದಕ್ಕೆ ಕಾರಣವಾಗಿದೆ.

ಸರ್ಕಾರದ ಈ ಪ್ರಸ್ತಾವನೆಗೆ ಹಲವಾರು ಆಸ್ತಿ ಮಾಲೀಕರು ತೀವ್ರ ವಿರೋಧ ವ್ಯಕ್ತಪಡಿಸಿದ್ದಾರೆ. ದೀರ್ಘಾವಧಿಯವರೆಗೆ ಸಾರ್ವಜನಿಕ ಪಾರ್ಕಿಂಗ್‌ಗೆ ಜಾಗ ನೀಡಿದರೆ ಮುಂದಿನ ದಿನಗಳಲ್ಲಿ ನಿವೇಶನದ ಮೇಲಿನ ಹಕ್ಕಿಗೆ ಧಕ್ಕೆಯಾಗುವ ಸಾಧ್ಯತೆ ಇದೆ ಎಂದು ಅವರು ಆತಂಕ ವ್ಯಕ್ತಪಡಿಸಿದ್ದಾರೆ. 35 ವರ್ಷಗಳ ಕಾಲ ಜಾಗವನ್ನು ಪಾರ್ಕಿಂಗ್‌ಗೆ ಬಳಸಿದರೆ ಭವಿಷ್ಯದಲ್ಲಿ ಆ ಜಾಗದ ಸ್ವಾಮ್ಯಕ್ಕೆ ಸಂಬಂಧಿಸಿದ ಸಮಸ್ಯೆಗಳು ಎದುರಾಗಬಹುದು ಎಂದು ಕೆಲವರು ಆರೋಪಿಸಿದ್ದಾರೆ.

ಮತ್ತೊಂದೆಡೆ, ಕೆಲವು ಆಸ್ತಿ ಮಾಲೀಕರು ಸರ್ಕಾರದ ಯೋಜನೆಯನ್ನು ಸ್ವಾಗತಿಸಿದ್ದಾರೆ. ಇದುವರೆಗೆ ಖಾಲಿ ನಿವೇಶನಗಳಿಗೆ ತೆರಿಗೆ ಪಾವತಿಸುತ್ತಿದ್ದರೂ ಯಾವುದೇ ಆದಾಯ ದೊರೆಯುತ್ತಿರಲಿಲ್ಲ.

ಹೊಸ ಯೋಜನೆಯಡಿ ತೆರಿಗೆ ವಿನಾಯಿತಿಯ ಜೊತೆಗೆ ಪಾರ್ಕಿಂಗ್ ಶುಲ್ಕದಿಂದಲೂ ಆದಾಯ ಗಳಿಸಲು ಅವಕಾಶ ದೊರೆಯಲಿದೆ ಎಂದು ಅವರು ಅಭಿಪ್ರಾಯಪಟ್ಟಿದ್ದಾರೆ. ಖಾಸಗಿ ಹೂಡಿಕೆ ಅಥವಾ ಸಾರ್ವಜನಿಕ–ಖಾಸಗಿ ಸಹಭಾಗಿತ್ವ (ಪಿಪಿಪಿ) ಮಾದರಿಯಲ್ಲಿ ಪಾರ್ಕಿಂಗ್ ಕಟ್ಟಡ ನಿರ್ಮಿಸಿದರೆ ದೀರ್ಘಾವಧಿಯಲ್ಲಿ ಸ್ಥಿರ ಆದಾಯದ ಮೂಲವಾಗಬಹುದು ಎನ್ನುವುದು ಅವರ ಅಭಿಮತವಾಗಿದೆ.

# ಜೂನ್‌ನಲ್ಲಿ ನೈರುತ್ಯ ರೈಲ್ವೆ ದಾಖಲೆ ಸಾಧನೆ


ಹುಬ್ಬಳ್ಳಿ

ನೈರುತ್ಯ ರೈಲ್ವೆ (ಎಸ್‌ಡಬ್ಲ್ಯುಆರ್) 2026ರ ಜೂನ್ ತಿಂಗಳಲ್ಲಿ ಸರಕು ಸಾಗಣೆ ಮತ್ತು ಆದಾಯದಲ್ಲಿ ಹೊಸ ದಾಖಲೆ ನಿರ್ಮಿಸಿದ್ದು, ಕಾರ್ಯಾಚರಣಾ ದಕ್ಷತೆ ಹಾಗೂ ಗ್ರಾಹಕಕೇಂದ್ರಿತ ಸೇವೆಗಳಲ್ಲಿ ಮತ್ತೊಮ್ಮೆ ತನ್ನ ಸಾಮರ್ಥ್ಯವನ್ನು ಪ್ರದರ್ಶಿಸಿದೆ.

ಜೂನ್ 2026ರಲ್ಲಿ ನೈರುತ್ಯ ರೈಲ್ವೆ 4.18 ಮಿಲಿಯನ್ ಟನ್ (ಎಂಟಿ) ಮೂಲ ಸರಕು ಸಾಗಣೆ ದಾಖಲಿಸಿದ್ದು, ಕಳೆದ ವರ್ಷದ ಜೂನ್‌ನಲ್ಲಿ ದಾಖಲಾದ 3.98 ಮಿಲಿಯನ್ ಟನ್ಗೆ ಹೋಲಿಸಿದರೆ 5.2 ಶೇಕಡಾ (0.20 ಮಿಲಿಯನ್ ಟನ್) ಹೆಚ್ಚಳವಾಗಿದೆ. ಇದು ಜೂನ್ ತಿಂಗಳಲ್ಲಿ ದಾಖಲಾದ ಅತ್ಯಧಿಕ ಸರಕು ಸಾಗಣೆಯಾಗಿದೆ.

ಅಲ್ಲದೆ, ಪ್ರತಿದಿನ ಸರಾಸರಿ 2,221 ವ್ಯಾಗನ್‌ಗಳ ಲೋಡಿಂಗ್ ಮೂಲಕ ಮತ್ತೊಂದು ದಾಖಲೆ ನಿರ್ಮಿಸಲಾಗಿದ್ದು, ಕಳೆದ ವರ್ಷದ 2,143 ವ್ಯಾಗನ್‌ಗಳ ಸರಾಸರಿಗೆ ಹೋಲಿಸಿದರೆ 3.6 ಶೇಕಡಾ ಏರಿಕೆಯಾಗಿದೆ.

ಸರಕು ಸಾಗಣೆಯ ಪ್ರಮುಖ ವಸ್ತುಗಳಲ್ಲೂ ಉತ್ತಮ



ಪ್ರಗತಿ ಕಂಡುಬಂದಿದೆ. ಕಬ್ಬಿಣದ ಅದಿರು ಸಾಗಣೆ 1.69 ಮಿಲಿಯನ್ ಟನ್ ತಲುಪಿ 6.3 ಶೇಕಡಾ ಹೆಚ್ಚಳ ಕಂಡಿದೆ. ಉಕ್ಕು ಸಾಗಣೆ 0.90 ಮಿಲಿಯನ್ ಟನ್ ತಲುಪಿ 7.4 ಶೇಕಡಾ ಏರಿಕೆಯಾಗಿದೆ. ಆರ್‌ಎಂಎಸ್‌ಪಿ ಸರಕು ಸಾಗಣೆ 34.5 ಶೇಕಡಾ ಏರಿಕೆ ಕಂಡು 0.23 ಮಿಲಿಯನ್ ಟನ್ ತಲುಪಿದೆ. ಖನಿಜ ತೈಲ ಸಾಗಣೆ 15.8 ಶೇಕಡಾ ಹೆಚ್ಚಳಗೊಂಡು 0.21 ಮಿಲಿಯನ್ ಟನ್ ತಲುಪಿದೆ. ಸಿಮೆಂಟ್ ಸಾಗಣೆ 32 ಶೇಕಡಾ ಏರಿಕೆಯೊಂದಿಗೆ 0.03 ಮಿಲಿಯನ್ ಟನ್ ಹಾಗೂ ಕಂಟೇನರ್ ಸಾಗಣೆ 15.8 ಶೇಕಡಾ ಏರಿಕೆಯೊಂದಿಗೆ 0.09 ಮಿಲಿಯನ್ ಟನ್ ದಾಖಲಾಗಿದೆ.

ಆದಾಯದ ಕ್ಷೇತ್ರದಲ್ಲಿಯೂ ನೈರುತ್ಯ ರೈಲ್ವೆ ಉತ್ತಮ ಸಾಧನೆ ಮಾಡಿದ್ದು, ಜೂನ್ 2026ರಲ್ಲಿ ಒಟ್ಟು ರೂ.733.23 ಕೋಟಿ ಒಟ್ಟು ಆದಾಯ ದಾಖಲಿಸಿದೆ. ಇದು ಕಳೆದ ವರ್ಷದ ಇದೇ ಅವಧಿಗೆ ಹೋಲಿಸಿದರೆ ರೂ.11.22 ಕೋಟಿ (1.55 ಶೇಕಡಾ) ಹೆಚ್ಚಳವಾಗಿದೆ.

ಪ್ರಯಾಣಿಕರ ಸೇವೆಯಿಂದ ರೂ.290.43 ಕೋಟಿ ಆದಾಯ ಲಭಿಸಿದ್ದು, ಇದು ಕಳೆದ ವರ್ಷಕ್ಕಿಂತ 15.08 ಶೇಕಡಾ ಹೆಚ್ಚಾಗಿದೆ. ಜೂನ್ ತಿಂಗಳಲ್ಲಿ ಒಟ್ಟು 1.485 ಕೋಟಿ ಪ್ರಯಾಣಿಕರು ನೈರುತ್ಯ ರೈಲ್ವೆಯ ಸೇವೆ ಬಳಸಿದ್ದು, ಪ್ರಯಾಣಿಕರ ಸಂಖ್ಯೆಯಲ್ಲಿ 4.36 ಶೇಕಡಾ ಏರಿಕೆ ದಾಖಲಾಗಿದೆ.

ಪಾರ್ಸೆಲ್ ಸೇವೆಯಿಂದ ರೂ.14.30 ಕೋಟಿ ಆದಾಯ ಲಭಿಸಿದ್ದು, ಇದು 5.30 ಶೇಕಡಾ ಹೆಚ್ಚಳವಾಗಿದೆ. ರೈಲ್ವೆಯ ಪ್ರಮುಖ ಆದಾಯ ಮೂಲವಾದ ಸರಕು ಸಾಗಣೆಯಿಂದ ರೂ.402.61 ಕೋಟಿ ಆದಾಯ ದಾಖಲಾಗಿದೆ. ಇತರೆ ಕೋಚಿಂಗ್ ಸೇವೆಗಳಿಂದ ರೂ.26.66 ಕೋಟಿ, ವಿವಿಧ ಇತರೆ ಮೂಲಗಳಿಂದ ರೂ.13.53 ಕೋಟಿ ಹಾಗೂ ವಾಣಿಜ್ಯ ಇತರೆ ಆದಾಯದಿಂದ ರೂ.5.56 ಕೋಟಿ ಸಂಗ್ರಹವಾಗಿದೆ.

ಟಿಕೆಟ್ ತಪಾಸಣೆ ಕಾರ್ಯಾಚರಣೆಯಲ್ಲಿ 58 ಸಾವಿರ ಪ್ರಕರಣಗಳು ಪತ್ತೆಯಾಗಿದ್ದು, ಇದರಿಂದ ರೂ.4.96 ಕೋಟಿ ಆದಾಯ ಸಂಗ್ರಹವಾಗಿದೆ.

ಸರಕು ಸಾಗಣೆಯಲ್ಲಿ ದಾಖಲೆ ಸಾಧನೆ ಹಾಗೂ ವಿವಿಧ ಆದಾಯ ಮೂಲಗಳಲ್ಲಿ ಕಂಡುಬಂದ ಸ್ಥಿರ ಬೆಳವಣಿಗೆ, ಕಾರ್ಯಾಚರಣಾ ದಕ್ಷತೆ, ಮೂಲಸೌಕರ್ಯ ಅಭಿವೃದ್ಧಿ ಹಾಗೂ ಗ್ರಾಹಕಸ್ನೇಹಿ ಸೇವೆಗಳತ್ತ ನೈರುತ್ಯ ರೈಲ್ವೆ ನೀಡುತ್ತಿರುವ ಆದ್ಯತೆಯನ್ನು ಪ್ರತಿಬಿಂಬಿಸುತ್ತದೆ.

ಮುಂದಿನ ದಿನಗಳಲ್ಲಿಯೂ ಇದೇ ಸಾಧನೆಯನ್ನು ಮುಂದುವರಿಸಿಕೊಂಡು ಪ್ರದೇಶದ ಸಾರಿಗೆ ಅಗತ್ಯಗಳನ್ನು ಇನ್ನಷ್ಟು ಪರಿಣಾಮಕಾರಿಯಾಗಿ ಪೂರೈಸಲು ನೈರುತ್ಯ ರೈಲ್ವೆ ಬದ್ಧವಾಗಿದೆ.

## 'ಕಾರ್ಮಿಕರ ಕಲ್ಯಾಣ ಮಂಡಳಿಯ ಸೌಲಭ್ಯ ಸದುಪಯೋಗ ಪಡಿಸಿಕೊಳ್ಳಿ'



ಕೋಲಾರ

ಕಟ್ಟಡ ಕಾರ್ಮಿಕರು ಸರ್ಕಾರದ ಹಾಗೂ ಕಾರ್ಮಿಕರ ಕಲ್ಯಾಣ ಮಂಡಳಿಯಿಂದ ದೊರೆಯುವ ಹೆರಿಗೆ ಸಹಾಯಧನ, ಮಕ್ಕಳ ಪೋಷಣೆ, ಶಿಕ್ಷಣ, ವೈದ್ಯಕೀಯ ಸೇರಿದಂತೆ ವಿವಿಧ ಕಲ್ಯಾಣ ಯೋಜನೆಗಳ ಸೌಲಭ್ಯಗಳನ್ನು ಸದುಪಯೋಗಪಡಿಸಿಕೊಳ್ಳಬೇಕು ಎಂದು ಐಎನ್‌ಟಿಯುಸಿ ರಾಜ್ಯ ಪ್ರಧಾನ ಕಾರ್ಯದರ್ಶಿ ಹೊನ್ನೇನಹಳ್ಳಿ ಯಲ್ಲಪ್ಪ ಮನವಿ ಮಾಡಿದರು.

ನಗರದ ಕೋರ್ಟ್ ಸರ್ಕಲ್ ಬಳಿಯ ಜಿಲ್ಲಾ ಕಟ್ಟಡ ಕಾರ್ಮಿಕರ ಸಂಘದ ಕಚೇರಿಯಲ್ಲಿ ಕಟ್ಟಡ ನಿರ್ಮಾಣದ ಫಲಾನುಭವಿಗಳಿಗೆ ಸೌಲಭ್ಯಗಳನ್ನು ವಿತರಿಸಿ ಮಾತನಾಡಿದ ಅವರು ಸರ್ಕಾರದ ಸೌಲಭ್ಯಗಳನ್ನು ಪಡೆಯಲು ಅಗತ್ಯ ದಾಖಲೆಗಳೊಂದಿಗೆ ನಿಗದಿತ ಅವಧಿಯೊಳಗೆ ಅರ್ಜಿ ಸಲ್ಲಿಸಿದರೆ ಈ ಸೌಲಭ್ಯಗಳನ್ನು ಪಡೆಯಬಹುದು ಹೆಚ್ಚಿನ ಮಾಹಿತಿಗಾಗಿ ಸಂಘದ ಕಚೇರಿಯಲ್ಲಿ ಮಾಹಿತಿ ಪಡೆಯಬಹುದು ಎಂದರು.

ಈ ಸಂದರ್ಭದಲ್ಲಿ ಫಲಾನುಭವಿಗಳು ಸಂಘದ ಪದಾಧಿಕಾರಿಗಳು ಇದ್ದರು.

## ವಿದ್ಯಾರ್ಥಿಗಳಿಗೆ ನೋಟ್ ಬುಕ್ ವಿತರಣೆ



ತಿಪಟೂರು

ಗ್ರಾಮೀಣ ಭಾಗದ ಮಕ್ಕಳಲ್ಲಿನ ವಿದ್ಯಾಭ್ಯಾಸದ ಚಟುವಟಿಕೆಗೆ ಸಹಾಯವಾಗಲೆಂದು, ಪ್ರತಿವರ್ಷ ನನ್ನ ಹುಟ್ಟು ಹಬ್ಬದಂದು ಅಭಿಮಾನಿ ಬಳಗದಿಂದ ಸಾವಿರಾರು ಮಕ್ಕಳಿಗೆ ನೋಟ್ ಬುಕ್ ವಿತರಿಸುತ್ತಿರುವುದು ಕಲಿಕೆಗೆ ಪ್ರೋತ್ಸಾಹ ಕೊಟ್ಟಂತೆ ಆಗುತ್ತದೆ ಎಂದು ನಿವೃತ್ತ ಎಸಿಪಿ ಲೋಕೇಶ್ವರ ತಿಳಿಸಿದರು.

ತಾಲೂಕಿನ ಹೊನ್ನವಳ್ಳಿ ಹೋಬಳಿಯ ಹಾಲ್ಕುರಿಕೆಯ ಸರ್ಕಾರಿ ಹಿರಿಯ ಪ್ರಾಥಮಿಕ ಪಾಠಶಾಲಾ ವಿದ್ಯಾರ್ಥಿಗಳಿಗೆ ಸಮಾಜ ಸೇವಕ ಲೋಕೇಶ್ವರ ಹುಟ್ಟು ಹಬ್ಬದ ಅಂಗವಾಗಿ, ಅಭಿಮಾನಿ ಬಳಗದ ವತಿಯಿಂದ ಹಮ್ಮಿಕೊಂಡಿದ್ದ ಉಚಿತ ನೋಟ್ ಬುಕ್ ಮತ್ತು ಲೇಖನ ಸಾಮಗ್ರಿಗಳ ವಿತರಣಾ ಕಾರ್ಯಕ್ರಮದಲ್ಲಿ ಸನ್ಮಾನ ಸ್ವೀಕರಿಸಿ ಮಾತನಾಡಿದರು.

ನಗರಸಭೆ ಮಾಜಿ ಉಪಾಧ್ಯಕ್ಷ ಗಣೇಶ್ (ಸೊಪ್ಪು), ರೋಟರಿ ಸಂಸ್ಥೆಯ ನಿಕಟಪೂರ್ವ ಕಾರ್ಯದರ್ಶಿ ಕೋಮಲ ಮಾತನಾಡಿ, ಪ್ರತಿಯೊಬ್ಬ ವಿದ್ಯಾರ್ಥಿಯು ಹಠ, ಛಲ ಮತ್ತು ಗುರಿಯೊಂದಿಗೆ ವಿದ್ಯಾಭ್ಯಾಸ ಮಾಡಿದರೆ ಯಶಸ್ಸು ಸಾಧಿಸಬಹುದು. ಇಲ್ಲಿನ ಶೈಕ್ಷಣಿಕ ವಾತಾವರಣ, ಮಕ್ಕಳ ಕಲಿಕೆಯ ಆಸಕ್ತಿ ಹಾಗೂ ಶಿಕ್ಷಕರ ಸಮರ್ಪಣಾ ಮನೋಭಾವ ವಿದ್ಯಾಭ್ಯಾಸಕ್ಕೆ ಪೂರಕವಾಗಿದೆ ಎಂದು ತಿಳಿಸಿದರು.

ಕಾರ್ಯಕ್ರಮದಲ್ಲಿ ಪತ್ರಕರ್ತ ಬಿ.ಟಿ.ಕುಮಾರ್, ಎಸ್ಡಿಎಂಸಿ ಅಧ್ಯಕ್ಷ ಮಂಜುನಾಥ್,ಸಮಾಜ ಸೇವಕ ಚಂದ್ರಶೇಖರ್, ಅಭಿಮಾನಿ ಬಳಗದ ಅಧ್ಯಕ್ಷ ನಾಗರಾಜು, ಗುರುಮೂರ್ತಿ, ಶಾಲಾ ಮುಖ್ಯ ಶಿಕ್ಷಕಿ ಗಂಗಮ್ಮ, ಸಹ ಶಿಕ್ಷಕರಾದ ಶಬ್ಬೀರ್ ಖಾನ್ ಮತ್ತು ಲಕ್ಷ್ಮಿಪತಿ ಸೇರಿದಂತೆ ಸಹ ಶಿಕ್ಷಕರು, ಮುಖಂಡರು, ಎಸ್ಡಿಎಂಸಿ ಪದಾಧಿಕಾರಿಗಳು, ವಿದ್ಯಾರ್ಥಿಗಳು ಹಾಗೂ ಪೋಷಕರು ಹಾಜರಿದ್ದರು.

## 19 ರಂದು ವಿದ್ಯುತ್ ವ್ಯತ್ಯಯ

ರಾಮನಗರ

66/11 ಕೆವಿ ಹೆಜ್ಜಾಲ ವಿದ್ಯುತ್ ಉಪಕೇಂದ್ರದ ಮಾರ್ಗದಲ್ಲಿ ತ್ರೈಮಾಸಿಕ ನಿರ್ವಹಣಾ ಕಾಮಗಾರಿಯನ್ನು ಹಮ್ಮಿಕೊಳ್ಳಲಾಗಿದೆ. ಆದ ಕಾರಣ ಕುರುಬರ ಕರೇನಹಳ್ಳಿ, ಮುತ್ತುರಾಯನಪುರ, ವಾಜರಹಳ್ಳಿ, ಗಾಣಕಲ್, ಅಂಕನಹಳ್ಳಿ, ಕೆಂಪದಾಸಪನಹಳ್ಳಿ, ಬೆತ್ತನಗೆರೆ, ಆವರೆಗೆರೆ, ಶೆಟ್ಟಿಗೌಡನದೊಡ್ಡಿ, ನರಸೇಗೌಡನದೊಡ್ಡಿ, ಎಂ. ಕರೇನಹಳ್ಳಿ, ಕಾಕರಾಮನಹಳ್ಳಿ, ಹೆಜ್ಜಾಲ, ದೇವಲಿಂಗಯ್ಯನಪಾಳ್ಯ, ಎಸ್.ವಿ.ಟಿ. ಕಾಲೋನಿ, ರಂಗೇಗೌಡನದೊಡ್ಡಿ, ಬಿಲ್ಲಕೆಂಪನಹಳ್ಳಿ, ಶೇಷಗಿರಿಹಳ್ಳಿ, ವಂಡರ್‌ಲಾ, ವಂಡರ್‌ಲಾ ಗೇಟ್, ಟೊಯೊಟ ಬೊಸು, ಪ್ರೈ.ಲಿ. ಗೋಮ್ತಿ ಇಂಡಸ್ಟ್ರೀ, ಕಾಡುಮನೆ, ಮಂಚನಾಯಕನಹಳ್ಳಿ, ಹೊಸದೊಡ್ಡಿ, ಬಿ.ಎಂ.ಟಿ.ಸಿ. ಇ.ವಿ ಚಾರ್ಜಿಂಗ್ ಸೆಂಟರ್, ಹನುಮಂತನಗರ, ಹಂಪಾಪುರ, ಜುಡಿಷಿಯಲ್ ಲೇಔಟ್, ಬಿ.ಡಿ.ಎ ಕಣ್‌ಮಿಕಿ, ರೈಲ್ವೆ ಲೇಔಟ್ ಹೆಜ್ಜಾಲ, ಬನ್ನಿಕುಪ್ಪೆ ಹಾಗೂ ಸುತ್ತಮುತ್ತಲಿನ ಪ್ರದೇಶಗಳಿಗೆ ಜು. 19ರಂದು ಬೆಳಗ್ಗೆ 10 ರಿಂದ ಮಧ್ಯಾಹ್ನ 4 ಗಂಟೆಯವರೆಗೆ ವಿದ್ಯುತ್ ಸರಬರಾಜಿನಲ್ಲಿ ವ್ಯತ್ಯಯವಾಗಲಿದೆ ಎಂದು ಬೆಸ್ಕಾಂನ ರಾಮನಗರ ವಿಭಾಗದ ಕಾರ್ಯನಿರ್ವಾಹಕ ಇಂಜಿನಿಯರ್ (ವಿ) ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಕೊತ್ತಿಪುರ ಸುತ್ತಮುತ್ತ ಕರೆಂಟ್ ಕಟ್

ರಾಮನಗರ

220/66/11 ಕೆವಿ ಕೊತ್ತಿಪುರ ಸ್ವೀಕರಣ ಕೇಂದ್ರದ ಮಾರ್ಗದಲ್ಲಿ ತ್ರೈಮಾಸಿಕ ನಿರ್ವಹಣಾ ಕಾಮಗಾರಿಯನ್ನು ಹಮ್ಮಿಕೊಳ್ಳಲಾಗಿದೆ. ಆದ ಕಾರಣ ಕೊತ್ತಿಪುರ, ಬಿ.ಡಿ. ಕಾಲೋನಿ, ಯಾರಬ್‌ನಗರ, ಪಿ.ಎಸ್.ವಿ ನಗರ, ಸೇನಾಪತಿ ವಿಟ್ಲೇ ಇಂಡಸ್ಟ್ರೀ ಹಾಗೂ ಸುತ್ತಮುತ್ತಲಿನ ಪ್ರದೇಶಗಳಿಗೆ ಜು. 19ರಂದು ಬೆಳಗ್ಗೆ 10 ರಿಂದ ಮಧ್ಯಾಹ್ನ 2 ಗಂಟೆಯವರೆಗೆ ವಿದ್ಯುತ್ ಸರಬರಾಜಿನಲ್ಲಿ ವ್ಯತ್ಯಯವಾಗಲಿದೆ ಎಂದು ಬೆಸ್ಕಾಂನ ರಾಮನಗರ ವಿಭಾಗದ ಕಾರ್ಯನಿರ್ವಾಹಕ ಇಂಜಿನಿಯರ್ (ವಿ) ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಶೈಕ್ಷಣಿಕ ಪ್ರಗತಿಗೆ ಶ್ರದ್ಧೆ, ಪರಿಶ್ರಮ ಪೂರಕ: ಶಾಸಕ

ಶ್ರೀನಿವಾಸಪುರ

ಪಟ್ಟಣದ ಸರ್ಕಾರಿ ಬಾಲಕಿಯರ ಪದವಿ ಪೂರ್ವ ಕಾಲೇಜಿನಲ್ಲಿ ಶನಿವಾರ ಏರ್ಪಡಿಸಿದ್ದ ಕ್ರೀಡೆ ಮತ್ತು ಸಾಂಸ್ಕೃತಿಕ ಚಟುವಟಿಕೆಗಳ ಉದ್ಘಾಟನೆ ಹಾಗೂ ಸ್ವಾಗತ ಕಾರ್ಯಕ್ರಮ ಶಾಸಕ ಜಿ.ಕೆ. ವೆಂಕಟಶಿವಾರೆಡ್ಡಿ ಉದ್ಘಾಟಿಸಿದರು.



ಈ ಸಂದರ್ಭದಲ್ಲಿ ಮಾತನಾಡಿ, ವಿದ್ಯಾರ್ಥಿನಿಯರು ಶ್ರದ್ಧೆ ಹಾಗೂ ಪರಿಶ್ರಮದ ಮೂಲಕ ಶೈಕ್ಷಣಿಕ ಪ್ರಗತಿ ಸಾಧಿಸಬೇಕು. ಉತ್ತಮ ಬದುಕು ಕಟ್ಟಿಕೊಳ್ಳಬೇಕು ಎಂದು ಶಾಸಕ ಜಿ.ಕೆ. ವೆಂಕಟಶಿವಾರೆಡ್ಡಿ ಹೇದರು.

ತಾಲ್ಲೂಕಿನಲ್ಲಿ ಉತ್ತಮ ಶೈಕ್ಷಣಿಕ ವಾತಾವರಣವಿದೆ. ಪಟ್ಟಣದ ಎರಡು ಸರ್ಕಾರಿ ಪದವಿ ಪೂರ್ವ ಕಾಲೇಜುಗಳಿಗೆ ಮೂಲ ಸೌಕರ್ಯ ಕಲ್ಪಿಸಲಾಗಿದೆ. ಸರ್ಕಾರಿ ಬಾಲಕಿಯರ ಪದವಿ ಪೂರ್ವ ಕಾಲೇಜಿಗೆ ಅಗತ್ಯವಿರುವ ಸಭಾಂಗಣ ನಿರ್ಮಿಸಲಾಗುವುದು ಎಂದು ಹೇಳಿದರು.

ರೂ.1.50 ಕೋಟಿ ವೆಚ್ಚದಲ್ಲಿ ಪಟ್ಟಣದ ಲಕ್ಷ್ಮೀನರಸಿಂಹಸ್ವಾಮಿ ದೇವಾಲಯದ ನವೀಕರಣ ಕಾರ್ಯ ಕೈಗೊಳ್ಳಲಾಗಿದೆ. ಶ್ರೀರಾಮ ದೇವಾಲಯವನ್ನು ರೂ.1 ಕೋಟಿ ವೆಚ್ಚದಲ್ಲಿ ನವೀಕರಿಸಲಾಗುವುದು. ತಾಲ್ಲೂಕಿನ ಎರಡು ಕಡೆ ಕೈಗಾರಿಕಾ ಪ್ರದೇಶ ಪ್ರಾರಂಭಿಸಲಾಗುವುದು. ರಾಜ್ಯದಲ್ಲಿ ಹಣಕಾಸಿನ ಮುಗ್ಗಟ್ಟಿನ ನಡುವೆಯೂ, ಕಾಡಿ ಬೇಟಿ ಸರ್ಕಾರದಿಂದ ಅನುದಾನ ತಂದು ಕ್ಷೇತ್ರದಲ್ಲಿ ಅಭಿವೃದ್ಧಿ ಕಾರ್ಯ ಕೈಗೊಳ್ಳಲಾಗುತ್ತಿದೆ. ಶ್ರೀನಿವಾಸಪುರದ ರಸ್ತೆಗಳನ್ನು ಸಿಮೆಂಟ್ ರಸ್ತೆಗಳನ್ನಾಗಿ ಪರಿವರ್ತಿಸುವ ಕಾರ್ಯ ಪ್ರಗತಿಯಲ್ಲಿದೆ ಎಂದು ಹೇಳಿದರು.

ಕಾಲೇಜಿನ ಪ್ರಾಂಶುಪಾಲ ಎನ್.ಶಂಕರೇಗೌಡ ಮಾತನಾಡಿ, ಕಾಲೇಜು ವಿದ್ಯಾರ್ಥಿನಿಯರ ಶೈಕ್ಷಣಿಕ ಪ್ರಗತಿಗೆ ಪೂರಕವಾಗಿ ಕಾರ್ಯಕ್ರಮಗಳನ್ನು ರೂಪಿಸಿ ಜಾರಿಗೆ ತರಲಾಗಿದೆ. ಉತ್ತಮ ಫಲಿತಾಂಶಕ್ಕಾಗಿ ಉಪನ್ಯಾಸಕರು ಸಾಂಘಿಕ ಪ್ರಯತ್ನ ಮಾಡುತ್ತಿದ್ದಾರೆ. ಕ್ರೀಡೆ ಹಾಗೂ ಸಾಂಸ್ಕೃತಿಕ ಕ್ಷೇತ್ರದಲ್ಲೂ ಕಾಲೇಜು ಮುಂಚೂಣಿಯಲ್ಲಿದೆ. ವಿದ್ಯಾರ್ಥಿನಿಯರ ಸಾಂಸ್ಕೃತಿಕ ಅಗತ್ಯ ಪೂರೈಸುವ ಉದ್ದೇಶದಿಂದ ಆಡಿಟೋರಿಯಂ ನಿರ್ಮಿಸಬೇಕಾದ ಅಗತ್ಯವಿದೆ ಎಂದು ಹೇಳಿದರು.

ಸಾಹಿತಿ ಆರ್.ಚೌಡರೆಡ್ಡಿ ಮಾತನಾಡಿ, ವಿದ್ಯಾರ್ಥಿಗಳು ಸರ್ಕಾರಿ ಶಾಲಾ ಕಾಲೇಜಿನಲ್ಲಿ ಓದುವುದು ಹೆಮ್ಮೆಯ ಸಂಗತಿಯಾಗಿದೆ. ಯಾವುದೇ ಕಾರಣಕ್ಕೂ ಕೀಳರಿಮೆ ಹೊಂದಬೇಕಾಗಿಲ್ಲ. ಕಾಲೇಜಿನ ಕಿರಿಯ ವಿದ್ಯಾರ್ಥಿಗಳು ಹಿರಿಯ ವಿದ್ಯಾರ್ಥಿಗಳ ಉತ್ತಮ ಮಾದರಿಯನ್ನು ಅನುಸರಿಸಬೇಕು. ಮಾನವೀಯ ಮೌಲ್ಯಗಳನ್ನು ಬೆಳೆಸಿಕೊಂಡು ಮುನ್ನಡೆಯಬೇಕು ಎಂದು ಹೇಳಿದರು.

ಸರ್ಕಾರಿ ಬಾಲಕರ ಪದವಿ ಪೂರ್ವ ಕಾಲೇಜಿನ ಪ್ರಾಂಶುಪಾಲ ಟಿ.ರಮೇಶ್ ಮಾತನಾಡಿ, ವಿದ್ಯಾರ್ಥಿನಿಯರು ತಾಳ್ಮೆ ಬೆಳೆಸಿಕೊಳ್ಳಬೇಕು. ತಾಳ್ಮೆಯಿಂದ ಮಾಡುವ ಕೆಲಸದಲ್ಲಿ ಯಶಸ್ಸು ಅಡಗಿರುತ್ತದೆ ಎಂದು ಹೇಳಿದರು.

ತಾಲ್ಲೂಕು ಒಕ್ಕಲಿಗರ ಸಂಘದ ಅಧ್ಯಕ್ಷ ವೇಣುಗೋಪಾಲರೆಡ್ಡಿ ಮಾತನಾಡಿದರು. ವಿದ್ಯಾರ್ಥಿನಿಯರು ತಮ್ಮ ಅಭಿಪ್ರಾಯ ತಿಳಿಸಿದರು. ಮುತ್ತಕಪಲ್ಲಿ ಸರ್ಕಾರಿ ಪದವಿ ಪೂರ್ವ ಕಾಲೇಜಿನ ಪ್ರಾಂಶುಪಾಲ ಜಿ.ಕೆ.ನಾರಾಯಣಸ್ವಾಮಿ, ಉಪನ್ಯಾಸಕರಾದ ಗೋಪಿನಾಥ್, ಬಾಲಾಜಿ, ಶ್ರೀನಾಥ್, ರಘುಪತಿ, ಡಾ.ಫಯಾಜ್ ಅಹ್ಮದ್, ಗೋಪಾಲನ್, ಶಿವಾರೆಡ್ಡಿ, ಉಪನ್ಯಾಸಕಿ ವೀಣಾ, ಉಪನ್ಯಾಸಕಿಯರಾದ ಸುಮ, ಮಾನಸ ಹಾಗೂ ಸಿಬ್ಬಂದಿ ಇದ್ದರು.

## ಸಿ.ಸಿ ರಸ್ತೆ, ಚರಂಡಿ ಕಾಮಗಾರಿಗೆ ಸುರೇಶ್‌ಗೌಡ ಭೂಮಿಪೂಜೆ

ತುಮಕೂರು

ವಿವಿಧ ಯೋಜನೆಗಳ ಅನುದಾನ ವಿನಿಯೋಗಿಸಿಕೊಂಡು ಗ್ರಾಮಾಂತರ ವಿಧಾನಸಭಾ ಕ್ಷೇತ್ರದ ಎಲ್ಲಾ ಗ್ರಾಮಗಳಲ್ಲೂ ಸುಸಜ್ಜಿತ ರಸ್ತೆ, ಚರಂಡಿ ನಿರ್ಮಾಣ ಮಾಡುವ ಗುರಿ ಹೊಂದಲಾಗಿದೆ. ಹಂತಹಂತವಾಗಿ ಕಾಮಗಾರಿ ಕೈಗೆತ್ತಿಕೊಳ್ಳಲಾಗುವುದು ಎಂದು ಶಾಸಕ ಬಿ. ಸುರೇಶ್‌ಗೌಡರು ಹೇಳಿದರು.



ಶನಿವಾರ ಕ್ಷೇತ್ರದ ಹೆಬ್ಬೂರು ಹೋಬಳಿಯ ಬಳ್ಳಗೆರೆ ಗ್ರಾಮ ಪಂಚಾಯ್ತಿಯ ಮಾಯಮ್ಮನಪಾಳ್ಯದಿಂದ ಕರ್ಣಕುಪ್ಪೆವರೆಗೆ ಸಿ.ಸಿ ರಸ್ತೆ ಹಾಗೂ ಸಿ.ಸಿ ಚರಂಡಿ ಕಾಮಗಾರಿಗೆ ಗುದ್ದಲಿ ಪೂಜೆ ನೆರವೇರಿಸಿ ಮಾತನಾಡಿದ ಶಾಸಕರು, ಮುಖ್ಯಮಂತ್ರಿಗಳ ಮೂಲ ಸೌಕರ್ಯ ಅಭಿವೃದ್ಧಿ ಯೋಜನೆಯಡಿ ಸುಮಾರು 35 ಲಕ್ಷ ರೂ ಗಳ ಅನುದಾನದಲ್ಲಿ ಈ ಕಾಮಗಾರಿ ಆರಂಭಿಸಲಾಗಿದೆ. ಸಕಾಲದಲ್ಲಿ ಕಾಮಗಾರಿ ಪೂರ್ಣಗೊಳಿಸಿ ಜನರ ಬಳಕೆಗೆ ನೀಡಬೇಕು ಎಂದು ಅಧಿಕಾರಿಗಳಿಗೆ ಸೂಚನೆ ನೀಡಿದರು.

ಬಳ್ಳಗೆರೆ ಗ್ರಾ.ಪಂ. ಮಾಜಿ ಅಧ್ಯಕ್ಷರು, ಉಪಾಧ್ಯಕ್ಷರು , ಸದಸ್ಯರು, ಮುಖಂಡ ಬಳ್ಳಗೆರೆ ವೆಂಕಟೇಶಣ್ಣ, ಮರಿಯಣ್ಣ, ಶಾಂತಕುಮಾರ್, ಸ್ವಾಮಿ, ಬೆಸ್ತರಪಾಳ್ಯ ನವೀನ್, ಶ್ರೀಕಂಠಯ್ಯನಪಾಳ್ಯ ಗೌಡ, ಸಿದ್ದಪ್ಪ, ರಂಗರಾಮಣ್ಣ, ಬ್ಯಾಟರಾಯಪ್ಪ, ಸಿದ್ಧಲಿಂಗಪ್ಪ, ಕೆರೆಕೋಡಿ ಮೂರ್ತಿ, ಗುರುಪಾದಪ್ಪ, ನರಸೇಗೌಡ ಮತ್ತಿತರರು ಹಾಜರಿದ್ದರು.

## ದೇವರು ಶಕ್ತಿ ಕೊಟ್ಟಿರುವವರೆಗೂ ಸಮಾಜ ಸೇವೆ ನಿಲ್ಲಲ್ಲ: ವಿ.ಮೋಹನ್ ಕೃಷ್ಣ

ಬೇತಮಂಗಲ

ಪಟ್ಟಣ ಸಮೀಪದ ಸುಂದರಪಾಳ್ಯ ಸರ್ಕಾರಿ ಶಾಲೆ, ಗ್ರೀನ್ ವುಡ್ ಶಾಲೆ, ವೆಂಕಟೇಶ್ವರ ಶಾಲೆಗಳಿಗೆ, ಉಚಿತವಾಗಿ ನೋಟ್ ವಿತರಿಸಿ ಮಾತನಾಡಿದ, ಸಮಾಜ ಸೇವಕ ವಿ. ಮೋಹನ್ ಕೃಷ್ಣ ನೋಟ್ ಬುಕ್ ವಿತರಣೆ ಕಾರ್ಯಕ್ರಮ ಕೆಜಿಎಫ್ ತಾಲೂಕಿನ ಸರ್ಕಾರಿ ಮತ್ತು ಖಾಸಗಿ ಎಂಬ ಭೇದಭಾವವಿಲ್ಲದೆ ಎಲ್ಲಾ ಶಾಲೆಗಳಿಗೆ ವಿತರಿಸಿ, ಕಾಣದ ಕೈಗಳು ಈ ಸೇವೆಯನ್ನು ಮುಂದುವರೆಸಬಾರದೆಂದು ಎಷ್ಟೋ ಕುತಂತ್ರಗಳು ನಡೆಸಿದರು. ಆದ್ರೂ ಈ ಕ್ಷೇತ್ರದ ನಮ್ಮ ಪ್ರೀತಿ ವಿದ್ಯಾರ್ಥಿಗಳಿಗೆ ಸೇವೆ ಮಾಡಲು ಶಕ್ತಿದೇವರು ನೀಡಿದ್ದಾನೆ. ಆದರೆ ದೇವರು ಶಕ್ತಿಯೇ ನೀಡುವವರೆಗೂ ಈ ಸೇವೆಯನ್ನು ಪ್ರತಿ ವರ್ಷ ಮುಂದುವರಿಸಿಕೊಡ್ದು ಹೋಗುತ್ತೇನೆ ಎಂದು ತಿಳಿಸಿದರು.



ಕೆ ಜಿ ಎಫ್ ಕ್ಷೇತ್ರದಲ್ಲಿ ವೃದ್ಯಾಪಿ ವೇತನ,ಅಂಗವಿಕಲ ವೇತನ, ವಿಧವಾ ವೇತನ, 13 ರಿಂದ 14ಸಾವಿರ ಜನರಿಗೆ ಕಡತವಾಗಿದೆ. ಇದರ ಬಗ್ಗೆ ಒಂದು ತಿಂಗಳ ಹಿಂದೆ ಶಾಸಕರ ಗಮನಕ್ಕೂ ತಂದಿದ್ದೇನೆ ಎಂದು ಹೇಳಿದರು. ಕೆಲವರು ಚುನಾವಣೆ ಸಂದರ್ಭದಲ್ಲಿ ಓಂ ಶಕ್ತಿ ಬಸ್, ಶಬರಿಮಲೆ ಬಸ್ ವ್ಯವಸ್ಥೆ ಮಾಡುತ್ತಾರೆ. ನಾನು ಪ್ರಾರಂಭ ಮಾಡಿದ ಸಮಾಜ ಸೇವೆ ಪ್ರತಿ ವರ್ಷ ಮುಂದುವರಿಸ್ಕೊಂಡು ಬಂದಿದ್ದೀನಿ. ಚುನಾವಣೆಯ ಸಂದರ್ಭದಲ್ಲಿ ಪ್ರತಿಯೊಬ್ಬರ ಜಾತಕ ಎಳೆಯಲಾಗಿ ಬಿಚ್ಚಿಡುತ್ತೇನೆ ಎಂದು ಆಕ್ರೋಶ ವ್ಯಕ್ತಪಡಿಸಿದರು.

ಶ್ರೀನಿವಾಸ ರೆಡ್ಡಿ, ಸುಧಾಕರ್ ರೆಡ್ಡಿ, ಗಂಗಿರೆಡ್ಡಿ, ಕೃಷ್ಣಪ್ಪ, ತೇಜು, ನಾಗೇಶ್, ವಿದ್ಯಾರ್ಥಿಗಳು ಉಪಸ್ಥಿತರಿದ್ದರು.

## ಕುಂಬಾರಿಕೆಗೆ ಮಾರುಕಟ್ಟೆ ಸವಾಲು: ಡಾ. ಶ್ರೀನಿವಾಸನ್ ವೇಲು

ಕೋಲಾರ

ಕುಂಬಾರಿಕೆ ವೃತ್ತಿಗೆ ಮಾರುಕಟ್ಟೆ ವ್ಯವಸ್ಥೆಯೇ ಪ್ರಮುಖ ಸವಾಲಾಗಿದ್ದು, ಕುಂಬಾರ ಸಮುದಾಯದ ಅಭಿವೃದ್ಧಿಗಾಗಿ ನಿಗಮದಿಂದ ಅಗತ್ಯ ಸಹಾಯ ಹಾಗೂ ಸೌಲಭ್ಯಗಳನ್ನು ಒದಗಿಸಲು ಸಿದ್ಧವಿದ್ದೇವೆ ಎಂದು ಕುಂಬಾರ ಅಭಿವೃದ್ಧಿ ನಿಗಮದ ಅಧ್ಯಕ್ಷ ಡಾ. ಶ್ರೀನಿವಾಸನ್ ವೇಲು ತಿಳಿಸಿದರು.



ತಾಲೂಕಿನ ಕಲ್ಲಂಡೂರು ಗ್ರಾಮದಲ್ಲಿರುವ ಡಾ.ಕೆ ನಾಗರಾಜ್ ಅವರ ಪಾಟರಿ (ಕುಂಬಾರಿಕೆ) ಕ್ಲಸ್ಟರ್‌ಗೆ ಭೇಟಿ ನೀಡಿ ಮಾತನಾಡಿದ ಅವರು ಕುಂಬಾರಿಕೆ ಒಂದು ಪಾರಂಪರಿಕ ವೃತ್ತಿಯಾಗಿದ್ದು, ಇದನ್ನು ಆಧುನಿಕ ತಂತ್ರಜ್ಞಾನ ಹಾಗೂ ಉತ್ತಮ ಮಾರುಕಟ್ಟೆ ವ್ಯವಸ್ಥೆಯೊಂದಿಗೆ ಬೆಳೆಸುವ ಅಗತ್ಯವಿದೆ. ಕುಂಬಾರ ಸಮುದಾಯದ ಆರ್ಥಿಕ ಸಬಲೀಕರಣಕ್ಕಾಗಿ ನಿಗಮದಿಂದ ವಿವಿಧ ಯೋಜನೆಗಳಡಿ ಸಾಲ, ತರಬೇತಿ, ಯಂತ್ರೋಪಕರಣಗಳು ಸೇರಿದಂತೆ ಅಗತ್ಯ ಸೌಲಭ್ಯಗಳನ್ನು ಒದಗಿಸಲಾಗುವುದು ಎಂದು ತಿಳಿಸಿದರು.

ಕುಂಬಾರಿಕೆ ಉತ್ಪನ್ನಗಳಿಗೆ ಮಾರುಕಟ್ಟೆ ಅವಕಾಶಗಳನ್ನು ಹೆಚ್ಚಿಸುವ ನಿಟ್ಟಿನಲ್ಲಿ ನಿಗಮ ವಿಶೇಷ ಯೋಜನೆಗಳನ್ನು ರೂಪಿಸುತ್ತಿದ್ದು, ಯುವಕರು ಈ ವೃತ್ತಿಯತ್ತ ಹೆಚ್ಚಿನ ಆಸಕ್ತಿ ತೋರಬೇಕು ಕುಂಬಾರಿಕೆ ವೃತ್ತಿಯ ಅಭಿವೃದ್ಧಿಗೆ ಅಗತ್ಯ ಕ್ರಮಗಳನ್ನು ಕೈಗೊಳ್ಳುವುದಾಗಿ ಭರವಸೆ ನೀಡಿದರು.

ಇದೇ ಸಂದರ್ಭದಲ್ಲಿ ಕುಂಬಾರಿಕೆ ವೃತ್ತಿಯಲ್ಲಿ ತೊಡಗಿರುವ ವಿಮಲಮ್ಮ ಮತ್ತು ಕೃಷ್ಣಪ್ಪ ದಂಪತಿಯನ್ನು ಕುಂಬಾರ ಅಭಿವೃದ್ಧಿ ನಿಗಮದಿಂದ ಸನ್ಮಾನಿಸಿದರು.

ಪಾಟರಿ ಕ್ಲಸ್ಟರ್ ಅಧ್ಯಕ್ಷ ಕಲ್ಲಂಡೂರು ಡಾ.ಕೆ ನಾಗರಾಜ್, ಕಾರ್ಯದರ್ಶಿ ಡಾ.ಸಹನಾ, ಅಬಕಾರಿ ಇಲಾಖೆಯ ನಿವೃತ್ತ ಜಂಟಿ ನಿರ್ದೇಶಕ ಶಿವಯ್ಯ, ತಬಲ ನಾರಾಯಣಪ್ಪ, ಚಿಕ್ಕವೀರಯ್ಯ, ಡಾ ಸಂಗಮೇಶ್, ಕುಂಬಾರ ಸಂಘದ ಉಪಾಧ್ಯಕ್ಷ ಕೆ.ಎಂ ನಾಗೇಶ್, ಸಿ.ಗಂಗರಾಜು, ಅನಂತಪದ್ಮನಾಭ, ನಂಜುಂಡಪ್ಪ, ನಾರಾಯಣಪ್ಪ, ಮುನಿರಾಜಪ್ಪ, ಮುನಿಯಪ್ಪ, ಚಿನ್ನಮ್ಮಯ್ಯ, ನಾರಾಯಣಸ್ವಾಮಿ, ಅಶ್ವಥಪ್ಪ, ನಾಗಭೂಷಣ್, ಭಾಸ್ಕರ್, ಮುಂತಾದವರು ಇದ್ದರು.

## ಹಾಲಿನ ದರ ಹೆಚ್ಚಳಕ್ಕೆ ಆಗ್ರಹಿಸಿ ಚಿಮುಲ್‌ಗೆ ರೈತ ಸಂಘ ಮನವಿ



ಶಿಡ್ಲಘಟ್ಟ

ಹಾಲಿನ ಖರೀದಿ ದರವನ್ನು ತಕ್ಷಣ ಹೆಚ್ಚಿಸಬೇಕು ಹಾಗೂ ಪಶು ಆಹಾರದ ಬೆಲೆಯನ್ನು ನಿಯಂತ್ರಿಸಿ ಕಡಿಮೆ ಮಾಡಬೇಕು ಎಂದು ಆಗ್ರಹಿಸಿ ಕರ್ನಾಟಕ ರಾಜ್ಯ ರೈತ ಸಂಘ ಮತ್ತು ಹಸಿರು ಸೇನೆ ಪದಾಧಿಕಾರಿಗಳು ಚಿಕ್ಕಬಳ್ಳಾಪುರ ಹಾಲು ಒಕ್ಕೂಟದ (ಚಿಮುಲ್) ಶಿಡ್ಲಘಟ್ಟ ಉಪ ಕಚೇರಿ ಶಿಬಿರ ಘಟಕದ ವ್ಯವಸ್ಥಾಪಕ ಡಾ. ರವಿಕಿರಣ್ ಅವರಿಗೆ ಮನವಿ ಸಲ್ಲಿಸಿದರು.

ರೈತ ಸಂಘದ ರಾಜ್ಯ ಕಾರ್ಯಾಧ್ಯಕ್ಷ ಭಕ್ತರಹಳ್ಳಿ ಬೈರೇಗೌಡ ಮಾತನಾಡಿ, ಹಾಲಿನ ಖರೀದಿ ದರ ಕಡಿಮೆಯಾಗಿರುವುದರಿಂದ ಹಾಲು ಉತ್ಪಾದಕ ರೈತರು ಆರ್ಥಿಕ ಸಂಕಷ್ಟ ಎದುರಿಸುತ್ತಿದ್ದಾರೆ ಎಂದು ಹೇಳಿದರು.

ಮುಂಗಾರು ಮಳೆಯ ಕೊರತೆಯಿಂದ ಶಿಡ್ಲಘಟ್ಟ ತಾಲ್ಲೂಕು ಸೇರಿದಂತೆ ಜಿಲ್ಲೆಯ ಹಲವು ಭಾಗಗಳಲ್ಲಿ ಮೇವು ಅಭಾವ ಉಂಟಾಗಿದೆ. ಪಶು ಆಹಾರ, ಫೀಡ್, ಚಕ್ಕೆ, ಬೂಸಾ ಸೇರಿದಂತೆ ಅಗತ್ಯ ವಸ್ತುಗಳ ಬೆಲೆ ಏರಿಕೆಯಾಗಿದ್ದು, ಹಾಲು ಉತ್ಪಾದನಾ ವೆಚ್ಚ ದುಪ್ಪಟ್ಟಾಗಿದೆ. ಇಂತಹ ಸಂದರ್ಭದಲ್ಲಿ ಹಾಲಿನ ಖರೀದಿ ದರವನ್ನು ಹೆಚ್ಚಿಸುವ ಬದಲು ಕಡಿತಗೊಳಿಸಿರುವುದು ರೈತರಿಗೆ ಮತ್ತಷ್ಟು ಹೊರೆ ತಂದಿದೆ ಎಂದು ಅವರು ತಿಳಿಸಿದರು.

ಮನವಿ ಸ್ವೀಕರಿಸಿದ ಚಿಮುಲ್ ಶಿಡ್ಲಘಟ್ಟ ಉಪ ಕಚೇರಿ ಶಿಬಿರ ಘಟಕದ ವ್ಯವಸ್ಥಾಪಕ ಡಾ. ರವಿಕಿರಣ್, ರೈತ ಸಂಘ ಸಲ್ಲಿಸಿರುವ ಮನವಿಯನ್ನು ಆಡಳಿತ ಮಂಡಳಿಯ ಗಮನಕ್ಕೆ ತರಲಾಗುವುದು. ಮಳೆಯ ಕೊರತೆಯಿಂದ ಹಾಲು ಉತ್ಪಾದಕರು ಎದುರಿಸುತ್ತಿರುವ ಸಮಸ್ಯೆಗಳ ಕುರಿತು ಸಭೆಯಲ್ಲಿ ಚರ್ಚಿಸಿ ನಿಯಮಾನುಸಾರ ಸೂಕ್ತ ಕ್ರಮ ಕೈಗೊಳ್ಳಲು ಮನವಿಯನ್ನು ರವಾನಿಸಲಾಗುವುದು ಎಂದು ಭರವಸೆ ನೀಡಿದರು.

ಈ ವೇಳೆ ತಾದೂರು ಮಂಜುನಾಥ್, ವೀರಾಪುರ ಮುನಿನಂಜಪ್ಪ, ಟಿ. ಬಸ್ಸನಹಳ್ಳಿ ದೇವರಾಜ್, ವೇಣುಗೋಪಾಲ್, ಗುಡಿಹಳ್ಳಿ ಕೆಂಪಣ್ಣ, ಕೆಂಪರೆಡ್ಡಿ, ದೇವರಾಜ್ ಸೇರಿದಂತೆ ರೈತ ಸಂಘದ ಪದಾಧಿಕಾರಿಗಳು, ಹಾಲು ಉತ್ಪಾದಕರು ಹಾಜರಿದ್ದರು.

## ಸಾಂಕ್ರಾಮಿಕ ರೋಗ ನಿಯಂತ್ರಣಕ್ಕೆ ಶಾಸಕರ ನೇತೃತ್ವದಲ್ಲಿ ಸಮಿತಿ ರಚನೆ

ಬೆಂಗಳೂರು



ರಾಜ್ಯದಲ್ಲಿ ಸಾಂಕ್ರಾಮಿಕ ರೋಗಗಳ ನಿಯಂತ್ರಣಕ್ಕೆ ಸ್ಥಳೀಯ ಶಾಸಕರ ನೇತೃತ್ವದಲ್ಲಿ ಸಮಿತಿಗಳನ್ನು ರಚಿಸಲು ನಿರ್ಧರಿಸಲಾಗಿದೆ ಎಂದು ಆರೋಗ್ಯ ಸಚಿವ ಯು.ಟಿ. ಖಾದರ್ ತಿಳಿಸಿದ್ದಾರೆ.

ಸಾಂಕ್ರಾಮಿಕ ರೋಗಗಳ ನಿಯಂತ್ರಣ ಕುರಿತು ಆರೋಗ್ಯ ಇಲಾಖೆ ಅಧಿಕಾರಿಗಳು ಹಾಗೂ ಎಲ್ಲಾ ಜಿಲ್ಲೆಗಳ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿಗಳೊಂದಿಗೆ ಸಭೆ ನಡೆಸಿದ ಸಚಿವರು, ರೋಗಗಳ ತಡೆಗೆ ಹಲವು ಮಹತ್ವದ ಕ್ರಮಗಳನ್ನು ಕೈಗೊಳ್ಳಲಾಗಿದೆ ಎಂದು ಹೇಳಿದರು.

ಸಭೆಯ ಬಳಿಕ ಮಾತನಾಡಿದ ಅವರು, ಮೊದಲ ಬಾರಿಗೆ ಸಾಂಕ್ರಾಮಿಕ ರೋಗಗಳಿಗೆ ಸಂಬಂಧಿಸಿದ ಮಾಹಿತಿ ತ್ವರಿತವಾಗಿ ಸಂಗ್ರಹಿಸುವುದು ಮತ್ತು ರಾಜ್ಯದ ಎಲ್ಲ ಜಿಲ್ಲೆಗಳಿಗೆ ಸಮರ್ಪಕವಾಗಿ ತಲುಪಿಸುವ ಉದ್ದೇಶದಿಂದ ಆರೋಗ್ಯ ತುರ್ತು ಕಾರ್ಯಾಚರಣೆ ವ್ಯವಸ್ಥೆ ಜಾರಿಗೆ ತರಲಾಗಿದೆ ಎಂದು ತಿಳಿಸಿದರು.

ಪ್ರತಿ ಋತುವಿನಲ್ಲಿಯೂ ಕೆಲವು ಸಾಂಕ್ರಾಮಿಕ ರೋಗಗಳು ಕಾಣಿಸಿಕೊಳ್ಳುತ್ತವೆ. ಅವುಗಳನ್ನು ಸಂಪೂರ್ಣವಾಗಿ ತಡೆಯಲು ಸಾಧ್ಯವಿಲ್ಲ. ಆದರೆ ಮುಂಜಾಗ್ರತಾ ಕ್ರಮಗಳು, ತ್ವರಿತ ಮಾಹಿತಿ ವಿನಿಮಯ ಮತ್ತು ಪರಿಣಾಮಕಾರಿ ನಿರ್ವಹಣೆಯ ಮೂಲಕ ರೋಗಗಳ ಪರಿಣಾಮವನ್ನು ಕಡಿಮೆ ಮಾಡಬಹುದು ಎಂದು ಸಚಿವರು ಹೇಳಿದರು.

ಈ ಹಿನ್ನೆಲೆಯಲ್ಲಿ ಸ್ಥಳೀಯ ಮಟ್ಟದಲ್ಲಿ ರೋಗ ನಿಯಂತ್ರಣ ಚಟುವಟಿಕೆಗಳನ್ನು ಪರಿಣಾಮಕಾರಿಯಾಗಿ ನಡೆಸಲು ಶಾಸಕರ ನೇತೃತ್ವದಲ್ಲಿ ಸಮಿತಿಗಳನ್ನು ರಚಿಸಲಾಗುವುದು. ಈ ಸಮಿತಿಗಳು ಆರೋಗ್ಯ ಇಲಾಖೆ ಅಧಿಕಾರಿಗಳು, ಸ್ಥಳೀಯ ಸಂಸ್ಥೆಗಳ ಪ್ರತಿನಿಧಿಗಳು ಹಾಗೂ ಸಂಬಂಧಪಟ್ಟ ಇಲಾಖೆಗಳೊಂದಿಗೆ ಸಮನ್ವಯ ಸಾಧಿಸಿ ಕಾರ್ಯನಿರ್ವಹಿಸಲಿವೆ ಎಂದು ತಿಳಿಸಿದರು.

ಸಾಂಕ್ರಾಮಿಕ ರೋಗಗಳ ನಿಯಂತ್ರಣದಲ್ಲಿ ಸಾರ್ವಜನಿಕರ ಸಹಭಾಗಿತ್ವವೂ ಮುಖ್ಯವಾಗಿದೆ. ಸ್ವಚ್ಛತೆ ಕಾಪಾಡುವುದು, ಸೊಳ್ಳೆಗಳ ನಿಯಂತ್ರಣ, ಆರೋಗ್ಯಕರ ಜೀವನಶೈಲಿ ರೂಢಿಸಿಕೊಳ್ಳುವುದು ಸೇರಿದಂತೆ ಹಲವು ಕ್ರಮಗಳ ಬಗ್ಗೆ ಜನರಲ್ಲಿ ಜಾಗೃತಿ ಮೂಡಿಸುವ ಅಗತ್ಯವಿದೆ ಎಂದು ಸಚಿವರು ಹೇಳಿದರು.

ಇದೇ ವೇಳೆ ಶಾಲಾ ಹಂತದಲ್ಲಿಯೇ ಆರೋಗ್ಯಕರ ಆಹಾರ ಪದ್ಧತಿ ಕುರಿತು ಅರಿವು ಮೂಡಿಸುವ ಅಗತ್ಯವಿದೆ ಎಂದು ಯು.ಟಿ. ಖಾದರ್ ತಿಳಿಸಿದರು. ಮಕ್ಕಳಲ್ಲಿ ಆರೋಗ್ಯಕರ ಅಭ್ಯಾಸಗಳನ್ನು ಬೆಳೆಸಿದರೆ ಮುಂದಿನ ದಿನಗಳಲ್ಲಿ ಆರೋಗ್ಯವಂತ ಸಮಾಜ ನಿರ್ಮಾಣ ಮಾಡಲು ಸಾಧ್ಯವಾಗುತ್ತದೆ ಎಂದರು.

ಜಿಲ್ಲಾಮಟ್ಟದಲ್ಲಿ ತಕ್ಷಣ ಕ್ರಮ ಕೈಗೊಳ್ಳಲು ಮತ್ತು ಪರಿಸ್ಥಿತಿಯನ್ನು ನಿರಂತರವಾಗಿ ಮೇಲ್ವಿಚಾರಣೆ ಮಾಡಲು ಹೊಸ ವ್ಯವಸ್ಥೆ

## ಪೊಲೀಸ್ ಠಾಣೆಯಲ್ಲಿ ನೊಂದವರ ದಿನ ಆಚರಣೆ

ಬೂದಿಕೋಟೆ

ಸಾರ್ವಜನಿಕರು ಪೊಲೀಸ್ ಇಲಾಖೆಯ ಮೇಲೆ ಇಟ್ಟಿರುವ ನಂಬಿಕೆಯನ್ನು ಉಳಿಸಿಕೊಳ್ಳುವುದು ನಮ್ಮ ಮೊದಲ ಆದ್ಯತೆಯಾಗಿದ್ದು, ಠಾಣೆಯಲ್ಲಿ ದಾಖಲಾಗಿರುವ ಪ್ರತಿಯೊಂದು ಪ್ರಕರಣದ ತನಿಖೆಯನ್ನು ಪಾರದರ್ಶಕವಾಗಿ ನಡೆಸಿ, ನೊಂದವರಿಗೆ ನ್ಯಾಯ ಒದಗಿಸಲು ಪೊಲೀಸರು ಬದ್ಧರಾಗಿದ್ದಾರೆ ಎಂದು ಇಲ್ಲಿನ ಪೊಲೀಸ್ ಠಾಣೆಯ ಪಿಎಸ್‌ಐ ಗುರುರಾಜ್ ಚಿಂತಕಲ್ ಹೇಳಿದರು.

ಬೂದಿಕೋಟೆ ಪೊಲೀಸ್ ಠಾಣೆಯಲ್ಲಿ ವಿವಿಧ ಮೊಕದ್ದಮೆಗಳಲ್ಲಿ ದೂರು ದಾಖಲಿಸಿರುವ ನೊಂದವರನ್ನು ಠಾಣೆಗೆ ಆಹ್ವಾನಿಸಿ ಅವರ ಪ್ರಕರಣಗಳ ತನಿಖೆಯ ಪ್ರಗತಿ ಕುರಿತು ಮಾಹಿತಿ ನೀಡುವ ಮೂಲಕ ನೊಂದವರ ದಿನವನ್ನು ಆಚರಿಸಿ ಅವರು ಮಾತನಾಡಿದರು.

ಪ್ರತಿ ದೂರುದಾರರ ಪ್ರಕರಣದ ತನಿಖೆ ಯಾವ ಹಂತದಲ್ಲಿದೆ, ಇದುವರೆಗೆ ಕೈಗೊಂಡಿರುವ ಕ್ರಮಗಳು ಹಾಗೂ ಮುಂದಿನ ತನಿಖಾ ಪ್ರಕ್ರಿಯೆಗಳ ಕುರಿತು ವಿವರವಾಗಿ ತಿಳಿಸಿದರು. ಅಲ್ಲದೆ ಪ್ರಕರಣಗಳ ಸಂಬಂಧ ನೊಂದವರು ವ್ಯಕ್ತಪಡಿಸಿದ ಅನುಮಾನಗಳು ಹಾಗೂ ಸಮಸ್ಯೆಗಳನ್ನು ಆಲಿಸಿ, ಅವುಗಳಿಗೆ ಸೂಕ್ತ ಉತ್ತರ ನೀಡಿ ಅಗತ್ಯ ಕ್ರಮ ಕೈಗೊಳ್ಳುವುದಾಗಿ ಭರವಸೆ ನೀಡಿದರು.



ಪಿಎಸ್‌ಐ ಗುರುರಾಜ್ ಚಿಂತಕಲ್ ಮಾತನಾಡಿ, ಪೊಲೀಸ್ ಠಾಣೆಗೆ ಬರುವ ಪ್ರತಿಯೊಬ್ಬ ನಾಗರಿಕರಿಗೂ ಗೌರವಯುತವಾಗಿ ಸ್ಪಂದಿಸುವುದು ನಮ್ಮ ಕರ್ತವ್ಯ. ನೊಂದವರ ದಿನದ ಮೂಲಕ ದೂರುದಾರರೊಂದಿಗೆ ನೇರವಾಗಿ ಸಂವಾದ ನಡೆಸುವುದರಿಂದ ತನಿಖೆಯ ಬಗ್ಗೆ ಅವರಿಗೆ ಸ್ಪಷ್ಟತೆ ಸಿಗುತ್ತದೆ. ಯಾವುದೇ ಪ್ರಕರಣವನ್ನು ನಿರ್ಲಕ್ಷಿಸದೆ ಕಾನೂನು ವ್ಯಾಪ್ತಿಯಲ್ಲಿ ತ್ವರಿತವಾಗಿ ತನಿಖೆ ಪೂರ್ಣಗೊಳಿಸಿ ನ್ಯಾಯ ಒದಗಿಸಲು ಇಲಾಖೆ ಬದ್ಧವಾಗಿದೆ. ಸಾರ್ವಜನಿಕರು ಯಾವುದೇ ಸಮಸ್ಯೆ,ಮಾಹಿತಿ ಇದ್ದರೂ ನಿರ್ಭಯವಾಗಿ

# ನೀಟ್ ಪ್ರಶ್ನೆಪತ್ರಿಕೆ ಸೋರಿಕೆ ಖಂಡಿಸಿ ಕೋಲಾರದಲ್ಲಿ ಧರಣಿ

ಕೋಲಾರ

ನೀಟ್ ಪರೀಕ್ಷೆಯ ಪ್ರಶ್ನೆಪತ್ರಿಕೆ ಸೋರಿಕೆ ಪ್ರಕರಣದ ಹೊಣೆಯನ್ನು ಕೇಂದ್ರ ಸರ್ಕಾರ ವಹಿಸಬೇಕು ಹಾಗೂ ವಿದ್ಯಾರ್ಥಿಗಳ ಭವಿಷ್ಯಕ್ಕೆ ಧಕ್ಕೆಯಾಗುವಂತಹ ಘಟನೆಗಳು ಮರುಕಳಿಸದಂತೆ ಕಟ್ಟುನಿಟ್ಟಿನ ಕ್ರಮ ಕೈಗೊಳ್ಳಬೇಕು ಎಂದು ಆಗ್ರಹಿಸಿ ದೆಹಲಿಯ ಜಂತರ್ ಮಂತರ್ ನಲ್ಲಿ, ಸೋನಮ್ ವಾಂಗ್ ಚುಕ್ ಅವರ ಹೋರಾಟವನ್ನು ಬೆಂಬಲಿಸಿ ಕೋಲಾರ ಜಿಲ್ಲೆಯ ಪ್ರಗತಿಪರ ಸಂಘಟನೆಗಳ ನೇತೃತ್ವದಲ್ಲಿ ಗಾಂಧಿವನದಲ್ಲಿ ಧರಣಿ ನಡೆಸಲಾಯಿತು.



ಈ ಸಂದರ್ಭದಲ್ಲಿ ಸಿಪಿಐಎಂ ಮುಖಂಡ ಗಾಂಧಿನಗರ ನಾರಾಯಣಸ್ವಾಮಿ ಮಾತನಾಡಿ, ವಿದ್ಯಾರ್ಥಿಗಳ ಭವಿಷ್ಯವನ್ನು ಹಾಳುಮಾಡುವ ನೀಟ್ ಪರೀಕ್ಷಾ ಅಕ್ರಮಗಳನ್ನು ತಡೆಗಟ್ಟಬೇಕು ಪಾರದರ್ಶಕ ಪರೀಕ್ಷಾ ವ್ಯವಸ್ಥೆ ಜಾರಿಗೆ ತರಬೇಕು ತಪ್ಪಿತಸ್ಥರ ವಿರುದ್ಧ ಕಠಿಣ ಕ್ರಮ ಕೈಗೊಳ್ಳಬೇಕು ಸೋನಮ್ ವಾಂಗ್ ಚುಕ್ ಅವರ ಬೇಡಿಕೆಗಳಿಗೆ ಕೂಡಲೇ ಕೇಂದ್ರ ಸರ್ಕಾರ ಸ್ಪಂದಿಸಿ ತಕ್ಷಣ ಕ್ರಮ ಕೈಗೊಳ್ಳಬೇಕೆಂದು ಆಗ್ರಹಿಸಿದರು.

ರೈತ ಸಂಘದ ರಾಜ್ಯ ಪ್ರಧಾನ ಕಾರ್ಯದರ್ಶಿ ಅಬ್ಬಣಿ ಶಿವಪ್ಪ ಮಾತನಾಡಿ ದೇಶದ ಲಕ್ಷಾಂತರ ವಿದ್ಯಾರ್ಥಿಗಳ ಭವಿಷ್ಯದೊಂದಿಗೆ ಚೆಲ್ಲಾಟವಾಡಿರುವ ನೀಟ್ ಪ್ರಶ್ನೆಪತ್ರಿಕೆ ಸೋರಿಕೆ ಪ್ರಕರಣಕ್ಕೆ ಕೇಂದ್ರ ಸರ್ಕಾರವೇ ನೈತಿಕ ಹೊಣೆ ಹೊರಬೇಕು ಕೇಂದ್ರ ಮಾನವ ಸಂಪನ್ಮೂಲ ಸಚಿವ ತಕ್ಷಣವೇ ತಮ್ಮ ಸ್ಥಾನಕ್ಕೆ ರಾಜೀನಾಮೆ ನೀಡಬೇಕು, ಸೋನಂ ವಾಂಗ್ ಚುಕ್ ಅವರ ಉಪವಾಸ ಸತ್ಯಾಗ್ರಹವನ್ನು ನಿಲ್ಲಿಸಲು ಅವರ ಬೇಡಿಕೆಯನ್ನು ಈಡೇರಿಸಬೇಕು ಎಂದು ಆಗ್ರಹಿಸಿದರು.

ಪ್ರತಿಭಟನೆಯಲ್ಲಿ ಎನ್.ಎನ್. ಶ್ರೀರಾಮ್, ಟಿ. ವಿಜಯಕುಮಾರ್, ಹಾರೋಹಳ್ಳಿ ರವಿ, ವಕ್ಕಲೇರಿ ರಾಜಪ್ಪ, ಹೂವರಸನಹಳ್ಳಿ ರಾಜಪ್ಪ, ವೆಂಕಟೇಶ್, ದೇವರಾಜ್, ಮಲ್ಲಸಂದ್ರ ವೆಂಕಟಸ್ವಾಮಿ, ಪಂಡಿತ್ ಮುನಿವೆಂಕಟಪ್ಪ, ಬೀರಮಾನಹಳ್ಳಿ ಆಂಜನಪ್ಪ, ವಿಜಯಕೃಷ್ಣ ಹಾಗೂ ಎಂ. ಭೀಮರಾಜ್, ಆನಂದ್ ಕುಮಾರ್ ಕೋಟಿಗಾನಹಳ್ಳಿ ಗಣೇಶ್ ಗೌಡ, ನಾರಾಯಣರೆಡ್ಡಿ, ಯಲ್ಲಪ್ಪ, ಅಲ್ಪಸಂಖ್ಯಾತ ಮುಖಂಡ ಅನ್ವರ್ ಪಾಷಾ, ಎಸ್‌ಎಫ್‌ಐ ಮುಖಂಡರಾದ ಸುರೇಶ್, ಶಶಿಕುಮಾರ್ ಸೇರಿದಂತೆ ವಿವಿಧ ಪ್ರಗತಿಪರ ಸಂಘಟನೆಗಳ ಮುಖಂಡರು ಕಾರ್ಯಕರ್ತರು ಭಾಗವಹಿಸಿದ್ದರು.

22/07/2026
ಭಾರತ ಸಾರಥಿ
BHARATHA SARATHI KANNADA DAILY NEWS PAPER
ಬೆಂಗಳೂರು । ಬೆಂ.ಗ್ರಾಮಾಂತರ । ತುಮಕೂರು । ಮೈಸೂರು । ಮಂಡ್ಯ । ರಾಮನಗರ । ಕೋಲಾರ । ಚಿಕ್ಕಬಳ್ಳಾಪುರ । ಚಿತ್ರದುರ್ಗ । ದಾವಣಗೆರೆ । ಶಿವಮೊಗ್ಗ । ಮಂಗಳೂರು । ಉಡುಪಿ । ಹುಬ್ಬಳ್ಳಿ । ಮಡಿಕೇರಿ । ಚಿಕ್ಕಮಗಳೂರು । ಹಾಸನ । ಬಳ್ಳಾರಿ
ಇ:ಪೇಪರ್: www.epaperbharathasarathi.com | ಇಮೇಲ್: desk.newsbox@gmail.com

## ‘ಮಕ್ಕಳು ಶ್ರದ್ಧಾಭಕ್ತಿಯಿಂದ ಕಲಿತು ಉತ್ತಮ ಪ್ರಜೆಗಳಾಗಬೇಕು’



ಚಿಂತಾಮಣಿ

ತಾಲೂಕಿನ ಹಾದಿಗೆರೆ ಗ್ರಾಮದ ಸರ್ಕಾರಿ ಕನ್ನಡ ಹಿರಿಯ ಪ್ರಾಥಮಿಕ ಶಾಲೆಯ ಮಕ್ಕಳಿಗೆ ಬೆಂಗಳೂರಿನ ಎಂ.ಎ.ಎಸ್ ಟ್ರಸ್ಟಿನ ವತಿಯಿಂದ ಉಚಿತ ನೋಟ್ ಪುಸ್ತಕ ಮತ್ತು ಲೇಖನ ಸಾಮಗ್ರಿಗಳನ್ನು ವಿತರಿಸಲಾಯಿತು.

ಈ ಸಂದರ್ಭದಲ್ಲಿ ಟ್ರಸ್ಟಿನ ಸದಸ್ಯರು ಹಾಗೂ ಬಿಎಸ್‌ಎನ್‌ಎಲ್ ನಿವೃತ್ತ ಅಧಿಕಾರಿಯದ ಆರ್. ನರಸಿಂಹಮೂರ್ತಿ ಮಾತನಾಡಿ, ಹಿಂದಿನ ವರ್ಷದಲ್ಲೂ ಶಾಲೆಗೆ ಹಲವು, ಕೊಡುಗೆ ನೀಡಿದ್ದು, ಮುಂದಿನ ವರ್ಷದಲ್ಲೂ ಸಹ ಸಹಾಯ ಒದಗಿಸುವುದಾಗಿ ನುಡಿದರು. ಮಕ್ಕಳು ಶ್ರದ್ಧಾ ಭಕ್ತಿಯಿಂದ ಕಲಿತು ಉತ್ತಮ ಪ್ರಜೆಗಳಾಗಬೇಕೆಂದು ಹೇಳಿದರು.

ದೊಡ್ಡ ಗಂಜೂರು ಗ್ರಾ ಪಂ ಮಾಜಿ ಅಧ್ಯಕ್ಷರಾದ ಎಸ್. ಅಂಜಪ್ಪನವರು ಮಾತನಾಡಿ, ದಾನಿಗಳ ಸೇವಾ ಕಾರ್ಯದ ಬಗ್ಗೆ ಮೆಚ್ಚುಗೆ ವ್ಯಕ್ತಪಡಿಸಿದರು.

ದಾನಿಗಳಾದ ಆರ್. ನರಸಿಂಹಮೂರ್ತಿ ರವರನ್ನು ಶಾಲೆಯ ವತಿಯಿಂದ ಆತ್ಮೀಯವಾಗಿ ಸನ್ಮಾನಿಸಲಾಯಿತು.

ಗ್ರಾ.ಪಂ ಮಾಜಿ ಅಧ್ಯಕ್ಷೆಯಾದ ಅಂಬಿಕಾ ತುಳಸಿ ಕೃಷ್ಣ, ಗ್ರಾಪಂ ಮಾಜಿ ಸದಸ್ಯರಾದ ತಾಜ್ ಷಾ, ಎಸ್ ಡಿ ಎಂ ಸಿ ಅಧ್ಯಕ್ಷೆ ಆಶಾ ರಾಣಿ, ಮುಖ್ಯ ಶಿಕ್ಷಕ ಎನ್ ವಿ. ಮುನಿಯಪ್ಪ, ಸಹ ಶಿಕ್ಷಕಿ ಜಿ ವಿ .ಮಂಜುಳಾ, ಪೋಷಕರು ಹಾಗೂ ಇತರೆ ಮುಖಂಡರು ಉಪಸ್ಥಿತರಿದ್ದರು.

## ಭೂಗಳ್ಳಕ್ಕೆ: ಕರವೇದಿಂದ ಪ್ರತಿಭಟನೆಯ ಎಚ್ಚರಿಕೆ

ದೊಡ್ಡಬಳ್ಳಾಪುರ

ಸರ್ಕಾರಿ ಜಾಗಗಳನ್ನು ಕಬಳಿಸಿರುವ ಭೂ ಗಳ್ಳರ ವಿರುದ್ಧ ಕ್ರಮ ಕೈಗೊಳ್ಳುವಂತೆ ತಾಲೂಕು ಆಡಳಿತ ಯಾವುದೇ ಕ್ರಮ ಕೈಗೊಳ್ಳದೆ ಜಾಣ ಕಿವುಡತನ ಪ್ರದರ್ಶಿಸಿದೆ. ಆಗಸ್ಟ್ 1 ರೊಳಗೆ ಕ್ರಮ ಕೈಗೊಳ್ಳದಿದ್ದರೆ ಸ್ವತಂತ್ರ ದಿನಾಚರಣೆಯಂದು ಕರ್ನಾಟಕ ರಕ್ಷಣಾ ವೇದಿಕೆ ಕನ್ನಡಿಗರ ಬಣ ಕಪ್ಪು ಬಾವುಟ ಪ್ರದರ್ಶನ ಪ್ರದರ್ಶನದ ಮೂಲಕ ತೀವ್ರ ಹೋರಾಟ ನಡೆಸಲಾಗುವುದೆಂದು ಸಂಘಟನೆಯ ಸಂಸ್ಥಾಪಕ ಅಧ್ಯಕ್ಷ ಬಿ.ಎಸ್. ಚಂದ್ರಶೇಖರ್ ಹೇಳಿದ್ದಾರೆ.

ಕರ್ನಾಟಕ ರಕ್ಷಣಾ ವೇದಿಕೆ ಕನ್ನಡಿಗರ ಬಣ ದಿಂದ ತಾಲೂಕು ಕಚೇರಿ ಮುಂಭಾಗ ನಡೆದ ಸುದ್ದಿ ಗೋಷ್ಠಿಯಲ್ಲಿ ಚಂದ್ರಶೇಖರ್ ಮಾತನಾಡಿ ತಾಲೂಕಿನಲ್ಲಿ ಹಲವಾರು ಕಡೆ ಭೂ ಕಬಳಿಕೆ ದಾರರು ಸರ್ಕಾರಿ ಜಾಗಗಳನ್ನು ಕಬಳಿಸಿದ್ದಾರೆ. ಈ ಬಗ್ಗೆ ಕರವೇ ಕನ್ನಡಿಗರ ಬಣದ ವತಿಯಿಂದ ನಿರಂತರ ಹೋರಾಟ ನಡೆಸುತ್ತಾ ಬಂದಿದೆ. ಇದರ ಬಗ್ಗೆ ತಾಲೂಕು ಆಡಳಿತಕ್ಕೆ ಹಲವಾರು ಬಾರಿ ಮನವಿ ಸಲ್ಲಿಸಿದರೂ ಯಾವುದೇ ಕ್ರಮವಾಗಿಲ್ಲ. ಕಳೆದ ಬಾರಿ ಹೋರಾಟಕ್ಕೆ ಮುಂದಾದಾಗ ತಹಸೀಲ್ದಾರ್ ರವರು ಸಂಬಂಧ ಪಟ್ಟ ಅಧಿಕಾರಿಗಳಿಂದ ಮಾಹಿತಿ ಪಡೆದು ಕಾನೂನು ಕ್ರಮ ಕೈಗೊಳ್ಳಲಾಗುವುದೆಂದು ಹೇಳಿದ್ದರು. ವರ್ಷ ಕಳೆದರೂ ಯಾವುದೇ ಕ್ರಮವಿಲ್ಲ ಎಂದು ಆಕ್ರೋಶ ವ್ಯಕ್ತ ಪಡಿಸಿದರು.

ತಾಲ್ಲೂಕಿನ ಕಸಬಾ ಹೋಬಳಿ ಗಂಗಾಧರಪುರದ ಸರ್ಕಾರಿ ಕುಂಟೆ, ಅರೇಹಳ್ಳಿ ಗುಡ್ಡದಹಳ್ಳಿ ಸರ್ಕಾರಿ ಗೋಮಾಳ, ರೋಜಿಪುರದ ಸರ್ಕಾರಿ ಖರಾಬ್ ಜಾಗ, ಗಂಗಾಧರಪುರದ ಸ್ಮಶಾನ ಜಾಗದಲ್ಲಿನ



ಅನಧಿಕೃತ ಮಳಿಗೆ ಗಳ ಬಗ್ಗೆ, ಪದೇ ಪದೇ ತಾಲೂಕು ಆಡಳಿತದ ಗಮನಕ್ಕೆ ತರಲಾಗಿದೆ. ಅಲ್ಲದೆ ಭಗತ್ ಸಿಂಗ್ ಕ್ರೀಡಾಂಗಣದ ಬಳಿ ಪರಿಶಿಷ್ಟ ಜಾತಿ, ಪಂಗಡದ ಹೆಣ್ಣು ಮಕ್ಕಳ ವಿದ್ಯಾರ್ಥಿ ನಿಲಯದ ಜಾಗದ ಅತಿಕ್ರಮಣ, ಸೋಮೇಶ್ವರ ದೇವಾಲಯದ ಮಠದ ವಿಚಾರ, ಬಹು ಮುಖ್ಯವಾಗಿ ನಗರದ ಗಂಗಾಧರ ಪುರ ಗ್ರಾಮದ ಪೊಲೀಸ್ ಕ್ವಾರ್ಟರ್ಸ್ ಜಾಗದ ಬಗ್ಗೆ ಸಂಬಂಧ ಪಟ್ಟ ಅಧಿಕಾರಿಗಳಿಗೆ ದೂರು ನೀಡಲಾಗಿದೆ.

ಇಲ್ಲಿ ಅರ್ಥವಾಗದ ವಿಚಾರವೆಂದರೆ ಸರ್ಕಾರಿ ಅಧಿಕಾರಿಗಳು ತಾವೇ ಖುದ್ದು ಸರ್ಕಾರಿ ಜಾಗಗಳ ರಕ್ಷಣೆಗೆ ಮುಂದಾಗಬೇಕು. ಆಶ್ಚರ್ಯವೆಂದರೆ ಸಾರ್ವಜನಿಕರು, ಸಂಘ ಸಂಸ್ಥೆಗಳು ಭೂ ಕಬಳಿಕೆ ಬಗ್ಗೆ ದೂರು ನೀಡಿದರೂ ಅಧಿಕಾರಿಗಳು ಗಮನ ಹರಿಸುತ್ತಿಲ್ಲ. ಇದೆಲ್ಲವನ್ನು ಸೂಕ್ಷ್ಮವಾಗಿ ಗಮನಿಸಿದರೆ ಭೂಗಳ್ಳರ ಸರ್ಕಾರಿ ಜಾಗದ ಕಬಳಿಕೆಯಲ್ಲಿ ಸರ್ಕಾರಿ ಅಧಿಕಾರಿಗಳು ಶಾಮಿಲಾಗಿದ್ದಾರಾ ಎಂಬ ಅನುಮಾನ ಸಾರ್ವಜನಿಕವಾಗಿ ವ್ಯಕ್ತವಾಗುತ್ತಿದೆ.

ಸರ್ಕಾರಿ ಅಧಿಕಾರಿಗಳ ನಿರ್ಲಕ್ಷತನ ಅಥವಾ ಭೂ ಗಳ್ಳರ ಜೊತೆ ಶಾಮಿಲಾಗಿರುವ ಬಗ್ಗೆ ಉನ್ನತ ಅಧಿಕಾರಿಗಳ ಗಮನಕ್ಕೆ ತಂದರೂ ಪ್ರಯೋಜನವಾಗದೆ ಅಧಿಕಾರಿಗಳಿಂದ ಹಾರಿಕೆ ಉತ್ತರಗಳು ಹಾಗೂ ದಿಕ್ಕು ತಪ್ಪಿಸುವ ಕೆಲಸ ನಿರಂತರವಾಗಿ ನಡೆಯುತ್ತಿದೆ. ಇದನ್ನು ತೀವ್ರವಾಗಿ ಖಂಡಿಸಿ ಆಗಸ್ಟ್ 1 ರೊಳಗಾಗಿ ಕ್ರಮ ಕೈಗೊಳ್ಳಬೇಕು. ಉನ್ನತಧಿಕಾರಿ ಗಳಿಂದ ಯಾವುದೇ ಭರವಸೆಯ ಮಾತುಗಳನ್ನು ನಂಬುವ ಪ್ರಶೆಯೇ ಇಲ್ಲಾ. ಒಂದು ವೇಳೆ ಆಗಸ್ಟ್ 1 ರೊಳಗಾಗಿ ಕ್ರಮ ಕೈಗೊಳ್ಳದಿದ್ದರೆ ಆಗಸ್ಟ್ 15ರಂದು ತಾಲೂಕು ಆಡಳಿತದ ವತಿಯಿಂದ ನಡೆಯುವ ಸ್ವತಂತ್ರೋತ್ಸವ ಕಾರ್ಯಕ್ರಮದಲ್ಲಿ ಕಪ್ಪು ಬಾವುಟ ಪ್ರದರ್ಶನದ ಮೂಲಕ ಉಗ್ರ ಪ್ರತಿಭಟನೆಗೆ ಕರವೇ ಕನ್ನಡಿಗರ ಬಣ ಮುಂದಾಗಲಿದೆ ಎಂದು ಚಂದ್ರಶೇಖರ್ ತಾಲೂಕು ಆಡಳಿತಕ್ಕೆ ಎಚ್ಚರಿಕೆ ಕೊಟ್ಟಿದ್ದಾರೆ.

ಸುದ್ದಿ ಗೋಷ್ಠಿಯಲ್ಲಿ ಕರವೇ ರಾಜ್ಯ ಪ್ರದಾನ ಕಾರ್ಯದರ್ಶಿ ಆರ್. ರಮೇಶ್, ರಾಜ್ಯ ಮುಖಂಡ ಪಿ. ವಾಸು, ಜಿಲ್ಲಾ ಪ್ರದಾನ ಕಾರ್ಯದರ್ಶಿ ತಾಯೇಗೌಡ, ಜಿಲ್ಲಾ ಯುವ ಘಟಕದ ಅಧ್ಯಕ್ಷ ರಂಜಿತ್ ಗೌಡ, ತಾಲೂಕು ಉಪಾಧ್ಯಕ್ಷ ಅಂಬರೀಷ್, ತಾ. ಪ್ರದಾನ ಕಾರ್ಯದರ್ಶಿ ಉದಯ್ ಕುಮಾರ್, ಕಾರ್ಮಿಕ ಘಟಕದ ಅಧ್ಯಕ್ಷ ಶಿವಶಂಕರ್ ರೆಡ್ಡಿ, ಸಾಸಲು ಹೋಬಳಿ ಅಧ್ಯಕ್ಷ ಲಕ್ಷ್ಮೀನಾರಾಯಣ,

## ವಿದ್ಯಾರ್ಥಿಗಳಿಗೆ ನೋಟ್ ಪುಸ್ತಕ ವಿತರಣೆ



ಚಿಕ್ಕಬಳ್ಳಾಪುರ

ಪ್ರತಿಷ್ಠಿತ ಸ್ವಯಂ ಸೇವಾ ಸಂಸ್ಥೆಗಳಲ್ಲಿ ಒಂದಾದ ನಗರದ ಶ್ರೀ ಮಂಗಿಶೆಟ್ಟಿ ನರಸಿಂಹಯ್ಯ ಶ್ರೀಮತಿ ರಂಗಮ್ಮ ಟ್ರಸ್ಟ್ ವತಿಯಿಂದ ಭಾರತಿನಗರದಲ್ಲಿನ ಭಾರತಿ ವಿದ್ಯಾಸಂಸ್ಥೆಯ 8 ಮತ್ತು 9 ನೇ ತರಗತಿಯ ವಿದ್ಯಾರ್ಥಿಗಳಿಗೆ ಉಚಿತ ನೋಟ್ ಪುಸ್ತಕಗಳನ್ನ ವಿತರಣೆ ಮಾಡಲಾಯಿತು.

ನೋಟು ಪುಸ್ತಕಗಳ ವಿತರಣೆ ಕಾರ್ಯಕ್ರಮಕ್ಕೂ ಮುನ್ನ ಎಂಎನ್ ಆರ್ ಟ್ರಸ್ಟಿನ ಅಧ್ಯಕ್ಷರು ಹಾಗೂ ಅವತಿ ಗ್ರಾಮಾಂತರ ಪ್ರೌಢಶಾಲೆ ನಿವೃತ್ತ ಮುಖ್ಯ ಶಿಕ್ಷಕರಾದ ಎಂ.ಎನ್ ಕೃಷ್ಣಮೂರ್ತಿ ಮಾತನಾಡಿ, ಅತ್ಯಂತ ಬಡತನದಲ್ಲಿ ಜನಿಸಿದ ಮಂಗಿಶೆಟ್ಟಿ ನರಸಿಂಹಯ್ಯ ಅವರು ತಮ್ಮ ದೂರ ದೃಷ್ಟಿಯಿಂದ ಬಡ ವಿದ್ಯಾರ್ಥಿಗಳ ಶಿಕ್ಷಣ, ಆರೋಗ್ಯ ಲೋಕಕಲ್ಯಾಣ ಹಾಗೂ ಸಮಾಜದ ಸರ್ವತೋಮುಖ ಅಭಿವೃದ್ಧಿಗಾಗಿ ಪಣತೊಟ್ಟು ಈ ಸಂಸ್ಥೆಯನ್ನ ಕಟ್ಟಿದ್ದಾರೆ. ಅವರ ಆಶಯದಂತೆ ಮಕ್ಕಳ ಶೈಕ್ಷಣಿಕ ಪ್ರಗತಿಗಾಗಿ ಈ ಸೇವ ಕಾರ್ಯವನ್ನ ಮಾಡುತ್ತಾ ಬರಲಾಗಿದೆ ಇದು ಸದ್ವಿನಿಯೋಗ ಆಗಬೇಕು ಆಗ ಮಾತ್ರ ಇಂತಹ ಸೇವಾ ಕಾರ್ಯಕ್ರಮಗಳು ಮಾಡಿದ್ದಕ್ಕೂ ಸಾರ್ಥಕ, ಕಲಿಯುವ ಈ ಸಂದರ್ಭದಲ್ಲಿ ಶಿಸ್ತು ಸಂಯಮದೊಂದಿಗೆ ಸಮಾಜದ ಭದ್ರ ಬುನಾದಿ ಆಗಬೇಕು ಅದೇ ರೀತಿ ಇಂತಹ ಸಾಧಕ ಮಹನೀಯರ ಆದರ್ಶಗಳನ್ನ ಮೈಗೂಡಿಸಿಕೊಳ್ಳಬೇಕು ಎಂದು ವಿದ್ಯಾರ್ಥಿಗಳಿಗೆ ಕಿವಿಮಾತು ಹೇಳಿದರು.

ಈ ಸಂದರ್ಭದಲ್ಲಿ ಭಾರತಿ ವಿದ್ಯಾ ಸಂಸ್ಥೆಯ ಕಾರ್ಯದರ್ಶಿ ವೇಣುಗೋಪಾಲ್, ಟ್ರಸ್ಟಿನ ಕಾರ್ಯದರ್ಶಿ ಉತ್ತಮ್ ಚಂದ್ ಜೈನ್. ಎಂಎನ್‌ಆರ್ ಟ್ರಸ್ಟಿನ ಸಹಕಾರ್ಯದರ್ಶಿ ನರಸಿಂಹಮೂರ್ತಿ, ಟ್ರಸ್ಟಿ ಸತ್ಯನಾರಾಯಣ, ಪತ್ರಕರ್ತ ಹಾಗೂ ಟ್ರಸ್ಟಿ ಎಂ.ಕೃಷ್ಣಪ್ಪ, ಮತ್ತೋರ್ವ ಪತ್ರಕರ್ತ ಈಶ್ವರ್ ಗೌಡಗೆರೆ, ವ್ಯವಸ್ಥಾಪಕ ಅಶ್ವತ್, ಮುಖ್ಯ ಶಿಕ್ಷಕರಾದ ಅಶ್ವತನಾರಾಯಣ ದೈಹಿಕ ಶಿಕ್ಷಣ ಶಿಕ್ಷಕರಾದ ಶ್ರೀನಿವಾಸ್ ಸಹ ಶಿಕ್ಷಕರಾದ ರೇಖಾ ಮತ್ತು ಮೇಘನಾ ಇದ್ದರು.

## ಉಚಿತ ಕಣ್ಣಿನ ತಪಾಸಣೆ

ದೇವನಹಳ್ಳಿ

ಕಣ್ಣು ಮಾನವನ ಎರಡು ಕಮಲಗಳ ಇದ್ದಂತೆ ಅಮೂಲ್ಯವಾದ ಮತ್ತು ಸೂಕ್ಷ್ಮವಾದ ಅಂಗ ನಿರಂತರ ಕಣ್ಣಿನ ಸ್ವಚ್ಛತೆ ಕಾಪಾಡುವುದು ನಮ್ಮೆಲ್ಲರ ಕರ್ತವ್ಯ ಎಂದು ಮಾಜಿ ಶಾಸಕ ಲಯನ್ ಜಿ ಚಂದ್ರಣ್ಣ ತಿಳಿಸಿದರು.

ಪಟ್ಟಣದ ಲಯನ್ ಸೇವಾ ಭವನದಲ್ಲಿ ಲಯನ್ ಸಂಸ್ಥೆ ಲಯನ್ ಸೇವಾ ಪ್ರತಿಷ್ಠಾನ ಬೆಂಗಳೂರು ಪಶ್ಚಿಮ ಆಸ್ಪತ್ರೆ ಜೋಡಣೆ ಕೇಂದ್ರ ಶ್ರೀ ಕೃಷ್ಣದೇವರಾಯ ದಂತ ವೈದ್ಯಕೀಯ ಮಹಾ ವಿಶ್ವವಿದ್ಯಾಲಯ ದೇವನಹಳ್ಳಿ ಸಮುದಾಯ ಆಸ್ಪತ್ರೆಯ ಆರೋಗ್ಯ ಕೇಂದ್ರದಿಂದ ಕಣ್ಣಿನ ಉಚಿತ ಶಸ್ತ್ರಚಿಕಿತ್ಸೆ ಶಿಬಿರ ಸಮಾರಂಭವನ್ನು ಉದ್ಘಾಟಿಸಿ ಮಾತನಾಡಿದ ಅವರು. ಕಣ್ಣು ಮಾನವನ ದೇಹದ ಸೂಕ್ಷ್ಮವಾದ ಇದನ್ನು ಎಚ್ಚರಿಕೆಯಿಂದ ಕಾಪಾಡಿಕೊಳ್ಳಬೇಕು ಹಿಂದುಳಿದ ಜನರಿಗೆ ಉಚಿತ ಕಣ್ಣಿನ ತಪಾಸಣೆ ಹಾಗೂ ಶಸ್ತ್ರಚಿಕಿತ್ಸೆ ಶಿಬಿರಗಳು ಅನುಕೂಲವಾಗಲಿದೆ. ಎಂದು ಹೇಳಿದರು.

ಲಯನ್ ಸಂಸ್ಥೆಯ ಅಧ್ಯಕ್ಷ ನರಸಿಂಹಮೂರ್ತಿ ಮಾತನಾಡಿ, ನಮ್ಮ ದೇಹದಲ್ಲಿ ಅತ್ಯಂತ ಸೂಕ್ಷ್ಮ ಅಂಗವಾಗಿರುವ ಕಣ್ಣುಗಳ ಬಗ್ಗೆ ವಿಶೇಷ ಕಾಳಜಿ ವಹಿಸಬೇಕು. ದೇವನಹಳ್ಳಿ ಲಯನ್ ಸಂಸ್ಥೆ 275ನೇ ಶಿಬಿರದಲ್ಲಿ 112 ಜನ ಭಾಗವಹಿಸಿದ್ದರು.

ಈ ವೇಳೆ ಬಿಎಲ್ ಪ್ರಸನ್ನ ಕುಮಾರ್, ಎಂ. ಜಯಪ್ರಕಾಶ್, ಲಯನ್ ಸಂಸ್ಥೆ ಕಾರ್ಯದರ್ಶಿ ಸುಹಾಸ್, ಖಜಾಂಚಿ ಎಸ್ ವಿಜಯ್ ಕುಮಾರ್, ಸತೀಶ್ ಕುಮಾರ್, ವಿಜಯ್ ಕುಮಾರ್,, ಭಾಸ್ಕರ್, ರಾಮಯ್ಯ, ಜಿ.ಕೆ ನಾರಾಯಣಸ್ವಾಮಿ, ಸದಸ್ಯರಾದ ಪ್ರಸನ್ನ ಕುಮಾರ್, ರಮ್ಯಾ, ಗುರು ಕೃಷ್ಣದೇವರಾಯ ದಂತ ವೈದ್ಯಕೀಯರು ಲಯನ್ ಪಶ್ಚಿಮ ಕಣ್ಣಿನ ಆಸ್ಪತ್ರೆ ವೈದ್ಯರು, ಕಾಲೇಜಿನ ವೈದ್ಯರು ಸಿಬ್ಬಂದಿ ವರ್ಗದವರು ಹಾಜರಿದ್ದರು.

## ಎಮ್ಮೆ ಖರೀದಿಸಲು ಕೋಮುಲ್‌ದಿಂದ ಪ್ರೋತ್ಸಾಹಧನ: ಬಿ ರಮೇಶ್

ಕೋಲಾರ

ಮಹಿಳೆಯರು ಹೈನುಗಾರಿಕೆಯಲ್ಲಿ ಹೆಚ್ಚು ತೊಡಗಿಸಿಕೊಳ್ಳುವ ಉದ್ದೇಶ ಹಾಗೂ ದೀರ್ಘಕಾಲದ ಹಾಲು ಉತ್ಪಾದನೆಗಾಗಿ ಎಮ್ಮೆ ಖರೀದಿಸಲು ಕೋಮುಲ್ ವತಿಯಿಂದ 30 ಸಾವಿರ ಪ್ರೋತ್ಸಾಹಧನ ನೀಡಲು ಚಿಂತನೆ ನಡೆದಿದ್ದು ಇದರ ಸದುಪಯೋಗವನ್ನು ಪಡಿಸಿಕೊಳ್ಳಬೇಕು ಎಂದು ಕೋಮುಲ್ ನಿರ್ದೇಶಕ ಚಂಜಿಮಲೆ ಬಿ ರಮೇಶ್ ತಿಳಿಸಿದರು.

ತಾಲೂಕಿನ ವೇಮಗಲ್ ಹೋಬಳಿಯ ಸೀತಿ ಗ್ರಾಮದಲ್ಲಿ ಕೋಮುಲ್ ವತಿಯಿಂದ ಭಾನುವಾರ ಆಯೋಜಿಸಿದ್ದ ಹಾಲು ಉತ್ಪಾದಕರ ಸಂಘಗಳ ನಿವೃತ್ತ ನೌಕರರಿಗೆ ಸನ್ಮಾನ ಹಾಗೂ ವಿದ್ಯಾರ್ಥಿಗಳಿಗೆ ಪ್ರತಿಭಾ ಪುರಸ್ಕಾರ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದ ಅವರು ಎಮ್ಮೆಗಳು ದೀರ್ಘಕಾಲದ ಹಾಲು ಉತ್ಪಾದನೆಯೊಂದಿಗೆ ಗುಣಮಟ್ಟದ ಹಾಲು ನೀಡುತ್ತವೆ ಅದಕ್ಕಾಗಿ ಪ್ರೋತ್ಸಾಹ ನೀಡಲು ಒಕ್ಕೂಟದಲ್ಲಿ ಚಿಂತನೆ ನಡೆದಿದೆ ಹಾಲು ಉತ್ಪಾದಕರು ಸಹ ಹಸಿ ಮೇವು ಮತ್ತು ಒಣ ಮೇವು ಜೊತೆಗೆ ಪಶು ಆಹಾರವನ್ನು ಹೆಚ್ಚಾಗಿ ಬಳಕೆ ಮಾಡುವ ಮೂಲಕ ಗುಣಮಟ್ಟದ ಹಾಲು



ಉತ್ಪಾದನೆಗೆ ಹೆಚ್ಚಿನ ಮಹತ್ವ ನೀಡಬೇಕಾಗಿದೆ ಎಂದರು.

ಜಿಲ್ಲಾ ಸಹಕಾರಿ ಯೂನಿಯನ್ ನಿರ್ದೇಶಕ ಬೆಟ್ಟಹೊಸಪುರ ಮುರಳಿ ಮಾತನಾಡಿ, ಡೇರಿಗಳಲ್ಲಿನ ಸಿಬ್ಬಂದಿ ಒತ್ತಡದಲ್ಲಿ ಕಾರ್ಯನಿರ್ವಹಿಸುತ್ತಾರೆ ನಿವೃತ್ತಿ ನಂತರ ಅವರಿಗೆ ಒಂದಿಷ್ಟು ಪ್ರೋತ್ಸಾಹ ಧನ ನೀಡಿ ಕೈ ತೊಳದುಕೊಳ್ಳದೆ ಗೌರವಯುತವಾಗಿ ಸನ್ಮಾನ ಕಾರ್ಯಕ್ರಮವನ್ನು ಹಮ್ಮಿಕೊಂಡಿದ್ದು ಇದೇ ಮೊದಲ ಬಾರಿಗೆ ನೌಕರರು ಮತ್ತು ಹಾಲು ಉತ್ಪಾದಕರ ಏಳಿಗೆಗಾಗಿ ಒಕ್ಕೂಟವು ನಿರಂತರವಾಗಿ ಶ್ರಮಿಸಲಿದೆ ಶಿಕ್ಷಣ ಆರೋಗ್ಯ ಅಂತಹ ಕಾರ್ಯಕ್ಕೆ ಒಕ್ಕೂಟವನ್ನು ಬಳಸಿಕೊಳ್ಳಬೇಕು ಎಂದರು.

ಈ ಸಂದರ್ಭದಲ್ಲಿ ಕೋಮುಲ್ ಹಣಕಾಸು ವಿಭಾಗದ ವ್ಯವಸ್ಥಾಪಕ ಮುರಳಿ, ಉಪ ವ್ಯವಸ್ಥಾಪಕರಾದ ಡಾ.ಮಹೇಶ್, ಡಾ ಅಶ್ವಕ್ ಅಹಮದ್, ಪಿಎಲ್ಡಿ ಬ್ಯಾಂಕ್ ನಿರ್ದೇಶಕ ಕುರಗಲ್ ವೆಂಕಟೇಶ್, ಬಿಜಿಎಸ್ ಶಾಲೆಯ ಪ್ರಾಂಶುಪಾಲ ಚಂದ್ರಕುಮಾರ್, ಕೋಮುಲ್ ವಿಸ್ತಾರಣಾಧಿಕಾರಿಗಳಾದ ಸಮೀರ್ ಪಾಷ, ನಾಗೇಂದ್ರ, ಚಂಜಿಮಲೆ ಗ್ರಾಮದ ಮುರಳಿ ಸೇರಿದಂತೆ ಹಾಲು ಉತ್ಪಾದಕರು, ವಿದ್ಯಾರ್ಥಿಗಳು ಇದ್ದರು.

## ಮನೆ ಕಳವು ಪ್ರಕರಣದಲ್ಲಿ ಅಂತರರಾಜ್ಯ ಆರೋಪಿ ಬಂಧನ, ಮಾಲು ವಶ

ಕೆಜಿಎಫ್

ಕೆ.ಜಿ.ಎಫ್ ಜಿಲ್ಲಾ ವ್ಯಾಪ್ತಿಯಲ್ಲಿರುವ ಎಲ್ಲಾ ಪೋಲೀಸ್ ಠಾಣೆಗಳಲ್ಲಿನ ಪತ್ತೆಯಾಗದ ಇದ್ದ ಕಳವು ಪ್ರಕರಣಗಳಲ್ಲಿ ಆರೋಪಿ ಮತ್ತು ಮಾಲು ಪತ್ತೆಗಾಗಿ ಪೊಲೀಸ್ ಅಧೀಕ್ಷಕರು, ಕೆ.ಜಿ.ಎಫ್ ರವರು ಕಿರಣ್‌ಕುಮಾರ್ ಬಿ.ವಿ, ಪಿ.ಎಸ್.ಐ, ಕಾಮಸಮುದ್ರಂ ಪೊಲೀಸ್ ಠಾಣೆ, ತ್ಯಾಗರಾಜ್ ಪಿ.ಎಸ್.ಐ ಬೇತಮಂಗಲ ಪೊಲೀಸ್ ಠಾಣೆ ಹಾಗೂ ಸಿಬ್ಬಂದಿಯವರಾದ ಮಂಜುನಾಥ್‌ರೆಡ್ಡಿ, ಮುನಾವರ್‌ಪಾಷ, ರಾಮಕೃಷ್ಣಾರೆಡ್ಡಿ, ಮಂಜುನಾಥ್, ಲಕ್ಷ್ಮಣ್‌ತೇಲಿ, ವಿಶ್ವನಾಥ ಚಾಲಕ ಗುರುಮೂರ್ತಿ ರವರನ್ನೊಳಗೊಂಡಂತೆ ವಿಶೇಷ ಅಧರಾದ ಪತ್ತೆ ತಂಡವನ್ನು ರಚನೆ ಮಾಡಿದ್ದು ಕಾರ್ಯಚರಣೆ ನಡೆಸಿದ ತಂಡವು ಆರೋಪಿಯಾದ ಮಹಮ್ಮದ್ ತಯೂಬ್ ಬಿನ್ ಮಮ್ಮತಾಜ್ ಆಹ್ಮದ್, 47 ವರ್ಷ ತಮಿಳುನಾಡು ವಾಸಿ ರವರನ್ನು ಪತ್ತೆ ಮಾಡಿ ವಿಚಾರಣೆ ಮಾಡಿದಾಗ ಬೇತಮಂಗಲ ಪೊಲೀಸ್ ಠಾಣೆ ಮೊ.ಸಂ:142/2025 ಪ್ರಕರಣದಲ್ಲಿ ಮನೆ ಕಳ್ಳತನ ಮಾಡಿರುವುದು ಒಪ್ಪಿಕೊಂಡಿದ್ದು ಆರೋಪಿಯ ಕಡೆಯಿಂದ ರೂ.3,40,000/- ಬೆಲೆ ಬಾಳುವ 22 ಗ್ರಾಂ ತೂಕದ 03 ಜೊತೆ ಚಿನ್ನದ ಓಲೆ ಮತ್ತು ಒಂದು ಜೊತೆ ಚಿನ್ನದ ಮಾಟಿ ಮತ್ತು 125 ಗ್ರಾಂ ಬೆಳ್ಳಿ ಅಭರಣಗಳನ್ನು ವಶಪಡಿಸಿಕೊಂಡಿದ್ದು ಹಾಗೂ ಸದರಿ ಆರೋಪಿಯು ರಾಬರ್ಟ್‌ಸನ್ ಪೇಟೆ ಪೊಲೀಸ್ ಠಾಣೆಯ ಮೊ.ಸಂ:180/2013, 219/2013, 80/2014, 81/2014 ಮತು ಸಿ.ಸಿ 244/2016 ರ 05 ಎಲ್.ಪಿ.ಆರ್ ಪ್ರಕರಣಗಳಲ್ಲಿ ಸುಮಾರು 12 ವರ್ಷಗಳಿಂದ ಮಾನ್ಯ ನ್ಯಾಯಲಯಕ್ಕೆ ಹಾಜರಾಗದೆ ತಲೆ ಮರಿಸಿಕೊಂಡಿರುವುದಾಗಿ ಕಂಡುಬಂದಿದ್ದು ಆರೋಪಿಯನ್ನು ನ್ಯಾಯಾಂಗ ಬಂಧನಕ್ಕೆ ಒಪ್ಪಿಸಿರುತ್ತಾರೆ.

ಡಿವೈಎಸ್‌ಪಿ ಲಕ್ಷ್ಮಯ್ಯ. ವಿ ಮತ್ತು ಕಾಮಸಮುದ್ರಂ ವೃತ್ತ ಕಛೇರಿ ಪ್ರಭಾರ ಸಿಪಿಐ ಹರೀಶ್. ಆರ್ ರವರ ಮಾರ್ಗದರ್ಶನದಲ್ಲಿ ಈ ಕಾರ್ಯಾಚರಣೆಯಲ್ಲಿ ಭಾಗವಹಿಸಿ ಆರೋಪಿ ಮತ್ತು ಮಾಲನ್ನು ಪತ್ತೆ ಮಾಡುವಲ್ಲಿ ಯಶಸ್ವಿಯಾದ ಕಾಮಸಮುದ್ರಂ ಪಿ.ಎಸ್.ಐ ಬಿ.ವಿ.ಕಿರಣ್‌ಕುಮಾರ್, ಪಿ.ಎಸ್.ಐ ತ್ಯಾಗರಾಜ್ ಮತ್ತು ಸಿಬ್ಬಂದಿಯವರಾದ ಮಂಜುನಾಥರೆಡ್ಡಿ, ರಾಮಕೃಷ್ಣರೆಡ್ಡಿ, ಮುನಾವರ್ ಪಾಷ, ರಾಮರಾವ್, ಮಂಜುನಾಥ, ಲಕ್ಷ್ಮಣತೇಲಿ, ವಿಶ್ವನಾಥ ಹಾಗೂ ಜೀಪ್ ಚಾಲಕ ಗುರುಮೂರ್ತಿ ರವರ ಉತ್ತಮ ಕಾರ್ಯವನ್ನು ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಶಿವಾಂಶು

## 26ಕ್ಕೆಸಂಜೀವರಾಯಸ್ವಾಮಿಬ್ರಹ್ಮರಥೋತ್ಸವ

ರಾಮನಗರ

ಚನ್ನಪಟ್ಟಣ ತಾಲ್ಲೂಕಿನ ದೇವರಹೊಸಹಳ್ಳಿಯ ಶ್ರೀ ಆಂಜನೇಯಸ್ವಾಮಿ (ಶ್ರೀ ಸಂಜೀವರಾಯಸ್ವಾಮಿ) ದೇವಸ್ಥಾನದ ಶ್ರೀ ಆಂಜನೇಯಸ್ವಾಮಿಯವರ ವೈಕುಂಠ ಸೇವಾ ದರ್ಶನ ಮತ್ತು ಶ್ರೀ ಲಕ್ಷ್ಮೀ ವೆಂಕಟೇಶ್ವರಸ್ವಾಮಿಯವರ ದಿವ್ಯ ಬ್ರಹ್ಮರಥೋತ್ಸವವನ್ನು ಇದೇ ಜು. 24 ರಿಂದ 29ರ ವರೆಗೆ ಆಯೋಜಿಸಲಾಗಿದೆ.

ಜು. 26ರ ಭಾನುವಾರ ಮಧ್ಯಾಹ್ನ 12 ಗಂಟೆಯಿಂದ 12.50ರ ವರೆಗೆ ಅಭಿಜಿನ್ ಮುಹೂರ್ತದಲ್ಲಿ ಬ್ರಹ್ಮ ರಥೋತ್ಸವವನ್ನು ಏರ್ಪಡಿಸಲಾಗಿದೆ.

ರಾಜ್ಯದ ಮುಖ್ಯಮಂತ್ರಿಗಳಾದ ಡಿ.ಕೆ. ಶಿವಕುಮಾರ್ ಹಾಗೂ ಜಿಲ್ಲಾ ಉಸ್ತುವಾರಿ ಸಚಿವರಾದ ರಾಮಲಿಂಗರೆಡ್ಡಿ ಅವರು ಕಾರ್ಯಕ್ರಮದ ಘನ ಉಪಸ್ಥಿತಿ ವಹಿಸುವರು. ಚನ್ನಪಟ್ಟಣ ವಿಧಾನಸಭಾ ಕ್ಷೇತ್ರದ ಶಾಸಕರಾದ ಸಿ.ಪಿ. ಯೋಗೇಶ್ವರ್ ಅವರು ಅಧ್ಯಕ್ಷತೆ ವಹಿಸುವರು.

ಬೆಂಗಳೂರು ಗ್ರಾಮಾಂತರ ಲೋಕಸಭಾ ಕ್ಷೇತ್ರದ ಸಂಸದರಾದ ಡಾ. ಸಿ.ಎನ್. ಮಂಜುನಾಥ್, ವಿಧಾನಪರಿಷತ್ ಶಾಸಕರಾದ ಎಸ್. ಪುಟ್ಟಣ್ಣ, ಎಸ್. ರವಿ, ಸುಧಾಮ್ ದಾಸ್, ರಾಮೋಜಿ ಗೌಡ, ರಾಜ್ಯ ಗ್ಯಾರಂಟಿ ಯೋಜನೆ ಅನುಷ್ಠಾನ ಸಮಿತಿ ಅಧ್ಯಕ್ಷರಾದ ಎಚ್.ಎಂ. ರೇವಣ್ಣ, ಕರ್ನಾಟಕ ರೇಷ್ಮೆ ಮಾರಾಟ ಮಂಡಳಿ ಅಧ್ಯಕ್ಷರಾದ ಎನ್. ಗಂಗಾಧರ್, ಬೆಂಗಳೂರು ದಕ್ಷಿಣ ಜಿಲ್ಲಾ ಗ್ಯಾರಂಟಿ ಯೋಜನೆ ಅನುಷ್ಠಾನ ಸಮಿತಿ ಅಧ್ಯಕ್ಷರಾದ ಕೆ. ರಾಜು, ಬಿ.ಎಂ.ಐ.ಸಿ.ಪಿ.ಎ ಅಧ್ಯಕ್ಷರಾದ ರಘುನಂದನ್ ರಾಮಣ್ಣ, ಚನ್ನಪಟ್ಟಣ ತಾಲ್ಲೂಕು ಗ್ಯಾರಂಟಿ ಯೋಜನೆ ಅನುಷ್ಠಾನ ಪ್ರಾಧಿಕಾರದ ಅಧ್ಯಕ್ಷರಾದ ರಂಗನಾಥ್, ಬಿ.ಎಂ. ನಾಗೇಶ್ ಹಾಗೂ ಚನ್ನಪಟ್ಟಣ ಯೋಜನಾ ಪ್ರಾಧಿಕಾರದ ಅಧ್ಯಕ್ಷರಾದ ಎಸ್.ಆರ್. ಪ್ರಮೋದ್ ಮುಖ್ಯ ಅತಿಥಿಗಳಾಗಿ ಭಾಗವಹಿಸುವರು.

## ಶಾಲಾ ಸಂಸತ್ ಚುನಾವಣೆ ಯಶಸ್ವಿ

ಚಿಕ್ಕಬಳ್ಳಾಪುರ

ತಾಲ್ಲೂಕಿನ ಚಿಕ್ಕಬಳ್ಳಾಪುರ ಗ್ರಾಮಾಂತರ ಕ್ಲಸ್ಟರ್‌ನ ಅಂಕಣಗೊಂದಿ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಯಲ್ಲಿ 2026–27ನೇ ಶೈಕ್ಷಣಿಕ ಸಾಲಿನ ಶಾಲಾ ಸಂಸತ್ ಚುನಾವಣೆ ಯಶಸ್ವಿಯಾಗಿ ನಡೆಯಿತು.

ನಾಮಪತ್ರ ಸಲ್ಲಿಕೆ, ಅಭ್ಯರ್ಥಿಗಳ ಚುನಾವಣಾ ಪ್ರಚಾರ, ಮತದಾರರ ಪಟ್ಟಿ, ಗುಪ್ತ ಮತದಾನ, ಮತಪತ್ರ ವಿತರಣೆ, ಬೆರಳಿಗೆ ಶಾಯಿ, ಮತ ಎಣಿಕೆ, ಫಲಿತಾಂಶ ಪ್ರಕಟಣೆ, ಮುಖ್ಯಮಂತ್ರಿ ಹಾಗೂ ಸಚಿವ ಸಂಪುಟ ರಚನೆ. ಎಲ್ಲವೂ ನೈಜ ವಿಧಾನಸಭೆ ಮತ್ತು ಲೋಕಸಭೆ ಚುನಾವಣೆ ಮಾದರಿಯಲ್ಲಿ ಚುನಾವಣೆ ನಡೆದಿದ್ದು ಈ ಶಾಲೆಯ ವಿಶೇಷವಾಗಿತ್ತು.

ವಿದ್ಯಾರ್ಥಿಗಳಲ್ಲಿ ಪ್ರಜಾಪ್ರಭುತ್ವದ ಮೌಲ್ಯ, ನಾಯಕತ್ವದ ಗುಣ, ಜವಾಬ್ದಾರಿಯುತ ನಾಗರಿಕ ಪ್ರಜ್ಞೆ ಹಾಗೂ ಸಂಘಟನಾ ಕೌಶಲ ಬೆಳೆಸುವ ಉದ್ದೇಶದಿಂದ ಈ ಚುನಾವಣಾ ಪ್ರಕ್ರಿಯೆಯನ್ನು ಶಾಲೆಯ ಶಿಕ್ಷಕರು ಅತ್ಯಂತ ವ್ಯವಸ್ಥಿತವಾಗಿ ಆಯೋಜನೆ ಮಾಡಿದ್ದರು.

ಬಳಿಕ ಮುಖ್ಯ ಶಿಕ್ಷಕಿ ಇಂದಿರಾ ಅವರು ಮಾತನಾಡಿ, ವಿದ್ಯಾರ್ಥಿಗಳಲ್ಲಿ ಪ್ರಜಾಸತ್ತಾತ್ಮಕ ಮೌಲ್ಯಗಳು, ನಾಯಕತ್ವದ ಗುಣಗಳು ಮತ್ತು ಚುನಾವಣಾ ಪ್ರಕ್ರಿಯೆಯ ಬಗ್ಗೆ ಅರಿವು ಮೂಡಿಸಲು ಶಾಲಾ ಸಂಸತ್ ಚುನಾವಣೆ ಮಕ್ಕಳಲ್ಲಿ ಪೂರಕ ವಾತಾವರಣ ನಿರ್ಮಾಣ ಮಾಡಲಿದೆ, ಈ ಸಲುವಾಗಿ ಅಂಕಣಗೊಂದಿ ಸರ್ಕಾರಿ ಹಿರಿಯ




ಪ್ರಾಥಮಿಕ ಶಾಲೆಯಲ್ಲಿ “ಶಾಲಾ ಅಣಕು ಚುನಾವಣೆ ನಡೆಸಿ ವಿದ್ಯಾರ್ಥಿಗಳಿಗೆ ನಾಯಕರನ್ನು ಆಯ್ಕೆ ಮಾಡುವ ಹಕ್ಕನ್ನು ಪರಿಚಯಿಸುತ್ತ ಸಂಸತ್ತಿನ ರಚನೆ ಮತ್ತು ಪ್ರಕ್ರಿಯೆಯ ಹಂತಗಳನ್ನು ವಿದ್ಯಾರ್ಥಿಗಳಿಗೆ ತಿಳಿಸಿಕೊಡಲಾಯಿತು ಎಂದರು.

ಅಣಕು ಶಾಲಾ ಸಂಸತ್ ಚುನಾವಣೆಯ ಮತ ಎಣಿಕೆಯ ನಂತರ ವಿಜೇತರನ್ನು ಘೋಷಿಸಿ, ನಾಯಕತ್ವದ ಜವಾಬ್ದಾರಿಯನ್ನು ವಹಿಸಿಕೊಡಲಾಯಿತು. ಅದರಂತೆ ಇಡೀ ಶಾಲೆಯನ್ನು ಪ್ರತಿನಿಧಿಸುವ ಮುಖ್ಯಮಂತ್ರಿಯಾಗಿ ನಿಖಿಲ್ ಕುಮಾರ್, ಉಪಮುಖ್ಯಮಂತ್ರಿ ಎನ್.ಪವನ್ ನೂತನವಾಗಿ ಆಯ್ಕೆಯಾದರೆ ಕ್ರಮವಾಗಿ ಗ್ರಂಥಾಲಯ ಎನ್.ಹೇಮಂತ್, ಹಣಕಾಸು ಕೃತಿಕ, ತೋಟಗಾರಿಕೆ ಮನೋಜ್ ಎನ್, ಶಿಕ್ಷಣ ಅಶ್ವಿನಿ ಎಂ., ರಕ್ಷಣಾ ಮಂತ್ರಿ ಲೋಕೇಶ್, ಆರೋಗ್ಯ ಪೃಥ್ವಿನ್, ಕ್ರೀಡೆ ನಂದನ್ ಎನ್, ಸಾಂಸ್ಕೃತಿಕ ಮಂತ್ರಿ ಎ.ಅರ್ಚನಾ, ಅಕ್ಷರ ದಾಸೋಹ ಮಂತ್ರಿ ಕೌಶಿಕ್ ಎಂ, ಸ್ವಚ್ಛತಾ ಮಂತ್ರಿಗಳಾಗಿ ಪ್ರತಿಭಾ ನಿರ್ವಹಣಾ ಮಂತ್ರಿಯಾಗಿ ಕೃತಿಕ ಆರ್ ಕೆ ಸಂಸತ್ ಅಣುಕು ಚುನಾವಣೆಯಲ್ಲಿ ನೂತನವಾಗಿ ಆಯ್ಕೆಯಾದರು.

ಚುನಾವಣೆ ಕಾರ್ಯದಲ್ಲಿ ಎಸ್‌ಡಿಎಂಸಿ ಅಧ್ಯಕ್ಷರಾದ ಎ ಎಸ್.ಮುನಿರಾಜು, ಉಪಾಧ್ಯಕ್ಷರಾದ ಆರ್. ರವಿ ಅವರು ಮೈಕ್ರೋ ಅಬ್ಸರ್ ವರ್ ಗಳಾಗಿ ಕಾರ್ಯ ನಿರ್ವಹಿಸಿದರೆ ಚುನಾವಣಾಧಿಕಾರಿಗಳಾಗಿ ಮುಖ್ಯ ಶಿಕ್ಷಕಿ ಇಂದಿರಾ ಸಹ ಶಿಕ್ಷಕರಾದ ಡಿ. ಎಂ.ಶ್ರೀರಾಮ್, ಎಂ.ಮಂಜುಳ, ರಾಘವೇಂದ್ರ, ಅವರು ಕಾರ್ಯ ನಿರ್ವಹಿಸಿದರು.

## ಕೇಂದ್ರ ಸಚಿವ ಧರ್ಮೇಂದ್ರ ಪ್ರಧಾನ್ ರಾಜೀನಾಮೆಗೆ ಒತ್ತಾಯ



ಮಾಲೂರು

ನೀಟ್ ಪರೀಕ್ಷಾ ಪ್ರಶ್ನೆ ಪತ್ರಿಕೆ ಸೋರಿಕೆ ಪ್ರಕರಣಕ್ಕೆ ಸಂಬಂಧಿಸಿದಂತೆ ‘ಕರ್ನಾಟಕ ದಲಿತ ಸಂಘರ್ಷ ಸಮಿತಿ (ರಿ.) ಮಾಲೂರು ತಾಲೂಕು ಶಾಖೆಯ ಸಂಚಾಲಕ ಎಸ್.ಎಂ.ವೆಂಕಟೇಶ್ ಮತ್ತು ಪದಾಧಿಕಾರಿಗಳು, ಗ್ರೇಡ್ 2 ತಹಶೀಲ್ದಾರ್ ಮೂಲಕ ರಾಷ್ಟ್ರಪತಿ ದ್ರೌಪದಿ ಮುರ್ಮು ಅವರಿಗೆ ಮನವಿ ಸಲ್ಲಿಸಿದರು.

ಈ ಸಂದರ್ಭದಲ್ಲಿ ಸಂಚಾಲಕ ಎಸ್.ಎಂ.ವೆಂಕಟೇಶ್ ಮಾತನಾಡಿ, ದ್ವಿತೀಯ ಪಿಯುಸಿ ಉತ್ತೀರ್ಣರಾಗಿ ವೈದ್ಯರಾಗುವ ಕನಸು ಕಂಡಿದ್ದ ವಿದ್ಯಾರ್ಥಿಗಳ ಭವಿಷ್ಯದ ಜೊತೆಗೆ ಚೆಲ್ಲಾಟವಾಡಿ ನೀಟ್ ಪ್ರಶ್ನೆ ಪತ್ರಿಕೆ ಸೋರಿಕೆ ಪ್ರಕರಣದಲ್ಲಿ ಕೇಂದ್ರ ಸರ್ಕಾರದ ಪಾತ್ರವಿರುವುದು ಮೇಲ್ನೋಟಕ್ಕೆ ಕಂಡುಬರುತ್ತಿದೆ ಎಂದು ಆರೋಪಿಸಿರುವ ಸಂಘಟನೆಯು, ಕೇಂದ್ರ ಶಿಕ್ಷಣ ಸಚಿವ ಧರ್ಮೇಂದ್ರ ಪ್ರಧಾನ್ ಅವರನ್ನು ಕೂಡಲೇ ಸಂಪುಟದಿಂದ ವಜಾಗೊಳಿಸಬೇಕೆಂದು ಒತ್ತಾಯಿಸಿದೆ.

ಪ್ರಶ್ನೆ ಪತ್ರಿಕೆ ಸೋರಿಕೆಯಿಂದಾಗಿ ದೇಶಾದ್ಯಂತ 20 ವಿದ್ಯಾರ್ಥಿಗಳು ಆತ್ಮಹತ್ಯೆ ಮಾಡಿಕೊಂಡಿದ್ದರೂ, ಕೇಂದ್ರ ಸರ್ಕಾರ ಮೌನ ವಹಿಸಿರುವುದು ಖಂಡನೀಯ ಎಂದು ಸಂಘಟನೆ ಆಕ್ರೋಶ ವ್ಯಕ್ತಪಡಿಸಿದೆ.

ನೀಟ್ ಹಗರಣವನ್ನು ಸುಪ್ರೀಂ ಕೋರ್ಟ್‌ನ ನಿವೃತ್ತ ನ್ಯಾಯಮೂರ್ತಿಗಳ ನೇತೃತ್ವದಲ್ಲಿ ತನಿಖೆ ನಡೆಸಬೇಕು ಮತ್ತು ತಪ್ಪಿತಸ್ಥರ ಮೇಲೆ ಕಠಿಣ ಕಾನೂನು ಕ್ರಮ ಕೈಗೊಳ್ಳಬೇಕು ನೀಟ್ ಅಕ್ರಮದ ವಿರುದ್ಧ ಉಪವಾಸ ಸತ್ಯಾಗ್ರಹ ನಡೆಸುತ್ತಿರುವ ಸಾಮಾಜಿಕ ಕಾರ್ಯಕರ್ತರ ಆರೋಗ್ಯ ಹದಗೆಡುತ್ತಿದ್ದು, ಅವರಿಗೆ ಏನಾದರೂ ತೊಂದರೆಯಾದರೆ ಕೇಂದ್ರ ಸರ್ಕಾರವೇ ನೇರ ಹೊಣೆ ಎಂದು ಸಮಿತಿ ಎಚ್ಚರಿಸಿದೆ.


ಸಂಘಟಕರಾದ ಡಿ.ಏನ್.ನಾರಾಯಣಸ್ವಾಮಿ, ಅಮರೇಶ್, ಎ.ಎಸ್.ನಾರಾಯಣಸ್ವಾಮಿ, ನಾಯ್ಡು, ಮುನಿರಾಜ್, ಯಶವಂತಪುರ ಮುನಿರಾಜ್, ಮೂಲನಿವಾಸಿ ತಿಮ್ಮರಾಯಪ್ಪ ಇನ್ನಿತರರು ಹಾಜರಿದ್ದರು.

## ‘ಅಂತರರಾಷ್ಟ್ರೀಯ ವಿಮಾನ ನಿಲ್ದಾಣ ಸ್ಥಾಪನೆಗೆ ತುಮಕೂರು ಜಿಲ್ಲೆ ಸೂಕ್ತ’

ತುಮಕೂರು

ರಾಜ್ಯದ ಎರಡನೇ ಅಂತರರಾಷ್ಟ್ರೀಯ ವಿಮಾನ ನಿಲ್ದಾಣ ಸ್ಥಾಪನೆಗೆ ಬೆಂಗಳೂರಿಗೆ ಸಮೀಪವಿರುವ ತುಮಕೂರು ಜಿಲ್ಲೆ ಅತ್ಯಂತ ಸೂಕ್ತ ಸ್ಥಳವಾಗಿದ್ದು ಆದ್ಯತೆಯಾಗಿ ಪರಿಗಣಿಸಬೇಕು ಎಂದು ಜಿಲ್ಲಾ ವಾಣಿಜ್ಯ ಮತ್ತು ಕೈಗಾರಿಕಾ ಮಂಡಳಿ ಹಾಗೂ ಅದರ ಅಂಗ ಸಂಸ್ಥೆಗಳ ಮುಖಂಡರು ರಾಜ್ಯ ಹಾಗೂ ಕೇಂದ್ರ ಸರ್ಕಾರಗಳಿಗೆ ಮನವಿ ಮಾಡಿದರು.

ಜಿಲ್ಲಾ ವಾಣಿಜ್ಯ ಮತ್ತು ಕೈಗಾರಿಕಾ ಸಂಸ್ಥೆ ಅಧ್ಯಕ್ಷ ಪಾಂಡುರಂಗ ಕುರಂದವಾಡ ಅವರು ನಗರದಲ್ಲಿ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿ, ರಾಜ್ಯದಲ್ಲಿ ವೇಗವಾಗಿ ಬೆಳೆಯುತ್ತಿರುವ ವಿಮಾನಯಾನ, ಕೈಗಾರಿಕಾ, ವಾಣಿಜ್ಯ ಹಾಗೂ ಪ್ರಯಾಣಿಕರ ಅವಶ್ಯಕತೆಗಳನ್ನು ಪೂರೈಸಲು ಎರಡನೇ ಅಂತರರಾಷ್ಟ್ರೀಯ ವಿಮಾನ ನಿಲ್ದಾಣ ಸ್ಥಾಪಿಸುವ ಸರ್ಕಾರದ ದೂರದೃಷ್ಟಿಯ ನಿರ್ಧಾರ ಸ್ವಾಗತಾರ್ಹ. ಈ ಮಹತ್ವಾಕಾಂಕ್ಷೆಯ ಮೂಲಸೌಕರ್ಯ ಯೋಜನೆಗೆ ಆಯ್ಕೆಯಾಗುವ ಸ್ಥಳವು ಮುಂದಿನ ಹಲವು ದಶಕಗಳ ಕಾಲ ಕರ್ನಾಟಕದ ಆರ್ಥಿಕ ಬೆಳವಣಿಗೆ, ಕೈಗಾರಿಕಾ ಅಭಿವೃದ್ಧಿ ಮತ್ತು ಸಂಪರ್ಕ ವ್ಯವಸ್ಥೆಯನ್ನು



ನಿರ್ಧರಿಸಲಿದೆ. ದೀರ್ಘಾವಧಿಯ ರಾಜ್ಯಾಭಿವೃದ್ಧಿಗೆ ಮಹತ್ವದ ಈ ಯೋಜನೆಗೆ ತುಮಕೂರು ಜಿಲ್ಲೆ ವಿಶಿಷ್ಟವಾದ ಕಾರ್ಯತಂತ್ರದ ಅನುಕೂಲಗಳನ್ನು ಹೊಂದಿದೆ ಎಂದು ಹೇಳಿದರು.

**2,000 ಎಕರೆಗೂ ಅಧಿಕ ಸರ್ಕಾರ ಭೂಮಿ ಲಭ್ಯ:**

ಟಿಡಿಸಿಸಿಐ ಮಾಜಿ ಅಧ್ಯಕ್ಷ ಸುಜ್ಞಾನ ಹಿರೇಮಠ್ ಮಾತನಾಡಿ, ರಾಷ್ಟ್ರೀಯ ಹೂಡಿಕೆ ಮತು ಉತ್ಪಾದನಾ (ನಿಮ್ಜ್) ಪ್ರದೇಶದಲ್ಲಿ ಈಗಾಗಲೇ 2,000 ಎಕರೆಗೂ ಅಧಿಕ ನಿರಂತರ ಸರ್ಕಾರ ಭೂಮಿ ಲಭ್ಯವಿದೆ. ಇದರಿಂದ ಭೂಸ್ವಾಧೀನದ ಅಗತ್ಯವು ಬಹುತೇಕ ಇಲ್ಲದಂತಾಗುತ್ತದೆ. ಪುನರ್ವಸತಿ ಸಮಸ್ಯೆಗಳು, ನ್ಯಾಯಾಂಗ ವ್ಯಾಜ್ಯಗಳ ಹಾಗೂ ಯೋಜನಾ ವಿಳಂಬಗಳು ಕಡಿಮೆಯಾಗುವುದರ ಜೊತೆಗೆ ಸಾರ್ವಜನಿಕ ಹಣದ ಉಳಿತಾಯದೊಂದಿಗೆ ಯೋಜನೆಯನ್ನು ಶೀಘ್ರವಾಗಿ ಅನುಷ್ಠಾನಗೊಳಿಸಲು ಸಾಧ್ಯವಾಗುತ್ತದೆ ಎಂದರು.

ಕರ್ನಾಟಕದ ಮಧ್ಯ, ಉತ್ತರ ಹಾಗೂ ಪಶ್ಚಿಮ ಭಾಗಗಳ 17 ಜಿಲ್ಲೆಗಳಿಗೆ ತುಮಕೂರು ಪ್ರವೇಶ ದ್ವಾರವಾಗಿದೆ. ಆದ್ದರಿಂದ ಈ ವಿಮಾನ ನಿಲ್ದಾಣವು ಬೆಂಗಳೂರು ಮಾತ್ರವಲ್ಲದೆ ರಾಜ್ಯದ ವಿಶಾಲ ಪ್ರದೇಶದ ಜನತೆಗೆ ಹಾಗೂ ಕೈಗಾರಿಕೆಗಳಿಗೆ ಸೇವೆ ಸಲ್ಲಿಸಲಿದೆ. ಇದು ಸಮಗ್ರ ಸಾರಿಗೆ ಮತ್ತು ಲಾಜಿಸ್ಟಿಕ್ಸ್ ಕೇಂದ್ರವಾಗಿ ಬೆಳೆಯಲು ಅತ್ಯಂತ ಅನುಕೂಲಕರವಾಗಿದೆ ಎಂದು ಹೇಳಿದರು.

ಭಾರತದ ಪ್ರಮುಖ ಕೈಗಾರಿಕಾ ಕಾರಿಡಾರ್ ಯೋಜನೆಯಾದ ಚೆನ್ನೈ–ಬೆಂಗಳೂರು ಕೈಗಾರಿಕ ಕಾರಿಡಾರ್‌ನ ಪ್ರಮುಖ ಬೆಳವಣಿಗೆ ಕೇಂದ್ರಗಳಲ್ಲಿ ತುಮಕೂರು ಒಂದಾಗಿದೆ. ಇಲ್ಲಿ ಅಂತರರಾಷ್ಟ್ರೀಯ ವಿಮಾನ ನಿಲ್ದಾಣ ಸ್ಥಾಪನೆಯಾದರೆ ಈ ಕೈಗಾರಿಕಾ ಕಾರಿಡಾರ್ ಇನ್ನಷ್ಟು ಬಲಿಷ್ಠವಾಗುವುದರ ಜೊತೆಗೆ ಕರ್ನಾಟಕ ಉತ್ಪಾದನೆ, ಲಾಜಿಸ್ಟಿಕ್ಸ್ ಹಾಗೂ ರಫ್ತು ವ್ಯವಸ್ಥೆಗೆ ಹೊಸ ವೇಗ ದೊರೆಯಲಿದೆ.
ಕರ್ನಾಟಕದ ಅತಿ ದೊಡ್ಡ ಕೈಗಾರಿಕಾ ಅಭಿವೃದ್ಧಿ ಯೋಜನೆಗಳಲ್ಲಿ ಒಂದಾದ ರಾಷ್ಟ್ರೀಯ ಹೂಡಿಕೆ ಮತ ಉತ್ಪಾದನಾ ವಲಯ ತುಮಕೂರಿನಲ್ಲಿ ಸ್ಥಾಪನೆಯಾಗುತ್ತಿದೆ. ಅಂತರರಾಷ್ಟ್ರೀಯ ವಿಮಾನ ನಿಲ್ದಾಣವು ದೇಶೀಯ ಹಾಗೂ ವಿದೇಶಿ ಹೂಡಿಕೆದಾರರಿಗೆ ವಿಶ್ವಮಟ್ಟದ ಸಂಪರ್ಕವನ್ನು ಒದಗಿಸಿ, ಈ ವಲಯದ ಸ್ಪರ್ಧಾತ್ಮಕತೆಯನ್ನು ಗಣನೀಯವಾಗಿ ಹೆಚ್ಚಿಸಲಿದೆ ಎಂದು ಪಾಂಡುರಂಗ ಕುರಂದವಾಡ ಅಭಿಪ್ರಾಯ ವ್ಯಕ್ತಪಡಿಸಿದರು.

**ಕೈಗಾರಿಕಾ ಹಾಗೂ ಲಾಜಿಸ್ಟಿಕ್ಸ್ ಕೇಂದ್ರ:**

ಟಿಡಿಸಿಸಿಐ ಮಾಜಿ ಅಧ್ಯಕ್ಷ ಟಿ.ಆರ್. ಲೋಕೇಶ್ ಮಾತನಾಡಿ, ತುಮಕೂರು ಕರ್ನಾಟಕದ ಅತ್ಯಂತ ವೇಗವಾಗಿ ಬೆಳೆಯುತ್ತಿರುವ ಕೈಗಾರಿಕಾ ಜಿಲ್ಲೆಗಳಲ್ಲಿ ಒಂದಾಗಿದೆ. ವಿಮಾನ ನಿಲ್ದಾಣದಿಂದ ಉತ್ಪಾದನೆ, ಎಂಜಿನಿಯರಿಂಗ್, ಏರೋಸ್ಪೇಸ್, ಆಹಾರ ಸಂಸ್ಕರಣೆ, ಔಷಧೋದ್ಯಮ, ಎಲೆಕ್ಟ್ರಾನಿಕ್ಸ್ ಗೋದಾಮು, ಲಾಜಿಸ್ಟಿಕ್ಸ್ ಹಾಗೂ ರಫ್ತು ಆಧಾರಿತ ಕೈಗಾರಿಕೆಗಳಿಗೆ ಹೊಸ ಉತ್ತೇಜನ ದೊರೆತು, ಉದ್ಯೋಗಾವಕಾಶಗಳು ಸೃಷ್ಟಿಯಾಗಲಿದೆ.

ಈ ಸಂದರ್ಭದಲ್ಲಿ ಜಿಲ್ಲಾ ವಾಣಿಜ್ಯ ಮತ್ತು ಕೈಗಾರಿಕಾ ಸಂಸ್ಥೆಯ ಮೂಲಸೌಕರ್ಯ ಸಮಿತಿ ಅಧ್ಯಕ್ಷ ಜಿ.ಆರ್. ಸುರೇಶ್, ಸಾಗರನಹಳ್ಳಿ ಪ್ರಭು, ಸುರೇಶ್ ರಾವ್, ವಸಂತನರಸಾಪುರ ಕೈಗಾರಿಕಾ ಪ್ರದೇಶದ ಮಾಜಿ ಅಧ್ಯಕ್ಷ ರಾಮಮೂರ್ತಿ, ಟಿಡಿಸಿಸಿಐ ನಿರ್ದೇಶಕರಾದ ಮಲ್ಲೇಶಯ್ಯ, ಆನಂದಕುಮಾರ್, ರವಿಕುಮಾರ್, ಬಸವರಾಜ ಹಿರೇಮಠ್, ತುಮಕೂರು ರೈಸ್ ಮಿಲ್ ಅಸೋಸಿಯೇಷನ್ ಸದಸ್ಯರು ಭಾಗವಹಿಸಿದ್ದರು.

Printed by gandasi sadananda swamy, published by gandasi sadanandaswamy, owned by gandasi sadananda swamy. Printed at LAVANYA MUDRANA No. 79, TR mill, compound, 5th main 9th corss, Chamarajpet Bangalore-560018, published at No.531, prakruthi nilaya, kalikanagar, Andrahalli, Vishwaneedam Post, Bangalore-560091. Editor: Gandasi sadanandaswamy